VOLUME: 16 | 28 APRIL 2026 | ಮಂಗಳವಾರ | RS: 2 | PAGE: 06 ISSUE: 82 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ರುಕ್ಮಿಣಿ ವಸಂತ್, 'ಕಾಂತಾರ: ಚಾಪ್ಟರ್ 1' ಮೂಲಕ ದೇಶಾದ್ಯಂತ ಜನಪ್ರಿಯರಾದವರು. ಅವರ ಇನ್‌ಸ್ಟಾಗ್ರಾಮ್ ಬಯೋ "Rukmini, you weren't born for real life" ಕುರಿತು ನಾನಾ ಅರ್ಥ ಕಲ್ಪಿಸಲಾಗಿತ್ತು. ಆದರೆ ಇತ್ತೀಚೆಗೆ ರುಕ್ಮಿಣಿ ಅವರು, ಇದಕ್ಕೆ ಆಳವಾದ ಅರ್ಥವಿಲ್ಲ, ಕೇವಲ ತಮ್ಮ ರೂಮ್ ಕ್ಲೀನ್ ಮಾಡಿಕೊಳ್ಳುವ ನೆನಪಷ್ಟೇ ಎಂದು ಸ್ಪಷ್ಟಪಡಿಸಿದ್ದಾರೆ. ಜನರು ಊಹಿಸಿದ ಗಂಭೀರ ವ್ಯಾಖ್ಯಾನಗಳಿಗೆ ತಮಾಷೆಯ ತಿರುವು ನೀಡಿದ್ದಾರೆ.



BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಸಂಬಳ ಬಾಕಿ ಇದ್ದರಿಂದ ಸಿಸಿ ಟಿವಿ ಕೇಬಲ್ ಕಟ್..!

ಬೆಂಗಳೂರು: ಆರ್‌ಸಿಬಿ ಹಾಗೂ ಗುಜರಾತ್ ಟೈಟನ್ಸ್ ನಡುವಿನ ಪಂದ್ಯದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ 240ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮರಾಗಳ ಕೇಬಲ್ ಕಟ್ ಆಗಿರುವುದು ಪೊಲೀಸರಲ್ಲಿ ದೊಡ್ಡ ಆತಂಕ ಮೂಡಿಸಿತ್ತು.

ಇದು ಯಾವುದೋ ವಿಧ್ವಂಸಕ ಕೃತ್ಯವಿರಬಹುದು ಎಂಬ ಅನುಮಾನದಲ್ಲಿ ತನಿಖೆ ಕೈಗೊಂಡಿದ್ದ ಕಬ್ಬನ್ ಪಾರ್ಕ್ ಪೊಲೀಸರಿಗೆ ಈಗ ತೀರಾ ವೈಯಕ್ತಿಕ ಮತ್ತು ವಿಚಿತ್ರ ಕಾರಣವೊಂದು ತಿಳಿದುಬಂದಿದೆ.

ಕ್ರೀಡಾಂಗಣದ ಭದ್ರತೆಗಾಗಿ ಅಳವಡಿಸಲಾಗಿದ್ದ ಸಿಸಿಟಿವಿ ನಿರ್ವಹಣೆಯ ಹೊಣೆಯನ್ನು 'ಡಿಜಿಟಲ್ ಸೊಲ್ಯೂಷನ್' ಎಂಬ ಕಂಪನಿಗೆ ಸಬ್ ಕಾಂಟ್ರ್ಯಾಕ್ಟ್ ನೀಡಲಾಗಿತ್ತು. ಈ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದ ಮಂಜುನಾಥ್ ಹಾಗೂ ಅಬ್ದುಲ್ ಕಲಾಂ ಎಂಬುವವರು ಈ ಕೃತ್ಯ ಎಸಗಿದ್ದಾರೆ ಎಂಬುದು ಪೊಲೀಸರ ವಿಚಾರಣೆಯಿಂದ ದೃಢಪಟ್ಟಿದೆ.

ಆರೋಪಿಗಳಿಬ್ಬರಿಗೂ ಕಂಪನಿಯಿಂದ ಬರಬೇಕಿದ್ದ ಸಂಬಳ ಬಾಕಿ ಇತ್ತು. ಎಷ್ಟು ಕೇಳಿದರೂ ಕಂಪನಿ ಸಂಬಳ ನೀಡದಿದ್ದಕ್ಕೆ ಕೋಪಗೊಂಡಿದ್ದ ಈ ಸಿಬ್ಬಂದಿಗಳು, ಸಂಸ್ಥೆಗೆ ಮತ್ತು ಪೊಲೀಸರಿಗೆ ಪಾಠ ಕಲಿಸಲು ನಿರ್ಧರಿಸಿ ಸಿಸಿಟಿವಿ ಕೇಬಲ್‌ಗಳನ್ನು ಕತ್ತರಿಸಿದ್ದರು!

ಪಂದ್ಯದ ವೇಳೆ ಭದ್ರತೆ ಎಷ್ಟು ಮುಖ್ಯವೋ ಈ ಆರೋಪಿಗಳಿಗೆ ಚೆನ್ನಾಗಿ ತಿಳಿದಿತ್ತು. ಹಾಗಾಗಿ, ಯಾರಿಗೂ ಅನುಮಾನ ಬಾರದಂತೆ ಹೋಗಿ ಪ್ರಮುಖ ಕೇಬಲ್‌ಗಳನ್ನೇ ಕಟ್ ಮಾಡಿದ್ದರು. ಪಂದ್ಯದ ಸಂಜೆಯ ಹೊತ್ತಿಗೆ ಸಿಸಿಟಿವಿ ಫೀಡ್ ಸ್ಥಗಿತಗೊಂಡಾಗ ಪೊಲೀಸರು ಹಾಗೂ ಭದ್ರತಾ ಸಿಬ್ಬಂದಿ ಕಂಗಾಲಾಗಿದ್ದರು. ಸಿಸಿಟಿವಿ ನಿಯಂತ್ರಣ ಕೊಠಡಿಯಲ್ಲಿದ್ದ ಪೊಲೀಸರು ತಪಾಸಣೆ ನಡೆಸಿದಾಗ ಕೇಬಲ್ ಕಟ್ ಆಗಿರುವುದು ಪತ್ತೆಯಾಗಿತ್ತು. ನಂತರ ಕಾರ್ಯಾಚರಣೆ ನಡೆಸಿದ ಪೊಲೀಸರು ತಾಂತ್ರಿಕ ಆಧಾರದ ಮೇಲೆ ಮಂಜುನಾಥ್ ಮತ್ತು ಅಬ್ದುಲ್ ಕಲಾಂನನ್ನು ಈ ಕೃತ್ಯ ಎಸಗಿದ್ದರು.

ಪಂದ್ಯದ ದಿನವೇ ಸಿಸಿಟಿವಿಗಳು ಆಫ್ ಆಗಿದ್ದರಿಂದ ಭದ್ರತಾ ವ್ಯವಸ್ಥೆ ಬಗ್ಗೆ ಭಾರಿ ಆತಂಕ ವ್ಯಕ್ತವಾಗಿತ್ತು. ವಿಷಯ ತಿಳಿಯುತ್ತಿದ್ದಂತೆಯೇ ಎಚ್ಚೆತ್ತ ಪೊಲೀಸರು, ತಕ್ಷಣ ಮೇಲಾಧಿಕಾರಿಗಳಿಗೆ ಮಾಹಿತಿ ನೀಡಿ ಬದಲಿ ತಾಂತ್ರಿಕ ವ್ಯವಸ್ಥೆ ಮಾಡಿದ್ದರು. ಭದ್ರತಾ ಲೋಪದ ನಡುವೆಯೂ ಪೊಲೀಸರು ಸಮಯಪ್ರಜ್ಞೆಯಿಂದ ಕಾರ್ಯನಿರ್ವಹಿಸಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪರಿಸ್ಥಿತಿ ನಿಭಾಯಿಸಿದ್ದರು. ಸಿಸಿಟಿವಿ ನಿಯಂತ್ರಣ ಕೊಠಡಿಯಲ್ಲಿದ್ದ ಪೊಲೀಸರು ತಪಾಸಣೆ ನಡೆಸಿದಾಗ ಕೇಬಲ್ ಕಟ್ ಆಗಿರುವುದು ಪತ್ತೆಯಾಗಿತ್ತು. ನಂತರ ಕಾರ್ಯಾಚರಣೆ ನಡೆಸಿದ ಪೊಲೀಸರು ತಾಂತ್ರಿಕ ಆಧಾರದ ಮೇಲೆ ಮಂಜುನಾಥ್ ಮತ್ತು ಅಬ್ದುಲ್ ಕಲಾಂನನ್ನು ಬಂಧಿಸಿದ್ದಾರೆ.

## ರಾಜ್‌ನಾಥ್ ಸಿಂಗ್ ಮುಂದಿನ ರಾಷ್ಟ್ರಪತಿ..?

ಬೆಂಗಳೂರು: ರಕ್ಷಣಾ ಸಚಿವ ರಾಜನಾಥ್ ಸಿಂಗ್ ದೇಶದ ಮುಂದಿನ ರಾಷ್ಟ್ರಪತಿ ಆಗಲಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿವೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಜೂನ್ 2027 ರಲ್ಲಿ ಭಾರತದ ರಾಷ್ಟ್ರಪತಿಯಾಗಿ ಬಡ್ತಿ ನೀಡಲಾಗುವುದು ಎಂಬ ಗುಸುಗುಸು ಉತ್ತರ ಪ್ರದೇಶ ಬಿಜೆಪಿಯ ಪ್ರಬಲ ನಾಯಕರ ಗುಂಪಿನಲ್ಲಿ ಕೇಳಿಬರುತ್ತಿದೆ.

ಅಲ್ಲದೇ ರಾಷ್ಟ್ರಪತಿ ಭವನಕ್ಕೆ ರಾಜನಾಥ್ ಸಿಂಗ್ ಹೆಸರನ್ನು ಶಿಫಾರಸು ಮಾಡಲು ಆರ್ ಎಸ್ ಎಸ್ ಕೂಡಾ ಹೆಚ್ಚಿನ ಆಸಕ್ತಿ ವಹಿಸಿದೆ.

2027 ರ ಉತ್ತರ ಪ್ರದೇಶ ವಿಧಾನಸಭಾ ಚುನಾವಣೆಯನ್ನು ಯೋಗಿ ಆದಿತ್ಯನಾಥ್ ನೇತೃತ್ವದಲ್ಲಿ ಎದುರಿಸಲಾಗುವುದು ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಘೋಷಿಸಿದ್ದರಿಂದ ಬ್ರಾಹ್ಮಣ ನಾಯಕರು ಅಸಮಾಧಾನಗೊಂಡಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಪಂಕಜ್ ಚೌಧರಿ ಈಗಾಗಲೇ ತಮ್ಮ ರಾಜೀನಾಮೆಯನ್ನು ಕಳುಹಿಸಿದ್ದು, ಅದು ಜೂನ್ ಒಳಗೆ ಅಂಗೀಕಾರವಾಗುವ ಸಾಧ್ಯತೆಯಿದೆ. ಹೀಗಾಗಿ ಪಕ್ಷದ ವಿರುದ್ಧ ಬ್ರಾಹ್ಮಣರ ಅಸಮಾಧಾನ ಸ್ಫೋಟಗೊಳ್ಳದಂತೆ ತಡೆಯಲು ಅವರ ಮನವೊಲಿಕೆ ಹಿನ್ನೆಲೆಯಲ್ಲಿ ರಾಜನಾಥ್ ಸಿಂಗ್ ಅವರನ್ನು ರಾಷ್ಟ್ರಪತಿಯನ್ನಾಗಿ ನೇಮಕ ಮಾಡಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

ಈ ರೀತಿ ಪೈಪ್‌ಲೈನ್‌ಗಳು ಸ್ಫೋಟಗೊಂಡರೆ ಅಥವಾ ಹಾನಿಗೊಳಗಾದರೆ ಅದನ್ನು ಮೊದಲಿನ ಸ್ಥಿತಿಗೆ ತರಲು ಸಾಧ್ಯವಿಲ್ಲ. ಇರಾನ್ ತನ್ನ ಒಟ್ಟು ತೈಲ ಉತ್ಪಾದನಾ ಸಾಮರ್ಥ್ಯದ ಶೇ. 50 ರಷ್ಟು ಭಾಗವನ್ನು ಶಾಶ್ವತವಾಗಿ ಕಳೆದುಕೊಳ್ಳಬಹುದು ಎಂದು ತಿಳಿಸಿದರು. ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಪಾಕಿಸ್ತಾನದ ಮೂಲಕ ಹೊಸ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ. ಅಮೆರಿಕ ತನ್ನ ಆರ್ಥಿಕ ದಿಗ್ಬಂಧನವನ್ನು ಹಿಂತೆಗೆದುಕೊಂಡರೆ, ಜಾಗತಿಕ ತೈಲ ಸಾಗಣೆಗೆ ಪ್ರಮುಖವಾಗಿರುವ ಹಾರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸುವುದಾಗಿ ಇರಾನ್ ಹೇಳಿದೆ.

# ಮತ್ತೆ ಡೆಡ್‌ಲೈನ್‌ಕೊಟ್ಟ ಟ್ರಂಪ್

ವಾಷಿಂಗ್ಟನ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್‌ಗೆ ಹೊಸ ಎಚ್ಚರಿಕೆ ನೀಡಿದ್ದು, ಕದನ ವಿರಾಮಕ್ಕೆ ಒಪ್ಪಿಕೊಳ್ಳಲು ಮೂರು ದಿನಗಳ ಕಾಲಾವಕಾಶ ನೀಡಿದ್ದಾರೆ.

ಫಾಕ್ಸ್ ನ್ಯೂಸ್ ಚಾನೆಲ್‌ಗೆ ನೀಡಿದ ಸಂದರ್ಶನದಲ್ಲಿ ಟ್ರಂಪ್ ಅವರು, ಒಂದು ವೇಳೆ ಇರಾನ್ ತೈಲ ರಫ್ತು ಮಾಡಲು ಸಾಧ್ಯವಾಗದಿದ್ದರೆ, ತೈಲ ಸಂಗ್ರಹಣಾ ಸಾಮರ್ಥ್ಯ ಮೀರಿ ಪೈಪ್‌ಲೈನ್‌ಗಳ ಒಳಗೆ ಒತ್ತಡ ಹೆಚ್ಚಾಗಲಿದೆ. ಇದರಿಂದಾಗಿ ಪೈಪ್‌ಲೈನ್‌ಗಳು "ಒಳಗಿನಿಂದಲೇ ಸ್ಫೋಟಗೊಳ್ಳಲಿವೆ" ಎಂದು ಅವರು ಎಚ್ಚರಿಸಿದ್ದಾರೆ.ಅಮೆರಿಕದ ನೌಕಾಪಡೆಯು ಇರಾನ್‌ನ ಬಂದರುಗಳನ್ನು ಸಂಪೂರ್ಣವಾಗಿ ದಿಗ್ಬಂಧನ ಮಾಡಿದ್ದರಿಂದ ಇರಾನ್‌ಗೆ ತನ್ನ ತೈಲವನ್ನು ರಫ್ತು ಮಾಡಲು ಸಾಧ್ಯವಾಗುತ್ತಿಲ್ಲ. ತೈಲ ಹರಿವು ನಿಂತರೆ, ಪೈಪ್‌ಲೈನ್‌ಗಳಲ್ಲಿ ಅತಿಯಾದ ಒತ್ತಡ ಉಂಟಾಗಿ ಅವು ಯಾಂತ್ರಿಕವಾಗಿ ಮತ್ತು ತಾಂತ್ರಿಕವಾಗಿ ಹಾನಿಗೊಳಗಾಗುತ್ತವೆ ಎಂದು ಟ್ರಂಪ್ ಹೇಳಿದ್ದಾರೆ.

ಈ ರೀತಿ ಪೈಪ್‌ಲೈನ್‌ಗಳು ಸ್ಫೋಟಗೊಂಡರೆ ಅಥವಾ ಹಾನಿಗೊಳಗಾದರೆ ಅದನ್ನು ಮೊದಲಿನ ಸ್ಥಿತಿಗೆ ತರಲು ಸಾಧ್ಯವಿಲ್ಲ. ಇರಾನ್ ತನ್ನ ಒಟ್ಟು ತೈಲ ಉತ್ಪಾದನಾ ಸಾಮರ್ಥ್ಯದ ಶೇ. 50 ರಷ್ಟು ಭಾಗವನ್ನು ಶಾಶ್ವತವಾಗಿ ಕಳೆದುಕೊಳ್ಳಬಹುದು ಎಂದು ತಿಳಿಸಿದರು.



ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಪಾಕಿಸ್ತಾನದ ಮೂಲಕ ಹೊಸ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ.

ಅಮೆರಿಕ ತನ್ನ ಆರ್ಥಿಕ ದಿಗ್ಬಂಧನವನ್ನು ಹಿಂತೆಗೆದುಕೊಂಡರೆ, ಜಾಗತಿಕ ತೈಲ ಸಾಗಣೆಗೆ ಪ್ರಮುಖವಾಗಿರುವ ಹಾರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸುವುದಾಗಿ ಇರಾನ್ ಹೇಳಿದೆ.

ಟ್ರಂಪ್ ಅವರು ಅಮೆರಿಕದ ನಿಯಮಗಳಿಗೆ ಒಪ್ಪದಿದ್ದರೆ ಈ ಯಾವುದೇ ಪ್ರಸ್ತಾವನೆಗಳು ಕೆಲಸ ಮಾಡುವುದಿಲ್ಲ ಎಂಬ ಕಠಿಣ ನಿಲುವು ಹೊಂದಿದ್ದಾರೆ.

ಇರಾನ್ ತನ್ನ ದೇಶದಲ್ಲಿ ನಡೆಸುತ್ತಿರುವ ಯುರೇನಿಯಂ ಪುಷ್ಟೀಕರಣ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಲ್ಲಿಸಬೇಕು.

ಇರಾನ್ ಬಳಿ ಇರುವ ಸುಮಾರು 440 ಕೆಜಿಗಿಂತ ಹೆಚ್ಚು ಪ್ರಮಾಣದ ಶೇ.60 ರಷ್ಟು ಪುಷ್ಟೀಕರಿಸಿದ ಯುರೇನಿಯಂ ದಾಸ್ತಾನನ್ನು ಸಂಪೂರ್ಣವಾಗಿ ಅಮೆರಿಕಕ್ಕೆ ಅಥವಾ ಯಾವುದಾದರೂ ಮೂರನೇ ದೇಶಕ್ಕೆ ಹಸ್ತಾಂತರಿಸಬೇಕು ಎಂಬ ಬೇಡಿಕೆಯನ್ನು ಅಮೆರಿಕ ಇರಿಸಿದೆ.

# ಪಂಚಮಸಾಲಿ ಪೀಠದಲ್ಲಿ ಭಾರೀ ಹೈಡ್ರಾಮಾ

ದಾವಣಗೆರೆ: ಹರಿಹರ ಪಂಚಮಸಾಲಿ ಪೀಠದ ಆವರಣದಲ್ಲಿ ಭಾರೀ ಹೈಡ್ರಾಮಾ ನಡೆದಿದೆ. ಪೀಠದ ಟ್ರಸ್ಟ್‌ನ ಪ್ರಧಾನ ಧರ್ಮಧರ್ಶಿ ಬಿ.ಸಿ ಉಮಾಪತಿ ಲೆಕ್ಕ ಮಂಡನೆ ಸಂದರ್ಭದಲ್ಲಿ ಭಾರೀ ಗಲಾಟೆಯಾಗಿದೆ.

ಸ್ವಾಮೀಜಿ ಬೆಂಬಲಿಗರಿಗೆ ಟ್ರಸ್ಟಿನ ಬೆಂಬಲಿಗರು ನಿಂದಿಸಿದ್ದಾರೆ. ಈ ವೇಳೆ ಸ್ವಾಮೀಜಿ ಬೆಂಬಲಿಗರು ಟ್ರಸ್ಟ್ ಬೆಂಬಲಿಗರ ಮೇಲೆ ಹಲ್ಲೆ ನಡೆಸಿದ್ದಾರೆ. ಲೆಕ್ಕ ಕೇಳೋರು ಇಷ್ಟು ದಿನ ಎಲ್ಲಿ ಹೋಗಿದ್ರಿ ಎಂದು ಟ್ರಸ್ಟ್ ಬೆಂಬಲಿಗರು ನಿಂದಿಸಿದ್ದಾರೆ. ಇದರಿಂದ ಆಕ್ರೋಶಗೊಂಡ ಸ್ವಾಮೀಜಿ ಬೆಂಬಲಿಗರು ವಿಜಯನಗರ ಜಿಲ್ಲೆಯ ಸಂಘಟನಾ ಕಾರ್ಯದರ್ಶಿ ಶಿವನಗೌಡ ಮೇಲೆ ಹಲ್ಲೆ ನಡೆಸಿದ್ದಾರೆ. ಈ ವೇಳೆ ಪೊಲೀಸರು ಮಧ್ಯೆ ಪ್ರವೇಶಿಸಿ ಪರಿಸ್ಥಿತಿ ತಿಳಿಗೊಳಿಸಿದ್ದಾರೆ.

ಗಲಾಟೆ, ಧಿಕ್ಕಾರ ಘೋಷಣೆ ಮಧ್ಯೆ ಪ್ರಧಾನ ಧರ್ಮದರ್ಶಿ ಉಮಾಪತಿ ಲೆಕ್ಕ ಕೊಟ್ಟಿದ್ದಾರೆ. 2008 ರಿಂದ 2026ರವರೆಗಿನ ಲೆಕ್ಕಾಚಾರವನ್ನು ತೆರೆದಿಟ್ಟಿದ್ದಾರೆ.



ಪೀಠದ ಟ್ರಸ್ಟ್ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೂ ಭಕ್ತರು ನೀಡಿದ ಕಾಣಿಕೆ, ಸರ್ಕಾರದ ಅನುದಾನದ ಬಗ್ಗೆ ಮಾಹಿತಿ ನೀಡಿದರು.

# ಆನ್‌ಲೈನ್‌ನಲ್ಲಿ ಸಿಗಲಿದೆ ಇ-ಖಾತಾ

ಬೆಂಗಳೂರು: ನಗರದ ಆಸ್ತಿ ಮಾಲೀಕರು ಈಗ ಸ್ವಯಂ-ಮೌಲ್ಯಮಾಪನ ವ್ಯವಸ್ಥೆ ಆಸ್ತಿ ತೆರಿಗೆ ಐಡಿ ಬಳಸಿ ಇ-ಖಾತಾವನ್ನು ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಬಹುದು. ಈ ವ್ಯವಸ್ಥೆಯು ಕಚೇರಿ ಭೇಟಿಗಳು, ವಿಳಂಬಗಳು ಮತ್ತು ಮಧ್ಯವರ್ತಿಗಳನ್ನು ತೆಗೆದುಹಾಕುವುದರಿಂದ ಸುಮಾರು 13 ಲಕ್ಷ ಬಳಕೆದಾರರು ಪ್ರಯೋಜನ ಪಡೆಯುತ್ತಾರೆ.

ಐದು ನಗರ ಪುರಸಭೆಗಳ ನಿಗಮಗಳು ಆನ್‌ಲೈನ್ ಇ-ಖಾತಾ ಡೌನ್‌ಲೋಡ್ ಸಕ್ರಿಯಗೊಳಿಸಿವೆ, ಇದು ಗ್ರೇಟರ್ ಬೆಂಗಳೂರು ಪ್ರದೇಶ ಮಿತಿಯಲ್ಲಿರುವ ಆಸ್ತಿ ಮಾಲೀಕರು ತಮ್ಮ ಆಸ್ತಿ ತೆರಿಗೆ ಐಡಿಗಳನ್ನು ಬಳಸಿಕೊಂಡು ಸೌಲಭ್ಯವನ್ನು ಪಡೆಯಬಹುದು.

ನಾಗರಿಕರಿಗೆ ಸುಮಾರು 13 ಲಕ್ಷ ಇ-ಖಾತಾಗಳನ್ನು ತಕ್ಷಣವೇ ಲಭ್ಯವಾಗುವಂತೆ ಮಾಡುವುದು ಗುರಿಯಾಗಿದೆ ಎಂದು ಜಿಬಿಎ ಅಧಿಕಾರಿಗಳು ತಿಳಿಸಿದ್ದಾರೆ. ನಾಗರಿಕರು https://BBMPeAasthi.karnataka.gov.in ಗೆ ಭೇಟಿ ನೀಡಬಹುದು, ಮೊಬೈಲ್ ಬಳಸಿ ಲಾಗಿನ್ ಮಾಡಬಹುದು, ಸ್ವಯಂ-ಮೌಲ್ಯಮಾಪನ ವ್ಯವಸ್ಥೆ ಅರ್ಜಿ ಆಸ್ತಿ ತೆರಿಗೆ ಐಡಿಯನ್ನು ನಮೂದಿಸಬಹುದು ಮತ್ತು ಇ-ಖಾತಾವನ್ನು ತಕ್ಷಣ ಡೌನ್‌ಲೋಡ್ ಮಾಡಬಹುದು.

ಈ ಕ್ರಮದಿಂದ ಮಾಲೀಕರ ಹೆಸರಿನೊಂದಿಗೆ ಇ-ಖಾತಾಗಳನ್ನು ಹುಡುಕುವ ಅಗತ್ಯವನ್ನು ತೆಗೆದುಹಾಕುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆಯ್ಕೆಯು ಆನ್‌ಲೈನ್‌ನಲ್ಲಿರುವುದರಿಂದ, ಜನರು ಯಾವುದೇ ನಿಗಮ ಕಚೇರಿಗಳಿಗೆ ಭೇಟಿ ನೀಡುವ ಅಗತ್ಯವಿಲ್ಲ ಎಂದು ಅವರು ಹೇಳಿದರು.

ನಾಗರಿಕರು ಆಸ್ತಿ ತೆರಿಗೆ ವ್ಯವಸ್ಥೆಯಲ್ಲಿ ನೋಂದಾಯಿತ ಮೊಬೈಲ್ ಸಂಖ್ಯೆಯಲ್ಲಿ ಇ-ಖಾತಾ ಡೌನ್‌ಲೋಡ್ ಮಾಡಲು ಸಿದ್ಧ ಲಿಂಕ್ ಅನ್ನು ಸಹ ಸ್ವೀಕರಿಸುತ್ತಾರೆ ಎಂದು ಮುಖ್ಯ ಆಯುಕ್ತ ಎಂ ಮಹೇಶ್ವರ ರಾವ್ ಶನಿವಾರ ಹೇಳಿಕೆಯಲ್ಲಿ ತಿಳಿಸಿದ್ದಾರೆ.


ಇ-ಖಾತಾಗಳನ್ನು ಅಸ್ತಿತ್ವದಲ್ಲಿರುವ ದಾಖಲೆಗಳ ಆಧಾರದ ಮೇಲೆ "ಇರುವಂತೆಯೇ" ನೀಡಲಾಗುತ್ತದೆ. ಇ-ಖಾತಾವನ್ನು ಪೂರ್ಣಗೊಳಿಸಲು ಮತ್ತು ಉಪ ನೋಂದಣಿ ಕಚೇರಿಯಲ್ಲಿ ವಹಿವಾಟು ನಡೆಸಲು, ನಿವಾಸಿಗಳು ತಮ್ಮ ಆಧಾರ್ ಮತ್ತು ಇ-ಕೆವೈಸಿ, ನೋಂದಾಯಿತ ಮಾರಾಟ ಪತ್ರ, ಆಸ್ತಿ ವಿವರಗಳು (ಜಿಪಿಎಸ್ ಮತ್ತು ಫೋಟೋ) ಮತ್ತು ಬೆಸ್ಕಾಮ್ ಐಡಿ (ಅನ್ವಯಿಸಿದರೆ) ನೀಡಿ ಆನ್‌ಲೈನ್‌ನಲ್ಲಿ ನವೀಕರಿಸಬೇಕಾಗುತ್ತದೆ.

ಯಾವುದೇ ಆಸ್ತಿ ಮಾಲೀಕರಿಗೆ ಮಾನ್ಯವಾದ ಖಾತಾ ಒಂದು ನಿರ್ಣಾಯಕ ದಾಖಲೆಯಾಗಿದೆ. ಅದಿಲ್ಲದೆ ವ್ಯಕ್ತಿಗಳು ಆಸ್ತಿ ತೆರಿಗೆ ಪಾವತಿಸಲು, ಆಸ್ತಿಯನ್ನು ಮಾರಾಟ ಮಾಡಲು ಅಥವಾ ವರ್ಗಾಯಿಸಲು, ಸ್ವತ್ತುಗಳನ್ನು ಉಡುಗೊರೆಯಾಗಿ ನೀಡಲು ಅಥವಾ ಟಾಪ್-ಅಪ್ ಅಥವಾ ಮರುಮಾರಾಟ ಸಾಲಗಳಂತಹ ಸಾಲಗಳನ್ನು ಪಡೆದುಕೊಳ್ಳುವಲ್ಲಿ ತೊಂದರೆಗಳನ್ನು ಎದುರಿಸಬೇಕಾಗುತ್ತದೆ.

ಈ ಸವಾಲುಗಳನ್ನು ಗುರುತಿಸಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರವು ತನ್ನ ಇ-ಆಸ್ತಿ ವೇದಿಕೆಯ ಮೂಲಕ ಈ ಸರಳೀಕೃತ ಡಿಜಿಟಲ್ ವ್ಯವಸ್ಥೆಯನ್ನು ಪರಿಚಯಿಸಿದೆ.

## ಜನಿವಾರ ತೆಗೆಸಿದವರು ಅಂದರ್

ಬೆಂಗಳೂರು: ಸಿಇಟಿ ಕೇಂದ್ರದಲ್ಲಿ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ವಿಚಾರ ಭಾರಿ ವಿವಾದಕ್ಕೆ ಕಾರಣವಾಗುತ್ತಿದ್ದಂತೆ ಬೆಂಗಳೂರಿನ ಮಡಿವಾಳದಲ್ಲಿರುವ ಕೃಪಾನಿಧಿ ಕಾಲೇಜಿನ ಮೂವರು ಸಿಬ್ಬಂದಿಗಳನ್ನು ಅಮಾನತು ಮಾಡಲಾಗಿತ್ತು.



ಈ ನಡುವೆ ಇದು ಧಾರ್ಮಿಕ ಸ್ವಾತಂತ್ರ್ಯದ ಉಲ್ಲಂಘನೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ, ಕಾಲೇಜು ಪರವಾನಗಿ ರದ್ದುಪಡಿಸಿ 25 ಲಕ್ಷ ರೂ.ದಂಡ ವಿಧಿಸುವಂತೆ ಮುಖ್ಯಮಂತ್ರಿಗಳಿಗೆ ದೂರು ನೀಡಿ ಆಗ್ರಹಿಸಿತ್ತು. ಆ ಬೆನ್ನಲ್ಲೇ ಕೃಪಾನಿಧಿ ಕಾಲೇಜಿಗೆ ಬಿಗ್ ಶಾಕ್ ಸಿಕ್ಕಿದೆ. ಈ ಕಾಲೇಜಿನಲ್ಲಿ ಇನ್ಮುಂದೆ ಸರ್ಕಾರಿ ಪರೀಕ್ಷೆ ನಡೆಸದಂತೆ ಸರ್ಕಾರಕ್ಕೆ ವರದಿ ಸಲ್ಲಿಸೋದಾಗಿ ಬೆಂಗಳೂರು ನಗರ ಡಿಸಿ ಜಗದೀಶ್ ತಿಳಿಸಿದ್ದಾರೆ.

ಸಿಇಟಿ ಪರೀಕ್ಷೆ ವೇಳೆ ಜನಿವಾರ ತೆಗೆಸಿದ ವಿಚಾರ ಸಂಬಂಧ ಕೃತ್ಯ ಎಸಗಿರೋದು ಯಾರು ಎಂಬ ಬಗ್ಗೆ ತನಿಖೆ ಮಾಡಲಾಗಿದೆ. ವಸ್ತ್ರಸಂಹಿತೆ ಬಗ್ಗೆ ತರಬೇತಿ ನೀಡಿದ್ದರೂ ಇಷ್ಟೆಲ್ಲ ಸಮಸ್ಯೆಯಾಗಿದೆ.

ಜನಿವಾರ ಘಟನೆಯಲ್ಲಿ ಕರ್ತವ್ಯ ಲೋಪವಾಗಿರುವ ಕಾರಣ ಕೃಪಾನಿಧಿ ಕಾಲೇಜಿನಲ್ಲಿ ಇನ್ಮುಮುಂದೆ ಸರ್ಕಾರಿ ಪರೀಕ್ಷೆಗಳನ್ನು ನಡೆಸದಂತೆ ಸರ್ಕಾರಕ್ಕೆ ವರದಿ ಸಲ್ಲಿಕೆ ಮಾಡುತ್ತೇವೆ. ಪರೀಕ್ಷಾರ್ಥಿಗಳ ಜನಿವಾರವನ್ನು ಉದ್ದೇಶಪೂರ್ವಕವಾಗಿ ತೆಗಿಸಲಾಗಿರುವ ಕಾರಣ ಕೃಪಾನಿಧಿ ಕಾಲೇಜಿನಲ್ಲಿ ಇನ್ನು ಮುಂದೆ ಪರೀಕ್ಷಾ ಕೇಂದ್ರ ನೀಡದಂತೆ ವರದಿ ನೀಡುತ್ತೇವೆ ಎಂದು ಬೆಂಗಳೂರು ನಗರ ಡಿಸಿ ಜಗದೀಶ್ ತಿಳಿಸಿದ್ದಾರೆ.

2026ನೇ ಸಾಲಿನ ಸಿಇಟಿ ಪರೀಕ್ಷೆ ವೇಳೆ ಬೆಂಗಳೂರು ಕೇಂದ್ರದಲ್ಲಿ ಏಪ್ರಿಲ್ 23ರ ಭೌತಶಾಸ್ತ್ರ ವಿಷಯದ ಪರೀಕ್ಷೆಗೆ ಹಾಜರಾಗಲು ಬಂದಿದ್ದ ಕೆಲವು ಅಭ್ಯರ್ಥಿಗಳ ಜನಿವಾರವನ್ನು ತೆಗೆಸಲು ಅಲ್ಲಿಯ ಸಿಬ್ಬಂದಿಗಳು ಸೂಚಿಸಿರುತ್ತಾರೆಂದು, ನಂತರ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಿರುತ್ತಾರೆ ಎಂದು ಮಾಧ್ಯಮಗಳ ಮೂಲಕ ತಿಳಿದುಬಂದಿದೆ. ಇದೊಂದು ಸೂಕ್ಷ್ಮ ವಿಚಾರವಾಗಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬಹಳ ಸ್ಪಷ್ಟವಾಗಿ ವಸ್ತ್ರ ಸಂಹಿತೆಯ ಬಗ್ಗೆ ವಿವರಿಸಿದೆ.

ಕಳೆದ ವರ್ಷದಲ್ಲಿ ನಡೆದ ಇದೇ ತರಹದ ಘಟನೆ ಉಲ್ಲೇಖಿಸಿ ಜನಿವಾರ, ಲಿಂಗ ಇತ್ಯಾದಿ ಧಾರ್ಮಿಕ ದಿರಿಸುಗಳನ್ನು ತೆಗೆಯಬಾರದೆಂದು ಸ್ಪಷ್ಟವಾಗಿ ತರಬೇತಿಯಲ್ಲಿ ತಿಳಿಸಲಾಗಿದೆ.

# ವಿಳಂಬ ನೀತಿ ಭ್ರಷ್ಟಾಚಾರಕ್ಕೆ ಎಡೆ ಮಾಡಿಕೊಡುತ್ತದೆ: ಸಿಎಂ

**ಬೆಂಗಳೂರು:** ಮಧ್ಯವರ್ತಿಗಳು ಎಲ್ಲೆಡೆ ಇರುತ್ತಾರೆ ಆದರೆ ಅವರನ್ನು ಕಚೇರಿಯೊಳಗೆ ಬಿಟ್ಟುಕೊಳ್ಳದೇ ಹೊರಗೆ ಕಳಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದರು. ಅವರು ಕರ್ನಾಟಕ ಆಡಳಿತ ಸೇವೆ ಅಧಿಕಾರಿಗಳ ಒಕ್ಕೂಟ ಸಂಘ ಬೆಂಗಳೂರು ಇವರ ವತಿಯಿಂದ ಇನ್ ಫೆಂಟ್ರಿ ರಸ್ತೆಯಲ್ಲಿರುವ ಏಂಖ ಅಧಿಕಾರಿಗಳ ಸಂಘದ ನವೀಕರಿಸಿದ ಕಟ್ಟಡ ಹೊಸದಾಗಿ ನಿರ್ಮಿಸಿದ ಹೆಚ್ಚುವರಿ ಕೊಠಡಿಗಳನ್ನು ಉದ್ಘಾಟನೆ ಮಾಡಿ ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಿ ಮಾತನಾಡಿದರು.

ಅಧಿಕಾರಿಗಳು ಯಾವುದೇ ಕಾರಣಕ್ಕೂ ಮಾಡದೇ, ಶೀಘ್ರವಾಗಿ ಕಡತಗಳನ್ನು ವಿಲೇವಾರಿ ಮಾಡಬೇಕು. ವಿಳಂಬ ನೀತಿ ಭ್ರಷ್ಟಾಚಾರಕ್ಕೆ ಎಡೆಮಾಡಿಕೊಡುತ್ತದೆ ಎಂದರು.

ಕೆಎಎಸ್ ಅಧಿಕಾರಿಗಳು ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ಪ್ರಾಮಾಣಿಕವಾಗಿ ಮಾಡಬೇಕು. ಕೆಎಎಸ್ ಅಧಿಕಾರಿಗಳ ಸಂಘಕ್ಕೆ ನೂರು ವರ್ಷಗಳ ಇತಿಹಾಸವಿದ್ದು, ನಾಲ್ವಡಿ ಕೃಷ್ಣರಾಜ ಒಡೆಯರ್ ಮೈಸೂರು ರಾಜ್ಯಕ್ಕೆ ಅಪಾರ ಕೊಡುಗೆ ಕೊಟ್ಟಿದ್ದಾರೆ. ಸಾಮಾಜಿಕ, ಆರ್ಥಿಕ, ಮೂಲಭೂತ ಸೌಕರ್ಯಗಳು,ಕೈಗಾರಿಕೆಗಳ ಬೆಳವಣಿಗೆಗೆ ಕಾರಣೀಭೂತರಾಗಿದ್ದಾರೆ. ಅವರ ಕಾಲದಲ್ಲಿ ದಿವಾನರಾಗಿದ್ದವರು ಸಂಘದ ಅಧ್ಯಕ್ಷರಾಗಿದ್ದರು ಎನ್ನುವುದು ಈ ಸಂಘದ ಹೆಗ್ಗಳಿಕೆ ಎಂದರು.



ಅವರೆಲ್ಲರೂ ದಕ್ಷ ಆಡಳಿತಕ್ಕೆ ನಮಗೆ ದಾರಿದೀಪವಾಗಿದ್ದಾರೆ ಎಂದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕಾರ್ಯಾಂಗ ಹಾಗೂ ಶಾಸಕಾಂಗ ಒಟ್ಟಾಗಿ ಕೆಲಸ ಮಾಡಬೇಕು. ಈ ಎರಡೂ ಜನರ ಪ್ರತಿನಿಧಿಗಳಾಗಿ ಜನರ ಹಿತವನ್ನು ಕಾಪಾಡುವುದು ನಮ್ಮ ಕರ್ತವ್ಯ ಎಂದರು.

ಅಧಿಕಾರಿಗಳಿಗೆ ಕಾನೂನಿನ ಅರಿವಿನ ಜೊತೆಗೆ ಸಾಮಾನ್ಯ ಜ್ಞಾನ, ಸಮಾಜದ ಬಗ್ಗೆ ಅರಿವು ಇರಬೇಕು. ನಿವೃತ್ತರಾಗುವವರೆಗೆ ಜನಸೇವೆಯಲ್ಲಿ ತೊಡಗಿಸಿಕೊಳ್ಳುವ ಅವಕಾಶವಿದೆ. ಅಸಮಾನತೆ ಇರುವ ಸಮಾಜದಲ್ಲಿ ದುರ್ಬಲ ವರ್ಗಕ್ಕೆ ಸ್ಪಂದಿಸಬೇಕು. ಅಧಿಕಾರಿಗಳಿಗೆ ಕಾನೂನಿನ ಅರಿವಿನ ಜೊತೆಗೆ ಸಾಮಾನ್ಯ ಜ್ಞಾನ, ಸಮಾಜದ ಬಗ್ಗೆ ಅರಿವು ಇರಬೇಕು. ಆಗ ಮಾತ್ರ ಜನರಿಗೆ ಸ್ಪಂದಿಸಲು ಸಾಧ್ಯ ಎಂದರು.

ನಮ್ಮ ಕೆಲಸವನ್ನು ನಾವು ಪ್ರೀತಿಸಬೇಕು. ಗ್ರಾಮೀಣ ಜನರನ್ನು ಪ್ರೀತಿಯಿಂದ ಮಾತನಾಡಿಸಿ ಅವರ ಸಮಸ್ಯೆ ಅರ್ಥೈಸಿಕೊಂಡು ಬಗೆಹರಿಸಿದರೆ ಅವರು ನಿಮ್ಮನ್ನು ಮರೆಯುವುದಿಲ್ಲ. ಮಧ್ಯವರ್ತಿಗಳ ಹಾವಳಿ ತಪ್ಪಿಸುವ ನಿಟ್ಟಿನಲ್ಲಿ ಗ್ಯಾರಂಟಿ ಯೋಜನೆಗಳು ಸಹಕಾರಿಯಾಗಿವೆ. ನೇರವಾಗಿ ಫಲಾನುಭವಿಗಳ ಖಾತೆಗೆ ಹಣ ವರ್ಗಾಯಿಸಲಾಗುತ್ತಿದೆ ಎಂದರು.

ಸರ್ಕಾರ ರೂಪಿಸುವ ನೀತಿಗಳು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವಲ್ಲಿ ಅಧಿಕಾರಿಗಳ ಪಾತ್ರ ಹಿರಿದು. ಜನಸೇವೆಗೆ ದೊರಕಿರುವ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಬೇಕು. ತೃಪ್ತಿದಾಯಕವಾಗಿ ಕೆಲಸ ಮಾಡಿರುವುದಕ್ಕಿಂತ ದೊಡ್ಡ ಪ್ರಮಾಣಪತ್ರ ಇನ್ನೊಂದಿಲ್ಲ ಎಂದರು. ಈ ಬಗ್ಗೆ ಅಧಿಕಾರಿಗಳು ಆತ್ಮಾವಲೋಕನ ಮಾಡಿಕೊಳ್ಳಬೇಕು. ಜೀವನ ಸಾರ್ಥಕವಾಗಿ ಸೇವೆ ತೃಪಿಕರವಾಗಿ ಮಾಡಿದ್ದೇನೆ ಎಂಬ ಭಾವನೆ ನಿಮ್ಮಲ್ಲಿ ಇರಬೇಕು ಎಂದರು.

ಪದೋನ್ನತಿ ಬಗ್ಗೆ ಕಂದಾಯ ಸಚಿವರು ಕಾರ್ಯೋನ್ಮುಖರಾಗಿದ್ದು, ಶ್ರೀಘ್ರವಾಗಿ ಪದೋನ್ನತಿ ಆಗಲಿದೆ. ಶೇ. 33% ಅಧಿಕಾರಿಗಳನ್ನು ಸಿಇಒಗಳಾಗಿ ಬಡ್ತಿ ನೀಡುವ ಭರವಸೆಯನ್ನು ಮುಖ್ಯಮಂತ್ರಿಗಳು ನೀಡಿದರು.

ಕೆಎಎಸ್ ಅಧಿಕಾರಿಗಳ ಸಂಘದಲ್ಲಿ ಹೆಚ್ಚುವರಿಯಾಗಿ ಹನ್ನೊಂದು ಕೊಠಡಿಗಳನ್ನು ನಿರ್ಮಿಸಿದ್ದು, ಹೊರಭಾಗಗಳಿಂದ ಆಗಮಿಸುವ ಅಧಿಕಾರಿಗಳಿಗೆ ಉಪಯೋಗವಾಗಲಿದೆ. ಕಂದಾಯ ಸಚಿವ ಕೃಷ್ಣಭೈರೇಗೌಡ, ಕೆಎಎಸ್ ಅಧಿಕಾರಿಗಳ ಸಂಘದ ಅಧ್ಯಕ್ಷ ಶಿವಸ್ವಾಮಿ, ಉಪಾಧ್ಯಕ್ಷ ಚನ್ನಬಸಪ್ಪ, ಕಾರ್ಯದರ್ಶಿ ಶಿವಕುಮಾರ್ ಪದಾಧಿಕಾರಿಗಳು

ಭಾರತ ಸಾರಥಿ
28/04/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಎಲ್‌ಪಿಜಿ ಬಿಕ್ಕಟ್ಟು: ಆಟೋ ಚಾಲಕರ ಸಂಕಷ್ಟ, ಎಲೆಕ್ಟ್ರಿಕ್ ವಾಹನಗಳತ್ತ ಗಮನ

ಬೆಂಗಳೂರು

ಎಲ್‌ಪಿಜಿ ಮತ್ತು ಸಿಎನ್‌ಜಿ ಕೊರತೆ ಹಾಗೂ ಬೆಲೆ ಏರಿಕೆಯ ನಡುವೆಯೇ ನಗರದಲ್ಲಿ ಆಟೋ ಚಾಲಕರು ಸಂಕಷ್ಟಕ್ಕೆ ಸಿಲುಕಿದ್ದು, ಈ ಪರಿಸ್ಥಿತಿ ಎಲೆಕ್ಟ್ರಿಕ್ ವಾಹನಗಳತ್ತ ಹೊಸ ಗಮನಸೆಳೆಯುತ್ತಿದೆ.



ಪಶ್ಚಿಮ ಏಷ್ಯಾದ ಉದ್ವಿಗ್ನತೆಯ ಪರಿಣಾಮವಾಗಿ ಇಂಧನ ಸರಬರಾಜಿನಲ್ಲಿ ಉಂಟಾದ ವ್ಯತ್ಯಯದಿಂದ ದೇಶದಾದ್ಯಂತ ಎಲ್‌ಪಿಜಿ ಮತ್ತು ಸಿಎನ್‌ಜಿ ಬೆಲೆಗಳು ಏರಿಕೆಯಾಗಿವೆ. ಕೆಲವು ನಗರಗಳಲ್ಲಿ ಆಟೋ ಎಲ್‌ಪಿಜಿ ದರ ಲೀಟರ್‌ಗೆ ನೂರುದಿಂದ ನೂರು ಇಪ್ಪತ್ತು ರೂಪಾಯಿ ವರೆಗೆ ಏರಿಕೆಯಾಗಿದೆ. ಬೆಂಗಳೂರಿನ ಹಲವು ಇಂಧನ ಕೇಂದ್ರಗಳು ತಾತ್ಕಾಲಿಕವಾಗಿ ಮುಚ್ಚಲ್ಪಟ್ಟಿರುವುದರಿಂದ ಚಾಲಕರು ಗಂಟೆಗಟ್ಟಲೆ ಸಾಲಿನಲ್ಲಿ ನಿಲ್ಲಬೇಕಾದ ಪರಿಸ್ಥಿತಿ ಎದುರಾಗಿದೆ.

ಈ ಬಿಕ್ಕಟ್ಟು ಲಕ್ಷಾಂತರ ಆಟೋ ಚಾಲಕರ ಜೀವನೋಪಾಯದ ಮೇಲೆ ಪರಿಣಾಮ ಬೀರಿದ್ದು, ಆದಾಯ ಕುಸಿತದ ಜೊತೆಗೆ ಇಂಧನ ವೆಚ್ಚವೂ ಹೆಚ್ಚಾಗಿದೆ. ಆಮದು ಇಂಧನಗಳ ಮೇಲೆ ಹೆಚ್ಚಿನ ಅವಲಂಬನೆ ಇರುವುದರಿಂದ ಇಂತಹ ಸಂಕಷ್ಟಗಳು ಎದುರಾಗುತ್ತಿವೆ ಎಂಬುದು ತಜ್ಞರ ಅಭಿಪ್ರಾಯವಾಗಿದೆ.

ಇದರ ಮಧ್ಯೆ, ಎಲೆಕ್ಟ್ರಿಕ್ ವಾಹನಗಳು ಹೆಚ್ಚು ಸ್ಥಿರ ಮತ್ತು ವೆಚ್ಚ–ಪರಿಣಾಮಕಾರಿ ಪರ್ಯಾಯವಾಗಿ ಹೊರಹೊಮ್ಮುತ್ತಿವೆ. ಎಲೆಕ್ಟ್ರಿಕ್ ತ್ರಿಚಕ್ರ ವಾಹನಗಳ ಓಡಾಟ ವೆಚ್ಚ ಪ್ರತಿ ಕಿಲೋಮೀಟರ್‌ಗೆ ಸುಮಾರು ಒಂದು ರೂಪಾಯಿ ಇದ್ದರೆ, ಎಲ್‌ಪಿಜಿ ಅಥವಾ ಸಿಎನ್‌ಜಿ ವಾಹನಗಳಿಗೆ ಐದುರಿಂದ ಆರು ರೂಪಾಯಿ ವೆಚ್ಚ ಬರುತ್ತಿದೆ. ಇದರಿಂದ ತಿಂಗಳಿಗೆ ಸುಮಾರು ಐದು ಸಾವಿರ ರೂಪಾಯಿವರೆಗೆ ಉಳಿತಾಯ ಸಾಧ್ಯವೆಂದು ಅಂದಾಜಿಸಲಾಗಿದೆ.

ಹೆಚ್ಚುವರಿಯಾಗಿ, ಎಲೆಕ್ಟ್ರಿಕ್ ವಾಹನಗಳಲ್ಲಿ ನಿರ್ವಹಣಾ ವೆಚ್ಚವೂ ಕಡಿಮೆ. ಎಂಜಿನ್ ಇಲ್ಲದ ಕಾರಣ ತೈಲ ಬದಲಾವಣೆ ಅಗತ್ಯವಿಲ್ಲದಿದ್ದು, ಚಾಲಕರಿಗೆ ಖರ್ಚು ಕಡಿಮೆಯಾಗುತ್ತದೆ. ಈಗಾಗಲೇ ಕೆಲವು ಕಂಪನಿಗಳು ಸಾಂಪ್ರದಾಯಿಕ ಎಲ್‌ಪಿಜಿ ಮತ್ತು ಸಿಎನ್‌ಜಿ ಆಟೋಗಳನ್ನು ಎಲೆಕ್ಟ್ರಿಕ್ ವಾಹನಗಳಾಗಿ ಪರಿವರ್ತಿಸುವ ವ್ಯವಸ್ಥೆಗಳನ್ನು ಪರಿಚಯಿಸಿವೆ.

ಈ ಪೈಕಿ ಬೆಂಗಳೂರು ಮೂಲದ ಎಕ್ಸ್ಪೋನೆಂಟ್ ಎನರ್ಜಿ ಸಂಸ್ಥೆ ಆಟೋಗಳನ್ನು ಎಲೆಕ್ಟ್ರಿಕ್ ಮಾದರಿಗಳಿಗೆ ಪರಿವರ್ತಿಸುವ ಯೋಜನೆಗಳನ್ನು ಮುಂದಿಟ್ಟಿದ್ದು, ಚಾಲಕರಿಗೆ ಸುಲಭ ಪರ್ಯಾಯ ಒದಗಿಸುತ್ತಿದೆ. ಈ ಎಲೆಕ್ಟ್ರಿಕ್ ಆಟೋಗಳು ಕೇವಲ ಹದಿನೈದು ನಿಮಿಷಗಳಲ್ಲಿ ಸಂಪೂರ್ಣ ಚಾರ್ಜ್ ಆಗುವ ಸಾಮರ್ಥ್ಯ ಹೊಂದಿದ್ದು, ದಿನಪೂರ್ತಿ ಕೆಲಸ ನಿರ್ವಹಿಸಲು ಅನುಕೂಲವಾಗಲಿದೆ. ಐದು ವರ್ಷ ಅಥವಾ ಎರಡು ಲಕ್ಷ ಕಿಲೋಮೀಟರ್ ವಾರಂಟಿಯೂ ನೀಡಲಾಗುತ್ತಿದೆ.

ಒಟ್ಟಾರೆ, ಎಲ್‌ಪಿಜಿ ಬಿಕ್ಕಟ್ಟಿನ ನಡುವೆ ಎಲೆಕ್ಟ್ರಿಕ್ ವಾಹನಗಳತ್ತ ಸಾಗುವಿಕೆ ಚಾಲಕರ ವೆಚ್ಚವನ್ನು ಕಡಿಮೆ ಮಾಡುವುದಲ್ಲದೆ, ಶುದ್ಧ ವಾತಾವರಣ ಮತ್ತು ದೇಶದ ಇಂಧನ ಭದ್ರತೆಗೆ ಸಹಕಾರಿಯಾಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

## ಡೀಪ್ ಟೆಕ್ ಕ್ಷೇತ್ರದಲ್ಲಿ ಲಿಂಗ ಅಸಮಾನತೆ: ಮಹಿಳಾ ಪ್ರತಿಭೆಗೆ ಇನ್ನೂ ಸವಾಲುಗಳು

ಬೆಂಗಳೂರು

ಭಾರತದಲ್ಲಿ ವೇಗವಾಗಿ ಬೆಳೆಯುತ್ತಿರುವ ಡೀಪ್ ಟೆಕ್ ಕ್ಷೇತ್ರದಲ್ಲಿಯೂ ಲಿಂಗ ಅಸಮಾನತೆ ಇನ್ನೂ ಗಂಭೀರವಾಗಿ ಮುಂದುವರಿದಿರುವುದು ಇತ್ತೀಚಿನ ವರದಿಯಿಂದ ಬಹಿರಂಗವಾಗಿದೆ. ಉದ್ಯೋಗ ಪೋರ್ಟಲ್ ಸಂಸ್ಥೆ ಇನ್‌ಡೀಡ್ ಬಿಡುಗಡೆ ಮಾಡಿದ 'ಹೈರಿಂಗ್ ಟ್ರ್ಯಾಕರ್' ವರದಿ ಪ್ರಕಾರ, ಎಐ/ಎಂಎಲ್, ಡೇಟಾ ಸೈನ್ಸ್ ಹಾಗೂ ಸೈಬರ್ ಸೆಕ್ಯುರಿಟಿ ಕ್ಷೇತ್ರಗಳಲ್ಲಿ ಮಹಿಳೆಯರ ಪ್ರಾತಿನಿಧ್ಯ ಕಡಿಮೆಯೇ ಉಳಿದಿದೆ.

ಆರಂಭಿಕ ಹಂತದಲ್ಲಿಯೇ ಮಹಿಳಾ ಪ್ರಾತಿನಿಧ್ಯದಲ್ಲಿ ಅಂತರ ಕಾಣಿಸುತ್ತಿದ್ದು, ಸಮೀಕ್ಷೆಗೊಳಪಟ್ಟ ಸಂಸ್ಥೆಗಳಲ್ಲಿನ ಶೇ. 43ರಷ್ಟು ಉದ್ಯೋಗದಾತರು ತಮ್ಮ ಸಂಸ್ಥೆಯಲ್ಲಿ ಎಂಟ್ರಿ–ಲೆವೆಲ್ ಡೀಪ್ ಟೆಕ್ ಹುದ್ದೆಗಳಲ್ಲಿ ಮಹಿಳೆಯರ ಪಾಲು ಕೇವಲ 0–10% ಮಾತ್ರ ಎಂದು ತಿಳಿಸಿದ್ದಾರೆ. ಹಿರಿಯ ಹಂತದ ಹುದ್ದೆಗಳಲ್ಲೂ ಇದೇ ಪರಿಸ್ಥಿತಿ ಮುಂದುವರಿದಿದ್ದು, ಯಾವುದೇ ಸಂಸ್ಥೆಯೂ ಶೇ. 50 ಕ್ಕಿಂತ ಹೆಚ್ಚು ಮಹಿಳಾ ಪ್ರತಿನಿಧ್ಯ ಹೊಂದಿಲ್ಲವೆಂದು ವರದಿ ಹೇಳುತ್ತದೆ.

ಇದಕ್ಕಿಂತಲೂ ಮುಖ್ಯವಾಗಿ, ಮಹಿಳೆಯರು ಉದ್ಯೋಗ ಕ್ಷೇತ್ರದಲ್ಲಿ ಆಸಕ್ತಿ ತೋರಿಸುತ್ತಿಲ್ಲ ಎಂಬುದು ತಪ್ಪು ಕಲ್ಪನೆ ಎಂದು ಈ ವರದಿ ಸ್ಪಷ್ಟಪಡಿಸುತ್ತದೆ. ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸುವ ಮಹಿಳೆಯರ ಪ್ರಮಾಣದಲ್ಲಿ ಸ್ವಲ್ಪ ಏರಿಕೆ ಕಂಡುಬಂದಿದ್ದು, ಮೂರನೇ ತ್ರೈಮಾಸಿಕದಲ್ಲಿ ಶೇ. 42ರಷ್ಟಿದ್ದ ಅರ್ಜಿಗಳ ಪ್ರಮಾಣ ನಾಲ್ಕನೇ ತ್ರೈಮಾಸಿಕದಲ್ಲಿ ಶೇ. 43ಕ್ಕೆ ಏರಿಕೆಯಾಗಿದೆ. ಇದರಿಂದ, ಸಮಸ್ಯೆಯ ಮೂಲ ಮಹಿಳೆಯರ ಆಸಕ್ತಿ ಕೊರತೆಯಲ್ಲ, ಬದಲಾಗಿ ವ್ಯವಸ್ಥಾತ್ಮಕ ಅಡೆತಡೆಗಳಲ್ಲಿದೆ ಎಂಬುದು ಸ್ಪಷ್ಟವಾಗುತ್ತದೆ.

ವೃತ್ತಿಜೀವನದ ಪ್ರಗತಿಯಲ್ಲಿ ಸಹ ಮಹಿಳೆಯರು ಹಿನ್ನಡೆಯಲ್ಲಿದ್ದಾರೆ. ಶೇ. 38ರಷ್ಟು ಉದ್ಯೋಗದಾತರು ಮಹಿಳೆಯರು ಮಧ್ಯಮ ಹಂತದ ಹುದ್ದೆಗಳಿಗೆ ಏರಲು ಪುರುಷರಿಗಿಂತ ಹೆಚ್ಚು ಸಮಯ ತೆಗೆದುಕೊಳ್ಳುತ್ತಾರೆ ಎಂದು ತಿಳಿಸಿದ್ದಾರೆ. ಇದು ಕಾಲಕ್ರಮೇಣ ಹಿರಿಯ ಹುದ್ದೆಗಳಲ್ಲಿ ಮಹಿಳೆಯರ ಸಂಖ್ಯೆ ಕಡಿಮೆಯಾಗಲು ಕಾರಣವಾಗುತ್ತಿದೆ.

ವೇತನ ಸಂಬಂಧಿತ ವಿಚಾರದಲ್ಲೂ ಅಸಮಾನತೆ ಕಂಡುಬರುತ್ತಿದೆ. ಸುಮಾರು ಶೇ. 32ರಷ್ಟು ಉದ್ಯೋಗಿಗಳು ತಮ್ಮ ಕೆಲಸಕ್ಕೆ ವಿರುದ್ಧ ಲಿಂಗದ ಸಹೋದ್ಯೋಗಿಗಳು ಹೆಚ್ಚು ವೇತನ ಪಡೆಯುತ್ತಿದ್ದಾರೆ ಎಂದು ನಂಬುತ್ತಾರೆ. ವಿಶೇಷವಾಗಿ ಶೇ. 34ರಷ್ಟು ಮಹಿಳೆಯರು ಪುರುಷರು ಹೆಚ್ಚು ವೇತನ ಪಡೆಯುತ್ತಾರೆ ಎಂದು ಅಭಿಪ್ರಾಯಪಟ್ಟರೆ, ಶೇ. 31ರಷ್ಟು ಪುರುಷರು ಮಹಿಳೆಯರೇ ಹೆಚ್ಚು ಪಡೆಯುತ್ತಾರೆ ಎಂದು ಭಾವಿಸುತ್ತಿದ್ದಾರೆ. ಈ ವ್ಯತ್ಯಾಸವು ಕೆಲಸದ ಸ್ಥಳಗಳಲ್ಲಿ ಸ್ಪಷ್ಟತೆ ಮತ್ತು ಸಮಾನತೆಯ ಕೊರತೆಯನ್ನು ತೋರಿಸುತ್ತದೆ.

ಇದೇ ವೇಳೆ, ಶೇ. 67ರಷ್ಟು ಉದ್ಯೋಗದಾತರು ಹಿರಿಯ ಹುದ್ದೆಗಳಲ್ಲಿ ವೇತನ ಅಸಮಾನತೆ ಇಲ್ಲ ಎಂದು ಹೇಳಿದರೂ, ಶೇ. 27ರಷ್ಟು ಉದ್ಯೋಗಿಗಳು ಹಿರಿಯ ಹಂತಕ್ಕೆ ಹೋದಂತೆಲ್ಲಾ ವೇತನದ ಅಂತರ ಹೆಚ್ಚಾಗುತ್ತದೆ ಎಂದು ಭಾವಿಸುತ್ತಿದ್ದಾರೆ. ಇದು ಉದ್ಯೋಗಿಗಳ ಅನುಭವ ಮತ್ತು ಸಂಸ್ಥೆಗಳ ಅಭಿಪ್ರಾಯಗಳ ನಡುವೆ ಇರುವ ವ್ಯತ್ಯಾಸವನ್ನು ಸೂಚಿಸುತ್ತದೆ.

ಈ ಕುರಿತು ಮಾತನಾಡಿದ ಇಂಡೀಡ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಶಶಿ ಕುಮಾರ್ ಅವರು, "ಎಸ್ಟಿಇಎಮ್ ಶಿಕ್ಷಣ ಪ್ರಮುಖವಾದರೂ, ನೇಮಕಾತಿ ಪ್ರಕ್ರಿಯೆಗಳಲ್ಲಿ ಇರುವ ವ್ಯತ್ಯಾಸಗಳು ಮತ್ತು ಕೆಲಸದ ಸ್ಥಳದಲ್ಲಿನ ಅಡೆತಡೆಗಳು ಮಹಿಳೆಯರ ವೃತ್ತಿಜೀವನವನ್ನು ಪ್ರಭಾವಿಸುತ್ತವೆ. ಈ ಸಮಸ್ಯೆಗಳನ್ನು ಪರಿಹರಿಸುವುದು ಕ್ಷೇತ್ರದಲ್ಲಿ ಮಹಿಳಾ ಪ್ರಾತಿನಿಧ್ಯ ಹೆಚ್ಚಿಸಲು ಕೇವಲ ಅವಕಾಶ ನೀಡುವುದಷ್ಟೇ ಸಾಕಾಗದು. ಸಮಾನ ಅವಕಾಶ, ಸಮಾನ ವೇತನ ಮತ್ತು ವೃತ್ತಿಜೀವನದ ಪ್ರಗತಿಗೆ ಅನುಕೂಲಕರ ವಾತಾವರಣ ನಿರ್ಮಾಣ ಮಾಡುವುದು ಅತ್ಯಂತ ಅಗತ್ಯವಾಗಿದೆ.

## ಎಬಿವಿ ಆಧಾರಿತ ಮದ್ಯ ತೆರಿಗೆಗೆ ಬಿಯರ್ ಉದ್ಯಮದ ಬೆಂಬಲ

ಬೆಂಗಳೂರು

ಮದ್ಯಪಾನೀಯ ಕ್ಷೇತ್ರದಲ್ಲಿ ಎಬಿವಿ (ಪಾನೀಯದಲ್ಲಿನ ಮದ್ಯದ ಪ್ರಮಾಣ) ಆಧಾರಿತ ಹೊಸ ತೆರಿಗೆ ವ್ಯವಸ್ಥೆಯನ್ನು ಪರಿಚಯಿಸುವ ಕರ್ನಾಟಕ ಸರ್ಕಾರದ ಕರಡು ಅಧಿಸೂಚನೆಯನ್ನು ಬ್ರೂವರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ಸ್ವಾಗತಿಸಿದೆ. ಈ ವ್ಯವಸ್ಥೆ ರಾಜ್ಯದ ಆದಾಯವನ್ನು ಗರಿಷ್ಠಗೊಳಿಸುವುದರ ಜೊತೆಗೆ ಸಾರ್ವಜನಿಕ ಆರೋಗ್ಯದ ಮಿತೋಪಯೋಗ ಗುರಿಗಳನ್ನು ಸಾಧಿಸಲು ಸಹಕಾರಿಯಾಗಲಿದೆ ಎಂದು ಸಂಸ್ಥೆ ಅಭಿಪ್ರಾಯಪಟ್ಟಿದೆ.

ಕರ್ನಾಟಕ ಸರ್ಕಾರವು ಏಪ್ರಿಲ್ 18ರಂದು ಕರ್ನಾಟಕ ಅಬಕಾರಿ ನಿಯಮಗಳಲ್ಲಿ ತಿದ್ದುಪಡಿ ಮಾಡುವ ಕರಡು ಅಧಿಸೂಚನೆಯನ್ನು ಹೊರಡಿಸಿದ್ದು, ಇದರ ಮೂಲಕ ಅಲ್ಕೋಬೆವ್ ಕ್ಷೇತ್ರದಲ್ಲಿ ಪ್ರಮುಖ ಸುಧಾರಣೆಗಳನ್ನು ಜಾರಿಗೆ ತರಲು ಮುಂದಾಗಿದೆ. ಈ ಬದಲಾವಣೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2026–27ರ ರಾಜ್ಯ ಬಜೆಟ್‌ನಲ್ಲಿ ಘೋಷಿಸಿದ್ದರು.

ಹೊಸ ನಿಯಮಗಳ ಪ್ರಕಾರ, ತೆರಿಗೆ ವಿಧಿಸುವುದು ಪಾನೀಯದಲ್ಲಿರುವ ಮದ್ಯದ ನಿಜವಾದ ಪ್ರಮಾಣದ ಆಧಾರದ ಮೇಲೆ ಇರಲಿದೆ.

ಅಂದರೆ ಪಾನೀಯದಲ್ಲಿನ ನೀರಿನ ಪ್ರಮಾಣಕ್ಕೆ ತೆರಿಗೆ ವಿಧಿಸುವ ಬದಲು ಮದ್ಯದ ಅಂಶಕ್ಕೆ ಮಾತ್ರ ತೆರಿಗೆ ವಿಧಿಸಲಾಗುತ್ತದೆ. ಈ ಮಾದರಿಯನ್ನು ಜಾಗತಿಕ ಮಟ್ಟದಲ್ಲಿ ಅನುಸರಿಸಲಾಗುತ್ತಿದ್ದು, ವಿಶ್ವ ಆರೋಗ್ಯ ಸಂಸ್ಥೆ ಸಹ ಶಿಫಾರಸು ಮಾಡಿದೆ.

ಸಂಸ್ಥೆಯ ಮಹಾನಿರ್ದೇಶಕ ವಿನೋದ್ ಗಿರಿ ಮಾತನಾಡಿ, ಈ ಕ್ರಮದಿಂದ ಕರ್ನಾಟಕವು ಆದಾಯ ಮತ್ತು ಸಾರ್ವಜನಿಕ ಆರೋಗ್ಯ ಗುರಿಗಳನ್ನು ಸಮನ್ವಯಗೊಳಿಸಿರುವ ದೇಶದ ಮೊದಲ ರಾಜ್ಯವಾಗುತ್ತದೆ ಎಂದು ಹೇಳಿದರು. ಇಂತಹ ಪ್ರಗತಿಪರ ನೀತಿಯನ್ನು ಇತರೆ ರಾಜ್ಯಗಳೂ ಅಳವಡಿಸಿಕೊಳ್ಳಲಿ ಎಂದು ಆಶಿಸಿದರು.

ಆದರೆ, ಬಿಯರ್ ಮೇಲಿನ ತೆರಿಗೆ ಸ್ಲ್ಯಾಬ್‌ಗಳಲ್ಲಿ ಕೆಲವು ಸುಧಾರಣೆ ಅಗತ್ಯವಿದೆ ಎಂದು ಸಂಸ್ಥೆ ಅಭಿಪ್ರಾಯಪಟ್ಟಿದ್ದು, ಈ ಕುರಿತು ತನ್ನ ಸಲಹೆಗಳನ್ನು ಶೀಘ್ರದಲ್ಲೇ ಸರ್ಕಾರಕ್ಕೆ ಸಲ್ಲಿಸುವುದಾಗಿ ತಿಳಿಸಿದೆ.

ಒಟ್ಟಾರೆ, ಎಬಿವಿ ಆಧಾರಿತ ತೆರಿಗೆ ವ್ಯವಸ್ಥೆ ಕರ್ನಾಟಕದ ಅಬಕಾರಿ ನೀತಿಯಲ್ಲಿ ಮಹತ್ವದ ಮೈಲುಗಲ್ಲಾಗಿದ್ದು, ರಾಜ್ಯವನ್ನು ಸುಧಾರಣಾಮುಖ ಆಡಳಿತದತ್ತ ಮತ್ತಷ್ಟು ಮುಂದಾಳತ್ವ ನೀಡಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

## ನವೀನ ಕೃಷಿ ಯಾಂತ್ರೀಕರಣ ಪರಿಹಾರಗಳ ಅನಾವರಣ

ಬೆಂಗಳೂರು



ಭಾರತದಲ್ಲಿ ಸಣ್ಣ ಗಾತ್ರದ ಕೃಷಿ ಯಂತ್ರೋಪಕರಣಗಳ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ವಿಎಸ್ಟಿ ಟಿಲ್ಲರ್ಸ್ ಟ್ರಾಕ್ಟರ್ಸ್ ಲಿಮಿಟೆಡ್, ಎಫ್‌ಕೆಸಿಸಿಐ ಗ್ಲೋಬಲ್ ಅಗ್ರಿಟೆಕ್ ಸಮಿಟ್ 2026ರಲ್ಲಿ ತನ್ನ ಅತ್ಯಾಧುನಿಕ ಕೃಷಿ ಯಾಂತ್ರೀಕರಣ ಪರಿಹಾರಗಳ ಹೊಸ ಸರಣಿಯನ್ನು ಅನಾವರಣಗೊಳಿಸಿದೆ. ಇಂಧನ ದಕ್ಷತೆ, ಕಾರ್ಯಕ್ಷಮತೆ ಮತ್ತು ಬಹುಮುಖತೆಯನ್ನು ಗಮನದಲ್ಲಿಟ್ಟುಕೊಂಡು ರೂಪುಗೊಂಡಿರುವ ಈ ಉತ್ಪನ್ನಗಳು ಸಣ್ಣ ಹಾಗೂ ಮಧ್ಯಮ ರೈತರ ಅಗತ್ಯಗಳಿಗೆ ಹೊಂದುವಂತೆ ವಿನ್ಯಾಸಗೊಳಿಸಲಾಗಿದೆ.

ಸಮಾರಂಭದ ಉದ್ಘಾಟನೆಯ ನಂತರ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಎಸ್ಟಿ ಮಳಿಗೆಯನ್ನು ಭೇಟಿ ನೀಡಿ ಪ್ರದರ್ಶಿಸಲಾದ ನವೀನ ಉತ್ಪನ್ನಗಳನ್ನು ಪರಿಶೀಲಿಸಿದರು. ಈ ವೇಳೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಉಪಸ್ಥಿತರಿದ್ದರು.

ಸಮಿಟ್‌ನಲ್ಲಿ ಕಂಪನಿಯು ಎಫ್‌ಇಎಸ್ ಸರಣಿ ಟ್ರಾಕ್ಟರ್‌ಗಳು, ಎಲೆಕ್ಟ್ರಿಕ್ ಪವರ್ ಟಿಲ್ಲರ್ ಮತ್ತು ಎಲೆಕ್ಟ್ರಿಕ್ ಪವರ್ ವೀಡರ್ ಸೇರಿದಂತೆ ಹಲವು ಹೊಸ ಆವಿಷ್ಕಾರಗಳನ್ನು ಪರಿಚಯಿಸಿದೆ. ಇವುಗಳು ಸುಸ್ಥಿರ ಹಾಗೂ ತಂತ್ರಜ್ಞಾನ ಆಧಾರಿತ ಕೃಷಿಯತ್ತ ಕಂಪನಿಯ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ.

ಎಫ್‌ಇಎಸ್ ಸರಣಿಯಲ್ಲಿ ಐದು ಪ್ರಮುಖ ಮಾದರಿಗಳಾದ 180, 224, 225, 929 ಇಎಕ್ಸ್ ಮತ್ತು 929 ವಿಎಕ್ಸ್ ಸೇರಿವೆ. 19 ರಿಂದ 30 ಅಶ್ವಶಕ್ತಿ ಸಾಮರ್ಥ್ಯ ಹೊಂದಿರುವ ಈ ಟ್ರಾಕ್ಟರ್‌ಗಳು 2 ಚಕ್ರ ಚಾಲನೆ ಮತ್ತು 4 ಚಕ್ರ ಚಾಲನೆ ಆಯ್ಕೆಗಳಲ್ಲಿ ಲಭ್ಯವಿದ್ದು, ಉತ್ತಮ ಉತ್ಪಾದಕತೆ, ಚಾಲಕರ ಆರಾಮ ಮತ್ತು ದೀರ್ಘಕಾಲಿಕ ನಂಬಿಕೆಯನ್ನು ಒದಗಿಸುವಂತೆ ರೂಪಿಸಲಾಗಿದೆ. ಸಣ್ಣ ಗಾತ್ರದಲ್ಲಿದ್ದರೂ ಶಕ್ತಿಶಾಲಿಯಾಗಿರುವ ಈ ಯಂತ್ರಗಳು ವಿವಿಧ ಭೂಪ್ರದೇಶಗಳಲ್ಲಿ ಬಳಸಲು ಅನುಕೂಲಕರವಾಗಿವೆ.

ಸುಸ್ಥಿರತೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಕಂಪನಿಯು ಎಲೆಕ್ಟ್ರಿಕ್ ಪವರ್ ಟಿಲ್ಲರ್ ಮತ್ತು ಎಲೆಕ್ಟ್ರಿಕ್ ಪವರ್ ವೀಡರ್‌ಗಳನ್ನು ಸಹ ಪ್ರದರ್ಶಿಸಿದೆ. ಈ ವಿದ್ಯುತ್ ಚಾಲಿತ ಯಂತ್ರಗಳು ಕಡಿಮೆ ಪರಿಸರ ಪರಿಣಾಮದೊಂದಿಗೆ ಹೆಚ್ಚಿನ ಕಾರ್ಯಕ್ಷಮತೆಯನ್ನು ಒದಗಿಸುವುದರ ಜೊತೆಗೆ, ಕಾರ್ಯಾಚರಣಾ ವೆಚ್ಚವನ್ನು ಕಡಿಮೆ ಮಾಡುವಲ್ಲಿ ಸಹಾಯಕವಾಗಿವೆ. ಹಸಿರು ಕೃಷಿಯತ್ತ ಮಹತ್ವದ ಹೆಜ್ಜೆಯಾಗಿ ಈ ಉತ್ಪನ್ನಗಳು ಪರಿಗಣಿಸಲಾಗುತ್ತಿವೆ.

## ಮೈಸೂರಿನಲ್ಲಿ ಇಬಸ್ ತಂತ್ರಜ್ಞಾನಕ್ಕೆ ಚಾಲನೆ

ಮೈಸೂರು

ಮೈಸೂರಿನ ವೈದ್ಯಕೀಯ ಕ್ಷೇತ್ರದಲ್ಲಿ ಮಹತ್ವದ ಮೈಲುಗಲ್ಲು ಸ್ಥಾಪನೆಯಾಗಿದ್ದು, ಮಣಿಪಾಲ್ ಆಸ್ಪತ್ರೆ ಮೈಸೂರು ಶ್ವಾಸಕೋಶದ ಗಂಭೀರ ಸಮಸ್ಯೆಗಳನ್ನು ನಿಖರವಾಗಿ ಪತ್ತೆಹಚ್ಚುವ 'ಎಂಡೋಬ್ರಾಂಕಿಯಲ್ ಅಲ್ಟ್ರಾಸೌಂಡ್' (ಇಬಸ್) ತಂತ್ರಜ್ಞಾನವನ್ನು ನಗರದಲ್ಲಿ ಮೊದಲ ಬಾರಿಗೆ ಪರಿಚಯಿಸಿದೆ.




ಮೈಸೂರು ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಕನ್ಸಲ್ಟೆಂಟ್ ವೈದ್ಯರಾದ ಡಾ. ಲಕ್ಷ್ಮಿ ನರಸಿಂಹನ್ ಆರ್ ಹಾಗೂ ಡಾ. ಸ್ಫೂರ್ತಿ ಕೆ ಈ ತಂತ್ರಜ್ಞಾನದ ಮಹತ್ವವನ್ನು ವಿವರಿಸಿದರು. ಆಸ್ಪತ್ರೆಯ ನಿರ್ದೇಶಕ ಸಂದೀಪ್ ಪಟೇಲ್ ಬಿ. ಜೆ. ಕೂಡ ಉಪಸ್ಥಿತರಿದ್ದರು.

ಈ ತಂತ್ರಜ್ಞಾನವು ಶ್ವಾಸಕೋಶದ ಒಳಭಾಗದ ಸೂಕ್ಷ್ಮ ಪ್ರದೇಶಗಳಲ್ಲಿ ಇರುವ ಗೆಡ್ಡೆಗಳನ್ನು ಹಾಗೂ ಇತರ ಗಂಭೀರ ಕಾಯಿಲೆಗಳನ್ನು ಶಸ್ತ್ರಚಿಕಿತ್ಸೆಯ ಅವಶ್ಯಕತೆ ಇಲ್ಲದೆ, ಅತ್ಯಂತ ನಿಖರವಾಗಿ ಪತ್ತೆಹಚ್ಚಲು ನೆರವಾಗುತ್ತದೆ. ವಿಶೇಷವಾಗಿ ಎದೆ ಭಾಗದ ಮಧ್ಯದಲ್ಲಿರುವ ಕಿರಿದಾದ ಪ್ರದೇಶಗಳಲ್ಲಿ ಸಾಮಾನ್ಯ ಪರೀಕ್ಷೆಗಳಿಂದ ಪತ್ತೆಹಚ್ಚಲು ಕಷ್ಟವಾಗುವ ಸಮಸ್ಯೆಗಳನ್ನು ಇಬಸ್ ಮೂಲಕ ಸುಲಭವಾಗಿ ಗುರುತಿಸಬಹುದು ಎಂದು ವೈದ್ಯರು ತಿಳಿಸಿದರು.

ಈ ಸಂದರ್ಭದಲ್ಲಿ ಚಿಕಿತ್ಸೆ ಪಡೆದ 54 ವರ್ಷದ ಗೃಹಿಣಿ ತಾಯಮ್ಮ ಅವರು ತಮ್ಮ ಅನುಭವವನ್ನು ಹಂಚಿಕೊಂಡರು. ಕಳೆದ ಹಲವು ತಿಂಗಳುಗಳಿಂದ ಜ್ವರ ಹಾಗೂ ನಿರಂತರ ಕೆಮ್ಮಿನಿಂದ ಬಳಲುತ್ತಿದ್ದ ಅವರು, ಹಲವು ಆಸ್ಪತ್ರೆಗಳಲ್ಲಿ ಪರೀಕ್ಷೆ ಮಾಡಿಸಿಕೊಂಡರೂ ಕಾಯಿಲೆ ಪತ್ತೆಯಾಗಿರಲಿಲ್ಲ. ಬಳಿಕ ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿದ ನಂತರ ಇಬಸ್ ತಂತ್ರಜ್ಞಾನ ಮೂಲಕ ಅವರ ಶ್ವಾಸಕೋಶದ ಸೂಕ್ಷ್ಮ ಭಾಗದಲ್ಲಿದ್ದ ಗೆಡ್ಡೆ ಪತ್ತೆಯಾಗಿ, ಸೂಕ್ತ ಚಿಕಿತ್ಸೆ ಆರಂಭಿಸಲಾಯಿತು.

"ಹಲವು ಕಡೆ ಪರೀಕ್ಷೆ ಮಾಡಿಸಿಕೊಂಡರೂ ಸ್ಪಷ್ಟ ಮಾಹಿತಿ ಸಿಗದೇ ಆತಂಕದಲ್ಲಿದ್ದೆ. ಮಣಿಪಾಲ್ ಆಸ್ಪತ್ರೆಯಲ್ಲಿ ಇಬಸ್ ಪರೀಕ್ಷೆಯ ನಂತರ ಕಾಯಿಲೆ ಸ್ಪಷ್ಟವಾಗಿ ತಿಳಿದು, ಈಗ ಗುಣಮುಖವಾಗುತ್ತಿರುವ ವಿಶ್ವಾಸ ಬಂದಿದೆ," ಎಂದು ಅವರು ಹೇಳಿದರು.

## ಮೈಸೂರಿನಲ್ಲಿ ಇಬಸ್ ತಂತ್ರಜ್ಞಾನಕ್ಕೆ ಚಾಲನೆ

ಮೈಸೂರು



ಮೈಸೂರಿನ ವೈದ್ಯಕೀಯ ಕ್ಷೇತ್ರದಲ್ಲಿ ಮಹತ್ವದ ಮೈಲುಗಲ್ಲು ಸ್ಥಾಪನೆಯಾಗಿದ್ದು, ಮಣಿಪಾಲ್ ಆಸ್ಪತ್ರೆ ಮೈಸೂರು ಶ್ವಾಸಕೋಶದ ಗಂಭೀರ ಸಮಸ್ಯೆಗಳನ್ನು ನಿಖರವಾಗಿ ಪತ್ತೆಹಚ್ಚುವ 'ಎಂಡೋಬ್ರಾಂಕಿಯಲ್ ಅಲ್ಟ್ರಾಸೌಂಡ್' (ಇಬಸ್) ತಂತ್ರಜ್ಞಾನವನ್ನು ನಗರದಲ್ಲಿ ಮೊದಲ ಬಾರಿಗೆ ಪರಿಚಯಿಸಿದೆ.

ಮೈಸೂರು ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಕನ್ಸಲ್ಟೆಂಟ್ ವೈದ್ಯರಾದ ಡಾ. ಲಕ್ಷ್ಮಿ ನರಸಿಂಹನ್ ಆರ್ ಹಾಗೂ ಡಾ. ಸ್ಫೂರ್ತಿ ಕೆ ಈ ತಂತ್ರಜ್ಞಾನದ ಮಹತ್ವವನ್ನು ವಿವರಿಸಿದರು. ಆಸ್ಪತ್ರೆಯ ನಿರ್ದೇಶಕ ಸಂದೀಪ್ ಪಟೇಲ್ ಬಿ. ಜೆ. ಕೂಡ ಉಪಸ್ಥಿತರಿದ್ದರು.

ಈ ತಂತ್ರಜ್ಞಾನವು ಶ್ವಾಸಕೋಶದ ಒಳಭಾಗದ ಸೂಕ್ಷ್ಮ ಪ್ರದೇಶಗಳಲ್ಲಿ ಇರುವ ಗೆಡ್ಡೆಗಳನ್ನು ಹಾಗೂ ಇತರ ಗಂಭೀರ ಕಾಯಿಲೆಗಳನ್ನು ಶಸ್ತ್ರಚಿಕಿತ್ಸೆಯ ಅವಶ್ಯಕತೆ ಇಲ್ಲದೆ, ಅತ್ಯಂತ ನಿಖರವಾಗಿ ಪತ್ತೆಹಚ್ಚಲು ನೆರವಾಗುತ್ತದೆ. ವಿಶೇಷವಾಗಿ ಎದೆ ಭಾಗದ ಮಧ್ಯದಲ್ಲಿರುವ ಕಿರಿದಾದ ಪ್ರದೇಶಗಳಲ್ಲಿ ಸಾಮಾನ್ಯ ಪರೀಕ್ಷೆಗಳಿಂದ ಪತ್ತೆಹಚ್ಚಲು ಕಷ್ಟವಾಗುವ ಸಮಸ್ಯೆಗಳನ್ನು ಇಬಸ್ ಮೂಲಕ ಸುಲಭವಾಗಿ ಗುರುತಿಸಬಹುದು ಎಂದು ವೈದ್ಯರು ತಿಳಿಸಿದರು.

ಈ ಸಂದರ್ಭದಲ್ಲಿ ಚಿಕಿತ್ಸೆ ಪಡೆದ 54 ವರ್ಷದ ಗೃಹಿಣಿ ತಾಯಮ್ಮ ಅವರು ತಮ್ಮ ಅನುಭವವನ್ನು ಹಂಚಿಕೊಂಡರು. ಕಳೆದ ಹಲವು ತಿಂಗಳುಗಳಿಂದ ಜ್ವರ ಹಾಗೂ ನಿರಂತರ ಕೆಮ್ಮಿನಿಂದ ಬಳಲುತ್ತಿದ್ದ ಅವರು, ಹಲವು ಆಸ್ಪತ್ರೆಗಳಲ್ಲಿ ಪರೀಕ್ಷೆ ಮಾಡಿಸಿಕೊಂಡರೂ ಕಾಯಿಲೆ ಪತ್ತೆಯಾಗಿರಲಿಲ್ಲ. ಬಳಿಕ ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿದ ನಂತರ ಇಬಸ್ ತಂತ್ರಜ್ಞಾನ ಮೂಲಕ ಅವರ ಶ್ವಾಸಕೋಶದ ಸೂಕ್ಷ್ಮ ಭಾಗದಲ್ಲಿದ್ದ ಗೆಡ್ಡೆ ಪತ್ತೆಯಾಗಿ, ಸೂಕ್ತ ಚಿಕಿತ್ಸೆ ಆರಂಭಿಸಲಾಯಿತು.

"ಹಲವು ಕಡೆ ಪರೀಕ್ಷೆ ಮಾಡಿಸಿಕೊಂಡರೂ ಸ್ಪಷ್ಟ ಮಾಹಿತಿ ಸಿಗದೇ ಆತಂಕದಲ್ಲಿದ್ದೆ. ಮಣಿಪಾಲ್ ಆಸ್ಪತ್ರೆಯಲ್ಲಿ ಇಬಸ್ ಪರೀಕ್ಷೆಯ ನಂತರ ಕಾಯಿಲೆ ಸ್ಪಷ್ಟವಾಗಿ ತಿಳಿದು, ಈಗ ಗುಣಮುಖವಾಗುತ್ತಿರುವ ವಿಶ್ವಾಸ ಬಂದಿದೆ," ಎಂದು ಅವರು ಹೇಳಿದರು.

## ಐಐಎಂ ಅಮೃತಸರ ಎಕ್ಸಿಕ್ಯೂಟಿವ್ ಎಮ್‌ಬಿಎ ಪ್ರವೇಶಾತಿ ಆರಂಭ

ಅಮೃತಸರ

ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಅಮೃತಸರ ತನ್ನ ಎರಡು ವರ್ಷಗಳ ಎಕ್ಸಿಕ್ಯೂಟಿವ್ ಮಾಸ್ಟರ್ ಆಫ್ ಬಿಸಿನೆಸ್ ಅಡ್ಮಿನಿಸ್ಟ್ರೇಶನ್ ಕಾರ್ಯಕ್ರಮದ ಆರನೇ ಬ್ಯಾಚ್‌ಗೆ ಪ್ರವೇಶಾತಿ ಪ್ರಕ್ರಿಯೆಯನ್ನು ಆರಂಭಿಸಿದೆ. ಅನುಭವೀ ವೃತ್ತಿಪರರು ತಮ್ಮ ನಾಯಕತ್ವ ಸಾಮರ್ಥ್ಯವನ್ನು ವೃದ್ಧಿಸಿಕೊಳ್ಳಲು ಈ ಕಾರ್ಯಕ್ರಮವನ್ನು ವಿನ್ಯಾಸಗೊಳಿಸಲಾಗಿದೆ.



ಈ ಕೋರ್ಸ್‌ನ ಪ್ರಮುಖ ವೈಶಿಷ್ಟ್ಯವೆಂದರೆ ಡೆನ್ಮಾರ್ಕ್‌ನಲ್ಲಿ ನಡೆಯುವ ಅಂತರಾಷ್ಟ್ರೀಯ ತೊಡಗಿಕೊಳ್ಳುವಿಕೆ ಕಾರ್ಯಕ್ರಮ. ಮೂರು ದಿನಗಳ ಈ ವಿಶೇಷ ಮಾಡ್ಯೂಲ್ ಮೂಲಕ ಭಾಗವಹಿಸುವವರು ದೀರ್ಘಸ್ಥಾಯಿತ್ವ, ಆವಿಷ್ಕಾರ ಹಾಗೂ ಆಡಳಿತದ ಕುರಿತ ಸ್ಕ್ಯಾಂಡಿನೇವಿಯನ್ ದೃಷ್ಟಿಕೋನವನ್ನು ಅರಿಯುವ ಅಪರೂಪದ ಅವಕಾಶ ಪಡೆಯಲಿದ್ದಾರೆ. ಈ ಕಾರ್ಯಕ್ರಮವನ್ನು ಡ್ಯಾನಿಶ್ ಸಂಸ್ಥೆಗಳ ಸಹಯೋಗದಲ್ಲಿ ರೂಪಿಸಲಾಗಿದೆ.

ಕಾರ್ಯಕ್ರಮದ ಘೋಷಣೆಯನ್ನು ಸಂಸ್ಥೆಯ ನಿರ್ದೇಶಕ ಸಮೀರ್ ಕೆ. ಶ್ರೀವಾಸ್ತವ, ಎಕ್ಸಿಕ್ಯೂಟಿವ್ ಎಮ್‌ಬಿಎ ಚೇರ್‌ಪರ್ಸನ್ ಪ್ರೊ. ವರ್ತಿಕಾ ದತ್ತ ಹಾಗೂ ಹಿರಿಯ ಸಿಬ್ಬಂದಿ ಉಪಸ್ಥಿತಿಯಲ್ಲಿ ನಡೆಸಲಾಯಿತು. ಈ ಮೂಲಕ ತಂತ್ರಜ್ಞಾನ ಮತ್ತು ಜಾಗತಿಕ ವ್ಯವಹಾರಗಳ ಸವಾಲುಗಳನ್ನು ಎದುರಿಸಲು ಅಗತ್ಯವಾದ ಕೌಶಲ್ಯಗಳನ್ನು ವೃತ್ತಿಪರರಿಗೆ ಒದಗಿಸುವ ಸಂಸ್ಥೆಯ ಬದ್ಧತೆಯನ್ನು ಪುನರುಚ್ಚರಿಸಲಾಯಿತು.

ಈ ಕುರಿತು ಮಾತನಾಡಿದ ಪ್ರೊ. ಸಮೀರ್ ಕೆ. ಶ್ರೀವಾಸ್ತವ, "ಎಕ್ಸಿಕ್ಯೂಟಿವ್ ಶಿಕ್ಷಣವು ಕೇವಲ ನಿರ್ವಹಣಾ ಜ್ಞಾನವಲ್ಲ, ಪರಿವರ್ತನಾತ್ಮಕ ಪಯಣವಾಗಿದೆ. ಜಾಗತಿಕ ದೃಷ್ಟಿಕೋನ, ನೈತಿಕ ಮೌಲ್ಯಗಳು ಮತ್ತು ಸ್ಪಷ್ಟ ಕಾರ್ಯಯೋಜನೆಗಳನ್ನು ಹೊಂದಿದ ನಾಯಕರನ್ನು ರೂಪಿಸುವುದೇ ನಮ್ಮ ಗುರಿ," ಎಂದು ಹೇಳಿದರು.

ಅಂತರಾಷ್ಟ್ರೀಯ ಅನುಭವ, ಪ್ರಾಯೋಗಿಕ ಕಲಿಕೆ ಮತ್ತು ಗಟ್ಟಿಯಾದ ಶೈಕ್ಷಣಿಕ ಅಧ್ಯಯನದ ಸಂಯೋಜನೆಯ ಮೂಲಕ ಭವಿಷ್ಯಕ್ಕೆ ಸಿದ್ಧ ನಾಯಕರನ್ನು ರೂಪಿಸುವತ್ತ ಈ ಕಾರ್ಯಕ್ರಮ ದಿಟ್ಟ ಹೆಜ್ಜೆಯಾಗಿದೆ ಎಂದು ಸಂಸ್ಥೆ ತಿಳಿಸಿದೆ.

## ನಾಡಿನ ಜನರ ಹೃದಯದಲ್ಲಿ ಯಡಿಯೂರಪ್ಪರಿಗೆ ಶಾಶ್ವತ ಸ್ಥಾನ

ಬೆಂಗಳೂರು

ರಾಜ್ಯದಲ್ಲಿ ಯಾವ ಮುಖ್ಯಮಂತ್ರಿಯವರು ಮಾಡಲಾಗದ ಜನಪರ ಕಾರ್ಯಗಳು, ಅಭಿವೃದ್ಧಿ ಕೆಲಸಗಳು ಯಡಿಯೂರಪ್ಪನವರು ಕಾಲದಲ್ಲಿ ಆಗಿದ್ದು, ಹಾಗಾಗಿಯೇ ಯಡಿಯೂರಪ್ಪನವರಿಗೀಗ ಯಾವುದೇ ರಾಜಕೀಯ ಸ್ಥಾನಮಾನ ಇಲ್ಲದಿದ್ದರೂ ನಾಡಿನ ಜನರು ತಮ್ಮ ಹೃದಯದಲ್ಲಿ ಶಾಶ್ವತವಾದ ಸ್ಥಾನ ನೀಡಿದ್ದಾರೆ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.



ನಗರದ ಮಾಗಡಿ ರಸ್ತೆಯ ಐತಿಹಾಸಿಕ ಪ್ರಸಿದ್ಧ ಎಲೆಕೊಡಿಗೇಹಳ್ಳಿಯಲ್ಲಿ, ಶ್ರೀ ಮಹಾಗಣಪತಿ, ಶ್ರೀ ಪಂಚಮುಖಿ ಶಿವಲಿಂಗೇಶ್ವರ ಮತ್ತು ಶ್ರೀನಂದಿಬಸವೇಶ್ವರ ನೂತನ ದೇವಾಲಯದ 48 ದಿನಗಳ ಮಂಡಲ ಪೂಜೆ ಮತ್ತು ಧಾರ್ಮಿಕ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪೂಜ್ಯ ತಂದೆಯರಾದ ಯಡಿಯೂರಪ್ಪನವರ ಬಗ್ಗೆ ನಾಡಿನ ಜನರು ಬಹಳ ಅಭಿಮಾನವನ್ನು ಇಟ್ಟುಕೊಂಡಿದ್ದಾರೆ. ಜನರ ಮಾತುಗಳು ಕೇಳಿದರೆ ನಿಜಕ್ಕೂ ಬಹಳ ಹೆಮ್ಮೆ ಎನಿಸುತ್ತದೆ. ತಂದೆಯವರು ನಮಗೆ ಕೊಟ್ಟಿರುವ ಆಸ್ತಿ ಏನೆಂದರೆ, ಅದು ನಾಡಿನ ಜನರ ಪ್ರೀತಿ ಮತ್ತು ಗೌರವ ಎಂದರು.

ರಾಜ್ಯದ ಯಾವುದೇ ಜಿಲ್ಲೆಗಾಗಲಿ, ಅಥವಾ ತಾಲ್ಲೂಕು, ಗ್ರಾಮಗಳಿಗಾಗಲಿ ಹೋದರೂ ಹಿರಿಯರು, ತಾಯಿಂದಿರರು ಮತ್ತು ಯುವಕ ಮಿತ್ರರು ಬಹಳ ಪ್ರೀತಿಯಿಂದ ಸ್ವಾಗತಿಸುತ್ತಾರೆ. ಇದಕ್ಕೆ ಕಾರಣ ಏನೆಂದರೆ, ವಿಜಯೇಂದ್ರ ಶಿಕಾರಿಪುರ ಶಾಸಕ, ಬಿಜೆಪಿ ರಾಜ್ಯಾಧ್ಯಕ್ಷ ಎನ್ನುವುದಕ್ಕಿಂತ ಹೆಚ್ಚಾಗಿ ನಮ್ಮ ಯಡಿಯೂರಪ್ಪನವರ ಮಗ ಬಂದಿದ್ದಾರೆಂದು ಬಹಳ ಖುಷಿಯಿಂದ ಆದರದಿಂದ ಸ್ವಾಗತ ಮಾಡಿಕೊಳ್ಳುತ್ತಾರೆ. ಮಠಾಧೀಶರು, ಸ್ವಾಮೀಜಿಗಳು ಕೂಡ ತಂದೆಯವರಿಗೆ ನೀಡಿದಷ್ಟೇ ಗೌರವ, ಆಶೀರ್ವಾದವನ್ನೂ ನಮಗೂ ನೀಡುತ್ತಿದ್ದು, ಇದು ಯಡಿಯೂರಪ್ಪನವರ ಮಾಡಿದಂತಹ ಒಳ್ಳೆಯ ಕೆಲಸ ಕಾರ್ಯಗಳ ಫಲ ಎಂದು ಹೇಳಿದರು.

ನಾಡಿನ ಜನರ ಆಶೀರ್ವಾದದಿಂದ ಯಡಿಯೂರಪ್ಪನವರು ನಾಲ್ಕು ಬಾರಿ ಮುಖ್ಯಮಂತ್ರಿಗಳಾಗಿ ರೈತಾಪಿ ವರ್ಗ, ಬಡವರು, ದೀನದಲಿತರರಿಗೆ ಬಹಳಷ್ಟು ಒಳ್ಳೆಯ ಕೆಲಸ ಕಾರ್ಯಗಳನ್ನು ಮಾಡಿದ್ದಾರೆ. ಮಠ–ಮಾನ್ಯಗಳಿಗೆ, ಗುಡಿ–ಗೋಪುರಗಳಿಗೂ ಜಾತಿ, ಮತ, ಧರ್ಮ ಎಣಿಸದೆ ಎಲ್ಲರಿಗೂ ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ; ವಿಶೇಷವಾಗಿ ಗ್ರಾಮೀಣ ಪ್ರದೇಶದಲ್ಲಿ ಅನ್ನದಾಸೋಹ. ವಿದ್ಯಾರ್ಜನೆಗೆ ನೀಡುತ್ತಿರುವ ಮಠಮಾನ್ಯಗಳಿಗೆ ಅನುದಾನ ನೀಡಿದ್ದು ಸದುಪಯೋಗ ಆಗಿದೆ. ರೈತರು, ಬಡವರು, ಶ್ರಮಿಕರು, ಸಣ್ಣ ವ್ಯಾಪಾರಿಗಳು ಸಂಕಷ್ಟಕ್ಕೊಳಗಾದಗ ಅವರ ನೆರವಿಗೆ ವಿಶೇಷ ಕಾರ್ಯಕ್ರಮ ರೂಪಿಸಿ ಪ್ಯಾಕೇಜ್ ನೀಡಿದ್ದು ಅನುಕರಣೀಯ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಎಲೆಕೊಡಿಗೇಹಳ್ಳಿ ಶ್ರೀನಂದಿ ಬಸವೇಶ್ವರ ದೇವಸ್ಥಾನದ ಪುನರುತ್ಥಾರಕ, ದೇಶದ ಯಜಮಾನರಾದ ಡಾ. ಎನ್. ನಂಜುಂಡೇಶ್, ಜೋಳರ ಕಾಲದ ಶ್ರೀನಂದಿ ಬಸವೇಶ್ವರ ದೇವಸ್ಥಾನಕ್ಕೆ ಈ ಹಿಂದೆ ಯಡಿಯೂರಪ್ಪನವರು ಬಂದಿದ್ದರು. ಈಗ ಅವರ ಮಗ ವಿಜಯೇಂದ್ರರವರು ಆಗಮಿಸಿರುವುದು ಈ ಭಾಗದ ಜನರಲ್ಲಿ ಬಹಳ ಸಂತಸ ತಂದಿದೆ.



ಗಾಂಧಿನಗರ ವಿಧಾನಸಭಾ ಕ್ಷೇತ್ರದ ದತ್ತಾತ್ರೇಯ ವಾರ್ಡ್, ಸ್ವತಂತ್ರ ಪಾಳ್ಯ ಹಾಗೂ ಆಂಜನೇಯ ಬ್ಲಾಕ್‌ನಲ್ಲಿ ಇಂದು ಏರ್ಪಡಿಸಲಾಗಿದ್ದ ಅಣ್ಣಮ್ಮ ದೇವಿ, ಕರುಮಾರಿಯಮ್ಮ ಹಾಗೂ ಶನಿಮಹೇಶ್ವರ ದೇವರುಗಳ ವಿಶೇಷ ಪೂಜಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ದಿನೇಶ್ ಗುಂಡೂರಾವ್ ಅವರು ಪುನೀತರಾದರು. ಇದೇ ಸಂದರ್ಭದಲ್ಲಿ ಆಯೋಜಿಸಲಾಗಿದ್ದ ಅನ್ನದಾನ ಸೇವೆಗೆ ಚಾಲನೆ ನೀಡಿ, ಭಕ್ತಾದಿಗಳಿಗೆ ಪ್ರಸಾದ ವಿತರಿಸಿದೆನು. ನಂತರ ಸ್ಥಳೀಯ ನಿವಾಸಿಗಳೊಂದಿಗೆ ಸಮಾಲೋಚನೆ ನಡೆಸಿ, ಅವರ ಯೋಗಕ್ಷೇಮ ಹಾಗೂ ಈ ಭಾಗದ ಸಮಸ್ಯೆಗಳ ಕುರಿತು ಮಾತುಕತೆ ನಡೆಸಲಾಯಿತು. ಆ ದೈವಶಕ್ತಿಯು ಎಲ್ಲರಿಗೂ ಸುಖ, ಶಾಂತಿ ಮತ್ತು ಸಮೃದ್ಧಿಯನ್ನು ನೀಡಲಿ ಎಂದು ಈ ಸಂದರ್ಭದಲ್ಲಿ ಪ್ರಾರ್ಥಿಸಿದೆನು.

# ವಿದ್ಯಾರ್ಥಿಗಳ ಗುಂಪಿನ ಮೇಲೆ ಮಾರಣಾಂತಿಕ ಹಲ್ಲೆ

ಬೆಂಗಳೂರು

ರಾಜ್ಯ ರಾಜಧಾನಿಯಲ್ಲಿ ವಿದ್ಯಾರ್ಥಿಗಳ ಗಲಾಟೆ ಹೆಚ್ಚಾಗುತ್ತಿದೆ. ಯಾರು ಹೇಳುವವರು ಕೇಳುವವರು ಇಲ್ಲದ್ದಂತಾಗಿದೆ. ಇದೀಗ ಸಿಲಿಕಾನ್ ಸಿಟಿಯಲ್ಲಿ ವ್ಯಾಸಂಗ ಮಾಡುತ್ತಿರುವ ಹೊರರಾಜ್ಯದ ವಿದ್ಯಾರ್ಥಿಗಳ ನಡುವಿನ ಸಣ್ಣ ಕಿರಿಕ್, ಭೀಕರ ದರೋಡೆ ಮತ್ತು ಹಲ್ಲೆಯಲ್ಲಿ ಅಂತ್ಯವಾಗಿರುವ ಘಟನೆ ಕೋಣನಕುಂಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಕೇರಳ ಮೂಲದ ವಿದ್ಯಾರ್ಥಿಗಳ ಮೇಲೆ ತಮಿಳುನಾಡು ಮೂಲದ ವಿದ್ಯಾರ್ಥಿಗಳ ತಂಡ ಚಾಕುವಿನಿಂದ ಹಲ್ಲೆ ನಡೆಸಿ ದರೋಡೆ ಮಾಡಿದೆ ಎಂದು ಹೇಳಲಾಗಿದೆ.

ಬೆಂಗಳೂರಿನ ಟಿ.ಜಾನ್ ಕಾಲೇಜಿನಲ್ಲಿ ವಿವಿಧ ಕೋರ್ಸ್‌ಗಳಲ್ಲಿ 4ನೇ ಸೆಮಿಸ್ಟರ್ ವ್ಯಾಸಂಗ ಮಾಡುತ್ತಿರುವ ಕೇರಳದ ಇರ್ಫಾನ್ ಮೊಹಮ್ಮದ್ ಮತ್ತು ಅವರ ಸ್ನೇಹಿತರು ಕೋಣನಕುಂಟೆಯ ಪವಮಾನ ನಗರದಲ್ಲಿ ಬಾಡಿಗೆ ಮನೆ ಮಾಡಿಕೊಂಡಿದ್ದರು. ಏಪ್ರಿಲ್ 17ರ ರಾತ್ರಿ ಇರ್ಫಾನ್, ಆದರ್ಶ್ ಮತ್ತು ಡಾರ್ವಿನ್ ಮನೆಯಲ್ಲಿದ್ದಾಗ ಈ ದಾಳಿ ನಡೆದಿದೆ.

ರಾತ್ರಿ ಸುಮಾರು 10:25ಕ್ಕೆ 6 ಜನರ ತಂಡ ಇರ್ಫಾನ್ ಅವರ ಮನೆಗೆ ನುಗ್ಗಿದ್ದಾರೆ. ಚಾಕು ತೋರಿಸಿ ಹಣಕ್ಕಾಗಿ ಬೆದರಿಸಿದ್ದಾರೆ. "ನಮ್ಮ ಬಳಿ ಹಣವಿಲ್ಲ" ಎಂದು ಹೇಳಿದ್ದಕ್ಕೆ ಆಕ್ರೋಶಗೊಂಡ ತಂಡವು ಚಾಕುವಿನಿಂದ ಮೂವರ ಮೇಲೂ ಹಲ್ಲೆ ನಡೆಸಿದೆ. ಅಷ್ಟೇ ಅಲ್ಲದೆ, ಅವರ ಬಳಿ ಇದ್ದ 4 ಮೊಬೈಲ್ ಫೋನ್‌ಗಳು ಮತ್ತು ಒಂದು ದ್ವಿಚಕ್ರ ವಾಹನವನ್ನು ಕಿತ್ತುಕೊಂಡು ಪರಾರಿಯಾಗಿದ್ದಾರೆ.

ಕೋಣನಕುಂಟೆ ಪೊಲೀಸರು ಕಾರ್ಯಾಚರಣೆ ನಡೆಸಿ ತಮಿಳುನಾಡು ಮೂಲದ ನವೀನ್ ಕುಮಾರ್, ಕುಮಾರನ್, ವಿಮಲ್ ರಾಜ್, ಅಭಿನೇಶ್, ಕಲೈವೆಂದನ್ ಮತ್ತು ಪ್ರೇಮ್ ವಿಚಾರಣೆ ನಡೆಸಿದಾಗ ಸ್ಫೋಟಕ ಸತ್ಯ ಬಯಲಾಗಿದೆ. ದೂರುದಾರ ಇರ್ಫಾನ್ ಮತ್ತು ಆರೋಪಿ ಅಭಿನೇಶ್ ಒಂದೇ ಕಾಲೇಜಿನವರು ಎಂಬುದು ಗೊತ್ತಾಗಿದೆ. ಈ ಹಿಂದೆ ಕಾಲೇಜಿನಲ್ಲಿ ಸಣ್ಣ ವಿಚಾರಕ್ಕೆ ಗಲಾಟೆ ನಡೆದಾಗ ಕೇರಳ ಮೂಲದ ವಿದ್ಯಾರ್ಥಿಗಳು ಅಭಿನೇಶ್‌ಗೆ ಥಳಿಸಿದ್ದರು. ಇದರ ಸೇಡು ತೀರಿಸಿಕೊಳ್ಳಲು ಅಭಿನೇಶ್ ತಮಿಳುನಾಡಿನಿಂದ ತನ್ನ ಸ್ನೇಹಿತರನ್ನು ಬೆಂಗಳೂರಿಗೆ ಕರೆಸಿಕೊಂಡಿದ್ದ, ಕೇರಳ ವಿದ್ಯಾರ್ಥಿಗಳ ಮೇಲೆ ದಾಳಿ ಮಾಡಬೇಕು ಎಂದು ಈ ಪ್ಲಾನ್ ಮಾಡಿಕೊಂಡಿದ್ದರು ಎಂದು ಹೇಳಲಾಗಿದೆ.

"ಬರುವುದು ಬಂದಿದ್ದೇವೆ, ಬರೀ ಹೊಡೆಯುವುದು ಮಾತ್ರವಲ್ಲ ಎಲ್ಲವನ್ನೂ ದೋಚೋಣ" ಎಂದು ಪ್ಲಾನ್ ಮಾಡಿ ದರೋಡೆ ನಡೆಸಿದ್ದರು. ಬಂಧಿತ ಆರೋಪಿಗಳಿಂದ ದರೋಡೆ ಮಾಡಿದ್ದ ವಸ್ತುಗಳನ್ನು ವಶಪಡಿಸಿಕೊಂಡಿರುವ ಕೋಣನಕುಂಟೆ ಪೊಲೀಸರು, ಆರೋಪಿಗಳನ್ನು ಜೈಲಿಗಟ್ಟಿದ್ದಾರೆ. ಕ್ಷುಲ್ಲಕ ಕಾರಣಕ್ಕೆ ಆರಂಭವಾದ ಗಲಾಟೆ ಈಗ ವಿದ್ಯಾರ್ಥಿಗಳ ಭವಿಷ್ಯವನ್ನೇ ಅಂಧಕಾರಕ್ಕೆ ತಳ್ಳಿದೆ.

# ಸದ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವದಲ್ಲಿ ಸಮಸ್ಯೆ ಇಲ್ಲ: ಡಿಸಿಎಂ ಡಿಕೆಶಿ

ಬೆಂಗಳೂರು

ನಾಯಕತ್ವದ ವಿಚಾರದಲ್ಲಿ ನಮ್ಮಲ್ಲಿ ಯಾವುದೇ ಸಮಸ್ಯೆ ಇಲ್ಲ. ನಾನು, ಸಿಎಂ ಹೈಕಮಾಂಡ್ ಹೇಳಿದಂತೆ ನಡೆದುಕೊಳ್ಳುತ್ತೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ದೆಹಲಿಗೆ ಹೋದ ವಿಚಾರವಿರಲಿ ನಾನು ಇನ್ನು ಮುಂದೆ ರಾಜಕೀಯ ವಿಚಾರಗಳನ್ನ ಮಾಧ್ಯಮದ ಮುಂದೆ ಮಾತನಾಡುವುದಿಲ್ಲ. ಸಮಯ ಬಂದಾಗ ಅದಾಗಿ ಅದೇ ಗೊತ್ತಾಗುತ್ತೆ. ನಮ್ಮಲ್ಲಿ ಯಾವುದೇ ಸಮಸ್ಯೆಯೂ ಇಲ್ಲ. ಯಾವ ರಾಜಕೀಯ ಇಲ್ಲ. ಏನೇನು ಯಾವಾಗ ಯಾವಾಗ ಆಗಬೇಕು ಆವಾಗ ಆಗುತ್ತೆ. ಏನೇನು ತೀರ್ಮಾನಗಳು ಆಗಿದ್ದಾವೋ ಅದು ಚಾಲ್ತಿಗೆ ಬರುತ್ತೆ ಎಂದು ತಿಳಿಸಿದರು.

ಪಕ್ಷದಲ್ಲಿ ಗೊಂದಲಗಳು ಇವೆ ಎಂಬ ಸತೀಶ್ ಜಾರಕಿಹೊಳಿ ಹೇಳಿಕೆ ವಿಚಾರವಾಗಿ ಮಾತನಾಡಿ, ನಮ್ಮ ಪಾರ್ಟಿಯಲ್ಲಿ ಯಾವ ಸಮಯದಲ್ಲಿ ಏನು ಮಾಡಬೇಕು ಆವಾಗ ಮಾಡುತ್ತಾರೆ. ನಮಗೆ ನಮ್ಮ ಪಕ್ಷದ ಮೇಲೆ ವಿಶ್ವಾಸ ಇದೆ. ಏನು ಮಾಡಬೇಕು ಅವರಿಗೆ ಗೊತ್ತಿದೆ. ನಾಯಕತ್ವ ಬದಲಾವಣೆ ವಿಚಾರ ನಿಮಗೇನಾದರೂ ಇರಬಹುದು. ನಾನು ಯಾವತ್ತು ಚರ್ಚೆ ಮಾಡಲು ಹೋಗಿಲ್ಲ. ಹೈಕಮಾಂಡ್ ಯಾವಾಗ ಹೇಳುತ್ತಾರೆ ಆವಾಗ ಅದರಂತೆ ನಡೆದುಕೊಳ್ಳುತ್ತೇವೆ ಎಂದರು.

ನಾವು ಕೊಟ್ಟ ಮಾತಿನಂತೆ ಒಳಮೀಸಲಾತಿ ಜಾರಿ ಮಾಡಿದ್ದೇವೆ. ಒಳಮೀಸಲಾತಿಯನ್ನು ಬಿಜೆಪಿ ಟೀಕೆ ಮಾಡುತ್ತಿದೆ. ಬಿಜೆಪಿಯವರ ಕೈಯಲ್ಲಿ ಏನು ಮಾಡಲು ಆಗಿಲ್ಲ. ನಾವೇನು ಮಾತು ಕೊಟ್ಟಿದೆವೋ ಆ ಮಾತಿನ ಪ್ರಕಾರ ನಡೆದಿದ್ದೇವೆ.

ಹಿಂದೆ 17% ಇದ್ದಾಗಲೂ ನಾವು ಸರಿಯಾಗಿಯೇ ಮಾಡಿದ್ದೆವು. ಈಗಲೂ ಕೂಡ ಬಹಳ ಸರಳತೆಯಿಂದ ಮಾಡಿದ್ದೇವೆ. ಒಂದೇ ಸಮಸ್ಯೆ ಏನಿತ್ತು ಅಂದರೆ ಬಲಪಂಥ ಎಡಪಂಥ ಮೊದಲು ಯಾರಿಗೆ ನಂತರ ಯಾರಿಗೆ ಅನ್ನುವುದಿತ್ತು. ಅದಕ್ಕೆ ಅವಶ್ಯವಿರುವಂತಹ ದಾರಿಯನ್ನ ಕಂಡು ಹಿಡಿದಿಯಲಾಗಿದೆ ಬಲವಿರಲಿ ಎಡವಿರಲಿ ಲಂಬಾಣಿ ಇರಲಿ ಬೋವಿ ಇರಲಿ, ಎಬಿಸಿ ಎಲ್ಲರಿಗೂ ನ್ಯಾಯ ಒದಗಿಸುವ ಕೆಲಸವನ್ನು ನಮ್ಮ ಸರಕಾರ ಮಾಡಿದೆ ಎಂದು ತಿಳಿಸಿದರು.

30,40 ವರ್ಷದಿಂದ ಇದ್ದಂತಹ ಸಮಸ್ಯೆಯನ್ನು ನಾವು ಮಾತುಕೊಟ್ಟಂತೆ ಈಡೇರಿಸಿದ್ದೇವೆ. ಎಲ್ಲರಿಗೂ ನ್ಯಾಯ ಕೊಡುತ್ತಿದ್ದೇವೆ. ಎಲ್ಲರೂ ಒಟ್ಟಾಗಿ ಹೋಗಬೇಕು ಅಷ್ಟೇ ಎಂದಿದ್ದಾರೆ.

ಇದೇ ಸಂದರ್ಭದಲ್ಲಿ ಬಿ.ಎಸ್.ಯಡಿಯೂರಪ್ಪ ಅಭಿಮಾನೋತ್ಸವ ವಿಚಾರದ ಬಗ್ಗೆಯೂ ಮಾತನಾಡಿದ ಅವರು, ಮಾಡಿಕೊಳ್ಳಲಿ ಬಿಡಿ ಹೋರಾಟ ಮಾಡಿದ್ದಾರೆ. ರಾಜಕೀಯ ವಿದಾಯ ಹೇಳಬೇಕಲ್ವ? ಅವರ ಪಕ್ಷಕ್ಕೆ ಸ್ಟ್ರೆಂಥ್ ಬೇಕಲ್ವಾ. ಅವರ ಪಕ್ಷಕ್ಕೆ ಏನೋ ಗುಡುಗು ಎಲ್ಲಾ ಕೊಡಬೇಕಲ್ವಾ ಎಂದು ಹೇಳಿದರು.

# ರಾಜ್ಯದ 1,082 ನಗರಾಭಿವೃದ್ಧಿ ಯೋಜನೆಗಳ ಪ್ರಸ್ತಾವನೆ ಕೇಂದ್ರಕ್ಕೆ ಸಲ್ಲಿಕೆ

ನವದೆಹಲಿ

ಎರಡು ದಿನಗಳ ದೆಹಲಿ ಪ್ರವಾಸದಲ್ಲಿ ಬೆಂಗಳೂರು ನಗರದ ಅಭಿವೃದ್ಧಿ ವಿಚಾರವಾಗಿ ಕೇಂದ್ರ ಸಚಿವರು, ವಿವಿಧ ರಾಜ್ಯಗಳ ಚುನಾವಣೆ ಬಗ್ಗೆ ಹೈಕಮಾಂಡ್ ನಾಯಕರ ಭೇಟಿ ಮಾಡಿ ಚರ್ಚೆ ನಡೆಸಿದ್ದೇನೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.



ದೆಹಲಿಯಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶನಿವಾರ ರಾತ್ರಿ ಪ್ರತಿಕ್ರಿಯೆ ನೀಡಿದರು.

ಮಲ್ಲಿಕಾರ್ಜುನ ಖರ್ಗೆ ಅವರ ಭೇಟಿ ವಿಚಾರವಾಗಿ ಕೇಳಿದಾಗ, "ಅವರು ಎಐಸಿಸಿ ಅಧ್ಯಕ್ಷರು, ನಾನು ಕೆಪಿಸಿಸಿ ಅಧ್ಯಕ್ಷ. ನಾನು ನಮ್ಮ ಅಧ್ಯಕ್ಷರನ್ನು ಭೇಟಿ ಮಾಡದೇ ಬೇರೆ ಯಾರು ಭೇಟಿ ಮಾಡುತ್ತಾರೆ. ಪಕ್ಷ ನನಗೆ ಕೇರಳ, ಅಸ್ಸಾಂ ಹಾಗೂ ತಮಿಳುನಾಡು ಚುನಾವಣೆ ಪ್ರಚಾರದ ಜವಾಬ್ದಾರಿ ವಹಿಸಿತ್ತು. ನಾನು ಅಲ್ಲಿ ಪಕ್ಷದ ಪ್ರಣಾಳಿಕೆ ಬಿಡುಗಡೆ ಮಾಡಿದೆ, ರಾಹುಲ್ ಗಾಂಧಿ ಅವರ ಪ್ರಚಾರದಲ್ಲೂ ಭಾಗಿಯಾಗಿದ್ದೆ. ನಮ್ಮ ರಾಜ್ಯದಲ್ಲೂ ಉಪಚುನಾವಣೆ ನಡೆದಿದೆ. ಅಸ್ಸಾಂಗೆ ನಾನು ಕೊನೆ ದಿನ ಮತ್ತೊಮ್ಮೆ ಹೋಗಬೇಕಿದೆ.

ಕೇಂದ್ರ ಸಚಿವರ ಭೇಟಿ ಬಗ್ಗೆ ಕೇಳಿದಾಗ, "ಬೆಂಗಳೂರು ಮೂಲಸೌಕರ್ಯ ಅಭಿವೃದ್ಧಿಗೆ ರಕ್ಷಣಾ ಇಲಾಖೆಯ ಜಾಗಗಳ ಅಗತ್ಯವಿದೆ. ಈ ವಿಚಾರವಾಗಿ ರಕ್ಷಣಾ ಮಂತ್ರಿ ರಾಜನಾಥ್ ಸಿಂಗ್ ಅವರನ್ನು ಭೇಟಿ ಮಾಡಿ ಚರ್ಚೆ ಮಾಡಿದೆ. ಸ್ಕೈಡೆಕ್ ಯೋಜನೆಗೆ ರಕ್ಷಣಾ ವಿಮಾನ ನಿಲ್ದಾಣ ಹೆಚ್‌ಎಎಲ್ ನಿಂದ ಅಡ್ಡಿ ಎದುರಾಗಿತ್ತು. ಪ್ರೀಮಿಯಂ ಎಫ್‌ಎಆರ್ ವಿಚಾರವಾಗಿ ಚರ್ಚೆ ಮಾಡಿದೆ. ಬೆಂಗಳೂರು ಬಿಸಿನೆಸ್ ಕಾರಿಡಾರ್ ಯೋಜನೆಯಲ್ಲಿ ಭೂಮಿ ಕಳೆದುಕೊಳ್ಳುವವರು ಟಿಡಿಆರ್ ಹಾಗೂ ಎಫ್‌ಎ ಆರ್ ಪಡೆಯುವವರಿಗೆ ನಿರ್ಬಂಧ ಹೇರಲಾಗಿತ್ತು. ಹೀಗಾಗಿ ಇವರಿಗೆ ಅನುಕೂಲವಾಗಲು ರಾಜ್ಯ ಸರ್ಕಾರದಿಂದ ಪ್ರಸ್ತಾವನೆ ಸಲ್ಲಿಸಿದ್ದೇವೆ. ಕಳೆದ ಬಾರಿ ದೆಹಲಿಗೆ ಬಂದಾಗ ನಾಗರಿಕ ವಿಮಾನಯಾನ ಸಚಿವರನ್ನು ಭೇಟಿ ಮಾಡಿ ಚರ್ಚೆ ಮಾಡಿದ್ದೆ" ಎಂದರು.

"ಕೇಂದ್ರ ನಾಗರಾಭಿವೃದ್ಧಿ ಸಚಿವರಾದ ಮನೋಹರ್ ಲಾಲ್ ಖಟ್ಟರ್ ಅವರು ಅರ್ಬನ್ ಚಾಲೆಂಜ್ ಫಂಡ್ ಮೂಲಕ ನಗರಾಭಿವೃದ್ಧಿಗೆ 1 ಲಕ್ಷ ಕೋಟಿ ಹಣ ಮೀಸಲಿಟ್ಟಿದ್ದು, ನಮ್ಮ ರಾಜ್ಯದ ಎಲ್ಲಾ ನಗರಾಗಳಿಗೂ ಸೇರಿ 5 ಸಾವಿರ ಕೋಟಿ ಹಣ ಮೀಸಲಿಟ್ಟಿದ್ದಾರೆ. ಇದಕ್ಕೆ ಕೆಲವು ಮಾನದಂಡ ನಿಗದಿ ಮಾಡಿದ್ದು, ನಮ್ಮ ರಾಜ್ಯದಿಂದ 1,082 ಯೋಜನೆಗಳ ಪ್ರಸ್ತಾವನೆ ಅವರ ಮುಂದೆ ಇರಿಸಿದ್ದೇವೆ. 1.25 ಲಕ್ಷ ಕೋಟಿ ಮೊತ್ತದ ಯೋಜನೆಗಳ ಪ್ರಸ್ತಾವನೆ ಸಲ್ಲಿಸಿದ್ದು, ಕೇಂದ್ರ ಸರ್ಕಾರ ಸುಮಾರು 32– 35 ಸಾವಿರ ಕೋಟಿ ಪಾಲು ನೀಡಬೇಕಿದೆ. ಹೀಗಾಗಿ 5 ಸಾವಿರ ಕೋಟಿಗಿಂತ ಹೆಚ್ಚಿನ ಹಣ ನೀಡಬೇಕು ಎಂದು ಕೇಳಿದ್ದೇನೆ. ಬೇರೆ ರಾಜ್ಯದವರು ಈ ಅನುದಾನ ಪಡೆಯದಿದ್ದರೆ ನಾವು ಪಡೆಯಲು ಸಿದ್ಧವಿದ್ದೇವೆ ಎಂದು ಹೇಳಿದ್ದೇನೆ. ಅವರು ನೋಡೋಣ ಎಂದಿದ್ದಾರೆ. ನಾನು, ರಹೀಮ್ ಖಾನ್ ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸದ್ದೇವೆ. 1.25 ಲಕ್ಷ ಕೋಟಿ ಮೊತ್ತದ ಯೋಜನೆಗಳ ಪ್ರಸ್ತಾವನೆ ಸಲ್ಲಿಸಿದ್ದು, ಕೇಂದ್ರ ಸರ್ಕಾರ ಸುಮಾರು 32– 35 ಸಾವಿರ ಕೋಟಿ ಪಾಲು ನೀಡಬೇಕಿದೆ. ಹೀಗಾಗಿ 5 ಸಾವಿರ ಕೋಟಿಗಿಂತ ಹೆಚ್ಚಿನ ಹಣ ನೀಡಬೇಕು ಎಂದು ಕೇಳಿದ್ದೇನೆ.

ಅವರು ನೋಡೋಣ ಎಂದಿದ್ದಾರೆ. ನಾನು, ರಹೀಮ್ ಖಾನ್ ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸದ್ದೇವೆ. ಹುಡ್ಕೋ ವತಿಯಿಂದ 50% ಸಾಲ ನೀಡಲು ನಿರ್ಧರಿಸಿದ್ದಾರೆ. ಕೇಂದ್ರ ಸರ್ಕಾರ 25% ಹಾಗೂ ರಾಜ್ಯ ಸರ್ಕಾರ ಅಥವಾ ಸ್ಥಳೀಯ ಸಂಸ್ಥೆ 25% ವೆಚ್ಚ ಭರಿಸಬೇಕಿದೆ. ಈ ಅವಕಾಶ ಬಿಡಬಾರದು ಎಂದು ಪ್ರಸ್ತಾವನೆ ಸಲ್ಲಿಸಿದ್ದೇವೆ" ಎಂದು ವಿವರಿಸಿದರು.

# ತೇಜಸ್ವಿ ಸೂರ್ಯ ಅವರಿಂದ ಹೊಗಳಿಕೆ ನಿರೀಕ್ಷಿಸುವವರು ಮೂರ್ಖರು

ಬೆಂಗಳೂರು

ಬೆಂಗಳೂರಿನ ಫೀಲ್ಡ್ ಮಾರ್ಷಲ್ ಮಾಣೆಕ್ ಷಾ ಪೆರೇಡ್ ಮೈದಾನದಲ್ಲಿ ಭಾನುವಾರ ಏರ್ಪಡಿಸಿದ್ದ "ಟಿಸಿಎಸ್ ವರ್ಲ್ಡ್ 10 ಕೆ" ಓಟಕ್ಕೆ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ರಾಜ್ಯಪಾಲರಾದ ಥಾವರ್ ಚಂದ್ ಗೆಹಲೋಟ್ ಅವರ ಜತೆ ಚಾಲನೆ ನೀಡಿದರು. ನಂತರ ಮ್ಯಾರಥಾನ್ ಓಟಗಾರರಿಗೆ ಪ್ರಶಸ್ತಿ ಪತ್ರ ವಿತರಿಸಿದರು.

ನಂತರ ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿ,"ಭಾನುವಾರ (ಇಂದು) ಬೆಳಗಿನ ಜಾವ 3.00 ಗಂಟೆಗೆ ದೆಹಲಿಯಿಂದ ವಾಪಸ್ ಬಂದು, ಟಿಸಿಎಸ್ ನ 10ಕೆ ಮ್ಯಾರಥಾನ್ ನಲ್ಲಿ ಭಾಗವಹಿಸಿದ್ದೆ. ಮೊದಲೇ ಒಪ್ಪಿಕೊಂಡಿದ್ದರಿಂದ ನಾನು ಹಾಗೂ ರಾಜ್ಯಪಾಲರು ಭಾಗಿಯಾಗಿದ್ದೇವೆ" ಎಂದು ತಿಳಿಸಿದರು.

"ಸುಮಾರು 32 ಸಾವಿರ ಜನ ಭಾಗಿಯಾಗಿದ್ದರು. ಅದರಲ್ಲಿ 26% ಮಹಿಳೆಯರು ಭಾಗವಹಿಸಿದ್ದರು. ಬೆಂಗಳೂರಿಗರು ಮಾತ್ರವಲ್ಲದೆ ವಿದೇಶದಿಂದಲೂ ಜನರು ಬಂದಿದ್ದರು. ಸುಮಾರು ಐದರಿಂದ ಆರು ದಿನಗಳ ಕಾಲ ಪರಿಶೀಲನೆ ಕೂಡ ನಡೆದಿತ್ತು. ಟ್ರ್ಯಾಕ್ ಈ ಬಾರಿ ತುಂಬಾ ಚೆನ್ನಾಗಿತ್ತು ಅನ್ನೋ ಅಭಿಪ್ರಾಯ ಓಟಗಾರರಿಂದ ಕೇಳಿಬಂದಿದೆ. ಈ ಬಾರಿ ತುಂಬಾ ಚೆನ್ನಾಗಿ ಆಯೋಜಿಸಲಾಗಿದೆ ಅಂತ ತೇಜಸ್ವಿ ಸೂರ್ಯ ಕೂಡ ಅಭಿನಂದಿಸಿದರು. ಓಮರ್ ಅಬ್ದುಲ್ಲಾ ಕೂಡ ಈ ಮ್ಯಾರಥಾನ್ ನಲ್ಲಿ ಭಾಗಿಯಾಗಿದ್ದರು. ಈ ರೀತಿ ಕ್ರೀಡಾ ಹಾಗೂ ಪ್ರವಾಸೋದ್ಯಮ ಕಾರ್ಯಕ್ರಮಗಳನ್ನು ಮಾಡುವುದರಿಂದ ಬೆಂಗಳೂರಿಗೆ ತುಂಬಾ ಅನುಕೂಲ ಆಗಲಿದೆ. ಟಿಸಿಎಸ್ ಅವರಿಗೆ ಅಭಿನಂದನೆಗಳು" ಎಂದು ತಿಳಿಸಿದರು.

2 ವಾರಗಳ ಹಿಂದೆ ಸಾಮಾಜಿಕ ಜಾಲತಾಣದಲ್ಲಿ ತೇಜಸ್ವಿ ಸೂರ್ಯ ಅವರು ಬೆಂಗಳೂರು ಮೂಲಸೌಕರ್ಯ ಬಗ್ಗೆ ಟೀಕೆ ಮಾಡಿದ ವಿಚಾರವಾಗಿ ಕೇಳಿದಾಗ, "ಅವರು ಇರುವುದೇ ಟೀಕೆ ಮಾಡುವುದಕ್ಕೆ. ಅವರ ಕೈಯಿಂದ ಇನ್ನೇನು ಮಾಡಲು ಆಗುವುದಿಲ್ಲ. ಟೀಕೆ ಮಾಡದೇ ಅವರೇನು ಹೊಗಳುತ್ತಾರಾ? ಅವರು ಹೊಗಳುತ್ತಾರೆ ಅಂತ ನಾವು ಭಾವಿಸಿದರೆ ನಾವು ಮೂರ್ಖರು" ಎಂದು ತಿರುಗೇಟು ನೀಡಿದರು.

# ಬಿಎಸ್‌ವೈ ಅಭಿಮಾನೋತ್ಸವ ಅಂಗವಾಗಿ ಐತಿಹಾಸಿಕ ಕಾರ್ಯಕ್ರಮ



ಚಿತ್ರದುರ್ಗ

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮವನ್ನು ಅಭೂತಪೂರ್ವ ಹಾಗೂ ಐತಿಹಾಸಿಕವಾಗಿ ಮೇ 9 ರಂದು ಚಿತ್ರದುರ್ಗದಲ್ಲಿ ಆಯೋಜಿಸಲಾಗಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಹಾಗೂ ಸಂಸದರಾದ ಗೋವಿಂದ ಕಾರಜೋಳ ಅವರು ತಿಳಿಸಿದ್ದಾರೆ.

ಬಿಎಸ್ ವೈ ಅಭಿಮಾನೋತ್ಸವದ ಹಿನ್ನೆಲೆಯಲ್ಲಿ ಸಮಾರಂಭದ ಸ್ಥಳದಲ್ಲಿ ಇಂದು ಭೂಮಿಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ಅವರು ಮಾಧ್ಯಮಗಳೊಂದಿಗೆ ಮಾತನಾಡಿದರು. ಅಭಿಮಾನೋತ್ಸವದಲ್ಲಿ ಕೇಂದ್ರ ಗೃಹ ಸಚಿವರಾದ ಅಮಿತ್ ಶಾ ಅವರು ಭಾಗವಹಿಸಿ ಉದ್ಘಾಟನೆ ನೆರವೇರಿಸಿ ಅಭಿಮಾನ ಸಮರ್ಪಣೆ ಮಾಡಲಿದ್ದಾರೆ. ರಾಜ್ಯದ ಕಾವೇರಿ ನದಿಯಿಂದ ಭೀಮಾ ನದಿವರೆಗಿನ ಜಿಲ್ಲೆಗಳ ಹತ್ತು ಲಕ್ಷಕ್ಕೂ ಹೆಚ್ಚು ಜನ ಸೇರಲಿದ್ದಾರೆ. ಹಿಂದೆಂದೂ ಇಂತಹ ಕಾರ್ಯಕ್ರಮ ಆಗಿರಲಿಲ್ಲ ಎಂಬಂತೆ ಅಭೂತಪೂರ್ವವಾಗಿ ಆಯೋಜಿಸಲಾಗುವುದು ಎಂದರು.

ಅಭಿಮಾನೋತ್ಸವದ ಸಿದ್ಧತೆಗಳು ಭರದಿಂದ ಸಾಗಿವೆ. ಅಸಂಖ್ಯ ಕಾರ್ಯಕರ್ತರು ಕೆಲಸಕ್ಕೆ ಸಿದ್ಧವಾಗಿದ್ದಾರೆ. ಅವರೆಲ್ಲ ಬಿಎಸ್‌ವೈ ಅವರ ಮೇಲಿನ ಅಭಿಮಾನದಿಂದ ಸ್ವಯಂಪ್ರೇರಿತರಾಗಿ ತೊಡಗಿಸಿಕೊಂಡಿದ್ದಾರೆ. ಸಮಾರಂಭದಲ್ಲಿ ಸಂಸದರು, ಕೇಂದ್ರ ಸಚಿವರು, ಶಾಸಕರು, ಮಾಜಿ ಶಾಸಕರು, ಮಾಜಿ ಸಚಿವರು, ಪಕ್ಷದ ನೂರಾರು ಮುಖಂಡರು, ಬಿಎಸ್‌ವೈ ಅವರ ಅಭಿಮಾನಿಗಳು, ರೈತರು, ಮಹಿಳೆಯರು ಭಾಗವಹಿಸಲಿದ್ದಾರೆ ಎಂದು ವಿವರಿಸಿದರು.

## ಅಪ್ರಾಪ್ತ ಬಾಲಕಿಯ ಮೇಲಿನ ಅತ್ಯಾಚಾರ, ಲೈಂಗಿಕ ಶೋಷಣೆ ಪ್ರಕರಣ

ಬೆಂಗಳೂರು

ಅಪ್ರಾಪ್ತ ಬಾಲಕಿಯ ಮೇಲಿನ ಅತ್ಯಾಚಾರ, ಲೈಂಗಿಕ ಶೋಷಣೆ ಹಾಗೂ ಬಲವಂತದ ಮತಾಂತರ ಆರೋಪಗಳಿಗೆ ಸಂಬಂಧಿಸಿದಂತೆ ಗಂಭೀರ ಪ್ರಕರಣ ಬೆಳಕಿಗೆ ಬಂದಿದೆ. ಉತ್ತರ ಪ್ರದೇಶ ಮೂಲದ ಮಹಮ್ಮದ್ ಅನಾಸ್ ಎಂಬಾತ 'ಬ್ಯೂಟಿ ಪಾರ್ಲರ್' ನೆಪದಲ್ಲಿ ಯುವತಿಯರಿಗೆ ಉದ್ಯೋಗ ನೀಡಿ, ಬಳಿಕ ಅವರನ್ನು ಲೈಂಗಿಕವಾಗಿ ದುರುಪಯೋಗಪಡಿಸಿಕೊಂಡು, ಅಶ್ಲೀಲ ವಿಡಿಯೋಗಳ ಮೂಲಕ ಬೆದರಿಕೆ ಹಾಕಿ ಮತಾಂತರಕ್ಕೆ ಒತ್ತಾಯಿಸಿದ್ದಾನೆ ಎಂಬ ಆರೋಪ ಕೇಳಿಬಂದಿದೆ.

ಶ್ರೀರಾಮ ಸೇನೆ ಸೇರಿದಂತೆ ಹಲವು ಸಂಘಟನೆಗಳ ಮುಖಂಡರು ಬೆಂಗಳೂರಿನ ಜೀವನ ಭೀಮಾ ನಗರ ಪೊಲೀಸ್ ಠಾಣೆಗೆ ಭೇಟಿ ನೀಡಿ ಇನ್ಸ್‌ಪೆಕ್ಟರ್ ಅವರಿಗೆ ಮನವಿ ಸಲ್ಲಿಸಿದರು.

# ಮಾತುಕತೆ ವಿಫಲ

ವಾಷಿಂಗ್ಟನ್

ಇರಾನ್ ಮತ್ತು ಅಮೆರಿಕದ ನಡುವಿನ ಕದನ ವಿರಾಮ ಮಾತುಕತೆಗಳಿಗೆ ಸಂಬಂಧಿಸಿದಂತೆ ಪಾಕಿಸ್ತಾನದಲ್ಲಿ ನಡೆಯಬೇಕಿದ್ದ ಶಾಂತಿ ಮಾತುಕತೆ ಸಭೆ ರದ್ದಾಗಿದೆ.

ಇರಾನ್ ಪ್ರಸ್ತಾಪ ಅಮೆರಿಕದ ನಿರೀಕ್ಷೆಗಳಿಗೆ ತಕ್ಕಂತೆ ಇರಲಿಲ್ಲ ಮತ್ತು ಅಮೆರಿಕದ ಪ್ರತಿನಿಧಿಗಳನ್ನು ಕಳುಹಿಸುವುದು ಸಮಯ ಮತ್ತು ಹಣದ ವ್ಯರ್ಥ ಎಂದು ಹೇಳಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಭೆಯನ್ನು ರದ್ದುಗೊಳಿಸಿದ್ದಾರೆ.

ತನ್ನ 'ಟ್ರೂತ್ ಸೋಶಿಯಲ್' ಖಾತೆಯಲ್ಲಿ ಬರೆದಿರುವ ಟ್ರಂಪ್, "ಇರಾನ್ ನಾಯಕತ್ವದಲ್ಲಿ ತೀವ್ರ ಗೊಂದಲ ಮತ್ತು ಆಂತರಿಕ ಕಲಹಗಳಿವೆ, ಅಲ್ಲಿ ಯಾರು ಅಧಿಕಾರದಲ್ಲಿದ್ದಾರೆ ಎಂಬುದು ಅವರಿಗೆ ತಿಳಿದಿಲ್ಲ.

ಅಲ್ಲಿ ಯಾರ ಜೊತೆ ಮಾತನಾಡಬೇಕು ಎನ್ನುವುದು ಯಾರಿಗೂ ತಿಳಿದಿಲ್ಲ. ನಾವು ಎಲ್ಲಾ ಕಾರ್ಡ್‌ಗಳನ್ನು ಹೊಂದಿದ್ದೇವೆ, ಅವರಿಗೆ ಮಾತನಾಡಲು ಮನಸ್ಸಿದ್ದರೆ ಅವರೇ ದೂರವಾಣಿ ಮೂಲಕ ನಮ್ಮನ್ನು ಸಂಪರ್ಕಿಸಬಹುದು" ಎಂದು ಹೇಳಿದ್ದಾರೆ.

ನಿಗದಿ ಪ್ರಕಾರ ನಡೆದಿದ್ದರೆ ಅಮೆರಿಕದ ಅವರ ವಿಶೇಷ ಪ್ರತಿನಿಧಿಗಳಾದ ಸ್ಟೀವ್ ವಿಟ್ಕಾಫ್ ಮತ್ತು ಜೇರೆಡ್ ಕುಶ್ನರ್ ಅವರು ಶನಿವಾರ ಪಾಕಿಸ್ತಾನಕ್ಕೆ ಶನಿವಾರ ಆಗಮಿಸಬೇಕಿತ್ತು.

ಅಮೆರಿಕದೊಂದಿಗೆ ನೇರ ಮಾತುಕತೆ ನಡೆಸುವುದಿಲ್ಲ ಎಂದು ಮೊದಲೇ ಇರಾನ್ ತಿಳಿಸಿತ್ತು. ತನ್ನ ಅಭಿಪ್ರಾಯಗಳನ್ನು ಪಾಕಿಸ್ತಾನದ ಮೂಲಕ ಅಮೆರಿಕಕ್ಕೆ ತಿಳಿಸಲಿದೆ ಎಂದು ಇರಾನ್ ವಿದೇಶಾಂಗ ಸಚಿವಾಲಯ ಸ್ಪಷ್ಟಪಡಿಸಿತ್ತು.

ಅಮೆರಿಕ–ಇರಾನ್ ಉನ್ನತ ಮಟ್ಟದ ಭೇಟಿಗಳ ಹಿನ್ನೆಲೆಯಲ್ಲಿ ಇಸ್ಲಾಮಾಬಾದ್ ಮತ್ತು ರಾವಲ್ಪಿಂಡಿಯಲ್ಲಿ ಭಾರೀ ಭದ್ರತೆ ಕಲ್ಪಿಸಲಾಗಿತ್ತು. ಸರಿಸುಮಾರು 10,000ಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು.

ಈ ಸಂಘರ್ಷವನ್ನು ತಣಿಸಲು ಪಾಕಿಸ್ತಾನವು ಮಧ್ಯಸ್ಥಿಕೆ ವಹಿಸಿ ಇಸ್ಲಾಮಾಬಾದ್‌ನಲ್ಲಿ ಸಭೆಯನ್ನು ಆಯೋಜಿಸಿತ್ತು. ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ ಪಾಕಿಸ್ತಾನಕ್ಕೆ ಶುಕ್ರವಾರ ತಡರಾತ್ರಿ ಆಗಮಿಸಿದ್ದರು. ಈಗ ಟ್ರಂಪ್ ಸಭೆಯನ್ನು ದಿಢೀರ್ ರದ್ದುಗೊಳಿಸಿದ್ದರಿಂದ ಪಾಕಿಸ್ತಾನಕ್ಕೆ ಹಿನ್ನಡೆಯಾಗಿದೆ.

ಇರಾನ್‌ನ ಎಲ್ಲಾ ಯುರೇನಿಯಂ ಪುಷ್ಟೀಕರಣ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಲ್ಲಿಸಬೇಕು ಮತ್ತು ಎಲ್ಲಾ ಪ್ರಮುಖ ಪುಷ್ಟೀಕರಣ ಕೇಂದ್ರಗಳನ್ನು ಮುಚ್ಚಬೇಕೆಂದು ಅಮೆರಿಕ ಪಟ್ಟು ಹಿಡಿದಿತ್ತು. ಇರಾನ್ ಪರಮಾಣು ಅಸ್ತ್ರಗಳನ್ನು ಹೊಂದಲು ನಾವು ಬಿಡುವುದಿಲ್ಲ ಎಂದು ಹೇಳಿತ್ತು.

ತನ್ನ ಮೇಲೆ ವಿಧಿಸಲಾಗಿರುವ ಎಲ್ಲಾ ಆರ್ಥಿಕ ನಿರ್ಬಂಧಗಳನ್ನು ತಕ್ಷಣವೇ ತೆರವುಗೊಳಿಸಬೇಕು ಮತ್ತು ತೈಲ ಆದಾಯವನ್ನು ಬಿಡುಗಡೆ ಮಾಡಬೇಕೆಂದು ಇರಾನ್ ಒತ್ತಾಯಿಸಿತ್ತು. ಅಲ್ಲದೆ ಸಂಘರ್ಷದಿಂದಾದ ಹಾನಿಗೆ ಯುದ್ಧ ಪರಿಹಾರ ನೀಡಬೇಕೆಂದು ಇರಾನ್ ಬೇಡಿಕೆಯಿಟ್ಟಿತು, ಇದನ್ನು ಅಮೆರಿಕ ತಿರಸ್ಕರಿಸಿತ್ತು.

ವಿಶ್ವದ ಪ್ರಮುಖ ತೈಲ ಸಾಗಾಣಿಕಾ ಮಾರ್ಗವಾದ ಹಾರ್ಮುಜ್ ಜಲಸಂಧಿಯ ಮೇಲೆ ಪೂರ್ಣ ಸಾರ್ವಭೌಮತ್ವ ಮತ್ತು ಅಲ್ಲಿ ಚಲಿಸುವ ಹಡಗುಗಳ ಮೇಲೆ ಶುಲ್ಕ (ಟೋಲ್) ವಿಧಿಸುವ ಹಕ್ಕನ್ನು ಇರಾನ್ ಕೇಳಿದ್ದರಿಂದ ಮಾತುಕತೆ ಮತ್ತೆ ಮುಂದುವರಿಯಲಿಲ್ಲ.

# ಪ್ರಾಯಸವಾದರೂ ಕೆಕೆಆರ್‌ಗೆ ರೋಚಕ ಗೆಲುವು

ಚೆನ್ನೈ

ಎಡಗೈ ಬ್ಯಾಟರ್ ಸಾಯಿ ಸುದರ್ಶನ್ (87) ಅವರ ಅರ್ಧಶತಕದ ನೆರವಿನಿಂದ ಗುಜರಾತ್ ಟೈಟಾನ್ಸ್ ತಂಡವು ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ 8 ವಿಕೆಟ್‌ಗಳ ಜಯ ಸಾಧಿಸಿದೆ. 159 ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ಜಿಟಿ ಕೇವಲ 16.4 ಓವರ್‌ಗಳಲ್ಲೇ ಗೆಲುವಿನ ನಗೆ ಬೀರಿತು.



ಇಲ್ಲಿನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಸಿಎಸ್‌ಕೆ 7 ವಿಕೆಟ್ ನಷ್ಟಕ್ಕೆ 158 ರನ್ ಗಳಿಸಿತು. ಬಳಿಕ ಟಾರ್ಗೆಟ್ ಬೆನ್ನಟ್ಟಿದ ಟೈಟಾನ್ಸ್‌ಗೆ ನಾಯಕ ಶುಭ್ಮನ್ ಗಿಲ್ (33) ಹಾಗೂ ಸಾಯಿ ಸುದರ್ಶನ್ ಉತ್ತಮ ಆರಂಭ (58 ರನ್ ಜೊತೆಯಾಟ) ಒದಗಿಸಿದರು. ನೂರ್ ಅಹ್ಮದ್ ಬೌಲಿಂಗ್ ನಲ್ಲಿ ಸ್ಟಂಪ್ ಔಟ್ ಆಗುವ ಮೂಲಕ ಗಿಲ್ ಪೆವಿಲಿಯನ್‌ಗೆ ಮರಳಿದರು. ಬಳಿಕ ಕ್ರೀಸ್‌ಗೆ ಬಂದ ಜೋಸ್ ಬಟ್ಲರ್ (39*) ಸಂದರ್ಭಾನುಸಾರ ಬ್ಯಾಟಿಂಗ್ ತೋರಿ, ಸಿಕ್ಸರ್ ಮೂಲಕ ತಂಡವನ್ನು ಗೆಲುವಿನ ದಡ ಸೇರಿಸಿದರು. ಸೂಪರ್ ಕಿಂಗ್ಸ್ ಪರ ನೂರ್ ಹಾಗೂ ಅಕೀಲ್ ಹೊಸೈನ್ ತಲಾ ಒಂದು ವಿಕೆಟ್ ಪಡೆದರು.

ಇದಕ್ಕೂ ಮುನ್ನ, ಬ್ಯಾಟಿಂಗ್ ವೈಫಲ್ಯ ಅನುಭವಿಸಿದ ಚೆನ್ನೈ ಸೂಪರ್ ಕಿಂಗ್ಸ್ ತಂಡವು ನಾಯಕ ರುತುರಾಜ್ ಗಾಯಕ್ವಾಡ್ ಅವರ ಏಕಾಂಗಿ ಹೋರಾಟದ ಬಲದಿಂದ ಗುಜರಾತ್ ಟೈಟಾನ್ಸ್‌ಗೆ 159 ರನ್‌ಗಳ ಗೆಲುವಿನ ಗುರಿ ನೀಡಿತ್ತು. ಸಿಎಸ್‌ಕೆ ಇನ್ನಿಂಗ್ಸ್ ಆರಂಭದಿಂದಲೂ ವಿಕೆಟ್ ಕಳೆದುಕೊಳ್ಳುತ್ತ ಸಾಗಿತು. 37 ರನ್‌ಗಳಿಗೆ ಪ್ರಮುಖ ನಾಲ್ಕು ವಿಕೆಟ್‌ಗಳನ್ನು ಕಳೆದುಕೊಂಡು ಒತ್ತಡಕ್ಕೆ ಸಿಲುಕಿತ್ತು. ಈ ಹಂತದಲ್ಲಿ ಸಮಯೋಚಿತ ಬ್ಯಾಟಿಂಗ್ ಮಾಡಿದ ಗಾಯಕ್ವಾಡ್ ಅಜೇಯ ಅರ್ಧಶತಕ (74, 60 ಎಸೆತ)ದ ಮೂಲಕ ತಂಡಕ್ಕೆ ನೆರವಾದರು.

ಇನ್ನುಳಿದಂತೆ, ಸಂಜು ಸ್ಯಾಮ್ಸನ್ 11, ಶಿವಂ ದುಬೆ 22, ಕಾರ್ತಿಕ್ ಶರ್ಮಾ 15 ಹಾಗೂ ಜೆಮಿ ಓವರ್ಟನ್ 18 ರನ್ ಗಳಿಸಿ ತಂಡಕ್ಕೆ ಕಾಣಿಕೆ ನೀಡಿದರು. ಉಳಿದ ಯಾವೊಬ್ಬ ಬ್ಯಾಟರ್‌ಗಳೂ ಕೂಡ ಎರಡಂಕಿ ಮೊತ್ತ ತಲುಪಲಿಲ್ಲ. ಹಲವರು ದೊಡ್ಡ ಹೊಡೆತಕ್ಕೆ ಯತ್ನಿಸಿ ವಿಕೆಟ್‌ಗಳನ್ನು ಒಪ್ಪಿಸಿದರು. ಸಿಎಸ್‌ಕೆ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 158 ರನ್ ಗಳಿಸಿತು. ಟೈಟಾನ್ಸ್ ಪರ ಕಗಿಸೋ ರಬಾಡ 3, ಅರ್ಷದ್ ಖಾನ್ 2 ಹಾಗೂ ಮೊಹಮದ್ ಸಿರಾಜ್ ಮತ್ತು ಮನವ್ ಸುಥರ್ ತಲಾ ಒಂದು ವಿಕೆಟ್ ಪಡೆದರು.

ಚೆನ್ನೈ ಸೂಪರ್ ಕಿಂಗ್ಸ್ ತಂಡ ಟೂರ್ನಿಯ 8 ಪಂದ್ಯಗಳಲ್ಲಿ ಮೂರರಲ್ಲಿ ಗೆದ್ದು, ಐದು ಸೋಲುಗಳನ್ನು ಕಂಡಿದೆ. ಇದರಿಂದ ಅಂಕಪಟ್ಟಿಯಲ್ಲಿ 6ನೇ ಸ್ಥಾನಕ್ಕೆ ಜಾರಿದೆ. ಹಾಗೆಯೇ, ಗುಜರಾತ್ ಟೈಟಾನ್ಸ್ ಕೂಡ 8 ಪಂದ್ಯಗಳಲ್ಲಿ ನಾಲ್ಕು ಗೆಲುವು ಕಂಡರೆ, ನಾಲ್ಕು ಸಲ ಪರಾಭವಗೊಂಡಿದೆ. 8 ಅಂಕಗಳೊಂದಿಗೆ 5ನೇ ಸ್ಥಾನಕ್ಕೆ ತಲುಪಿದೆ.

ಭಾರತ ಸಾರಥಿ
28/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಡಿಸಿ ಗಡುವು; ಕಾಮಗಾರಿ ವಿಳಂಬಕ್ಕೆ ಅಧಿಕಾರಿಗಳ ತರಾಟೆ

ತಿಪಟೂರು

ನಗರದ ಜನತೆಗೆ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಅಗತ್ಯವಿರುವ ವಾರ್ಡ್‌ಗಳಲ್ಲಿ ಕೂಡಲೇ ಕೊಳವೆಬಾವಿ ಕೊರೆಸಿ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಶುಭಕಲ್ಯಾಣ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರಸಭೆ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನೊಣವಿನಕೆರೆ ಹೋಬಳಿಯ



ಮಾಟನಹಳ್ಳಿಯಲ್ಲಿ ಸಂಭವಿಸಿದ ಸಿಲಿಂಡರ್ ಸ್ಫೋಟದಿಂದ ಎರಡು ಮನೆಗಳು ಹಾನಿಗೊಳಗಾಗಿರುವ ಕುರಿತು ಚರ್ಚಿಸಿದ ಜಿಲ್ಲಾಧಿಕಾರಿಗಳು, "ತಹಶೀಲ್ದಾರ್ ಮತ್ತು ಅಗ್ನಿಶಾಮಕ ದಳದಿಂದ ವರದಿ ಬಂದ ತಕ್ಷಣ ಸಂಬಂಧಪಟ್ಟ ಗ್ಯಾಸ್ ಏಜೆನ್ಸಿ ಮೂಲಕ ಸಂತ್ರಸ್ತರಿಗೆ ಸೂಕ್ತ ಪರಿಹಾರ ಕೊಡಿಸಲಾಗುವುದು" ಎಂದು ತಿಳಿಸಿದರು.

ಗಾಜಿನ ಮನೆ ನಿರ್ಮಾಣ: ಅಮಾನಿಕೆರೆ ಆವರಣದಲ್ಲಿ ಗಾಜಿನ ಮನೆ ಹಾಗೂ ಎಪಿಎಂಸಿ ಆವರಣದಲ್ಲಿ ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಈಗಾಗಲೇ ತೀರ್ಮಾನಿಸಲಾಗಿದೆ.

ಬೆಸ್ಕಾಂ ಕಚೇರಿ: ರಜತಾದ್ರಿಪುರ ಮತ್ತು ಕೊನೆಹಳ್ಳಿ ಭಾಗದಲ್ಲಿ ಬೆಸ್ಕಾಂ ಕಚೇರಿ ನಿರ್ಮಾಣಕ್ಕೆ ಸರ್ಕಾರದಿಂದ ಒಪ್ಪಿಗೆ ದೊರೆತಿದೆ.

ಮುಖ್ಯಮಂತ್ರಿಗಳು ಮಂಜೂರು ಮಾಡಿರುವ ಎಲ್ಲಾ ಕಾರ್ಯಕ್ರಮಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಪೌರಾಯುಕ್ತರಿಗೆ ಸೂಚಿಸಿದರು.

ಇದಕ್ಕೂ ಮುನ್ನ ಕಲ್ಪತರು ಆಡಿಟೋರಿಯಂನಲ್ಲಿ ನಡೆದ ಕಂದಾಯ ಇಲಾಖೆ ಸಭೆಯಲ್ಲಿ, ಬಾಕಿ ಇರುವ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲು ಸೂಚಿಸಿದರು. ವಿಶೇಷವಾಗಿ ಇ-ಪೌತಿ ಕೆಲಸಗಳನ್ನು ಶನಿವಾರದೊಳಗೆ ಪೂರ್ಣಗೊಳಿಸುವಂತೆ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿಗಳಿಗೆ ಗಡುವು ನೀಡಿದರು.

ಜಿಲ್ಲಾಧಿಕಾರಿಗಳ ಇಷ್ಟೊಂದು ಪ್ರಮುಖ ಪ್ರವಾಸದ ಬಗ್ಗೆ ಪತ್ರಕರ್ತರಿಗೆ ಹಾಗೂ ಸಾರ್ವಜನಿಕರಿಗೆ ಮುಂಚಿತವಾಗಿ ಮಾಹಿತಿ ನೀಡದ ಇಲಾಖೆಯ ಕ್ರಮಕ್ಕೆ ಸ್ಥಳೀಯ ಪತ್ರಿಕಾ ಪ್ರತಿನಿಧಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಶಾಸಕ ಕೆ. ಷಡಕ್ಷರಿ, ಉಪವಿಭಾಗಾಧಿಕಾರಿ ಬಿ.ಕೆ. ಸಪ್ತಶ್ರೀ, ಪೌರಾಯುಕ್ತ ವಿಶ್ವೇಶ್ವರ ಬದರಗಡೆ, ತಹಶೀಲ್ದಾರ್ ಮೋಹನ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಸಂಪಿನ ಕಾಮಗಾರಿಯ ತನಿಖೆಗೆ ಒತ್ತಾಯಿಸಿ ಮನವಿ



ವಿಜಯಪುರ

ಪಟ್ಟಣದ 11ನೇ ವಾರ್ಡ್‌ನ ಚಂದೇನಹಳ್ಳಿ ಗೇಟ್ ನಲ್ಲಿ, ಸ.ನಂ.69 ರಲ್ಲಿ ನಿರ್ಮಾಣ ಮಾಡುತ್ತಿರುವ ಕುಡಿಯುವ ನೀರಿನ ಸಂಪಿನ ಕಾಮಗಾರಿ ಕಳಪೆಯಾಗಿದ್ದು, ಕೂಡಲೇ ಸೂಕ್ತ ತನಿಖೆ ನಡೆಸುವಂತೆ ಕರ್ನಾಟಕ ದಲಿತ ಜನಸೇನೆಯ ಪದಾಧಿಕಾರಿಗಳು ಪುರಸಭೆ ಮುಖ್ಯಾಧಿಕಾರಿಗೆ ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಕರ್ನಾಟಕ ದಲಿತ ಜನಸೇನೆಯ ರಾಜ್ಯಾಧ್ಯಕ್ಷ ಟಿ.ಭರತ್ ಮಾತನಾಡಿ, 11 ನೇ ವಾರ್ಡಿನಲ್ಲಿ ನಡೆಯುತ್ತಿರುವ ನೀರಿನ ಸಂಪಿನ ಕಾಮಗಾರಿಗೆ ಬಳಕೆ ಮಾಡುತ್ತಿರುವ ಕಬ್ಬಿಣ, ಸಿಮೆಂಟ್, ಹಾಗೂ ಎಂ.ಸ್ಯಾಂಡ್ ಗುಣಮಟ್ಟದಲ್ಲಿ ಇಲ್ಲ. ನಿಗದಿತ ಪ್ರಮಾಣದಲ್ಲಿ ಕಚ್ಚಾವಸ್ತುಗಳನ್ನು ಬಳಕೆ ಮಾಡಿಲ್ಲ. ಸಂಪಿನ ಸುತ್ತಲೂ, ಕಳಪೆ ಗುಣಮಟ್ಟದ ಮಣ್ಣನ್ನು ತಂದು ಸುರಿದಿದ್ದಾರೆ. ಕೇವಲ ಒಂದು ತಿಂಗಳಿನಲ್ಲಿ ಸಂಪಿನ ಕಾಮಗಾರಿ ಮಾಡಿದ್ದು, ಸರಿಯಾಗಿ ಕ್ಯೂರಿಂಗ್ ಮಾಡಿಲ್ಲ. ಈ ಬಗ್ಗೆ ಸೂಕ್ತ ತನಿಖೆಯಾಗಬೇಕು. ಗುತ್ತಿಗೆದಾರರ ಮೇಲೆ ಕ್ರಮ ಕೈಗೊಳ್ಳಬೇಕು. ಕಳಪೆ ಕಾಮಗಾರಿಯಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದು, ಅವರನ್ನು ಕಪ್ಪು ಪಟ್ಟಿಗೆ ಸೇರಿಸಬೇಕು ಎಂದು ಒತ್ತಾಯಿಸಿದರು.

ಮನವಿ ಪತ್ರವನ್ನು ಸ್ವೀಕರಿಸಿದ ಪುರಸಭೆ ಮುಖ್ಯಾಧಿಕಾರಿ ವೈ. ಎನ್.ಸತ್ಯನಾರಾಯಣ ಮಾತನಾಡಿ, ಸಂಪು ನಿರ್ಮಾಣದ ಕಾಮಗಾರಿಯೂ , ನಗರೋತ್ಥಾನ ಯೋಜನೆಯಡಿ, 4 ನೇ ಹಂತದಲ್ಲಿ, ಜಿಲ್ಲಾಧಿಕಾರಿಗಳ ಹಂತದಲ್ಲೆ ಕ್ರಿಯಾಯೋಜನೆ ತಯಾರಿಸಿ, ಟೆಂಡರ್ ಕರೆದು, ಕಾರ್ಯಾದೇಶ ವಿತರಣೆ ಮಾಡಿರುತ್ತಾರೆ. ಅದರಂತೆ ಗುತ್ತಿಗೆದಾರರು ಕಾಮಗಾರಿ ಮಾಡುತ್ತಿದ್ದಾರೆ. ಮನವಿಯಂತೆ ಪರಿಶೀಲನೆ ನಡೆಸಲು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರಿಗೆ ರವಾನಿಸಲಾಗುತ್ತದೆ ಅಲ್ಲಿಂದ ವರದಿ ಬಂದ ನಂತರ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ದಲಿತ ಜನಸೇನೆ ಮುಖಂಡರಾದ ಹರೀಶ್, ಪ್ರವೀಣ್ ಕುಮಾರ್, ಕೃಷ್ಣಮೂರ್ತಿ, ಗಂಗಾಧರ್, ಪ್ರಕಾಶ್, ಮೋಹನ್, ಮುಂತಾದವರು ಹಾಜರಿದ್ದರು.

# 'ಭಾರತೀಯ ಸಂಸ್ಕೃತಿಯನ್ನು ಗಟ್ಟಿಗೊಳಿಸಿದ ಶಂಕರಾಚಾರ್ಯರು'



ತುಮಕೂರು

ವೇದ, ಉಪನಿಷತ್ತುಗಳ ಮೇಲಿನ ನಂಬಿಕೆ ಕುಸಿದು, ಭಾರತೀಯ ಸಂಸ್ಕೃತಿ ಮತ್ತು ಪರಂಪರೆ ದಾರಿ ತಪ್ಪುವ ಸಂದರ್ಭದಲ್ಲಿ ತಮ್ಮ ಅದ್ವೈತ ಸಿದ್ಧಾಂತ, ಕರ್ಮಯೋಗದ ಮೂಲಕ ಭಾರತೀಯತೆಯನ್ನು ಸರಿದಾರಿಗೆ ತಂದ ಯುಗ ಪ್ರವರ್ತಕ ಶ್ರೀ ಶಂಕರಾಚಾರ್ಯರು ಎಂದು ನಗರ ಶಾಸಕ ಜಿ.ಬಿ. ಜ್ಯೋತಿಗಣೇಶ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತುಮಕೂರು ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾ ಹಾಗೂ ಶ್ರೀ ಶಂಕರ ಸೇವಾ ಸಮಿತಿ ವತಿಯಿಂದ ಮಂಗಳವಾರ ನಗರದ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ಆಯೋಜಿಸಲಾಗಿದ್ದ "ಶ್ರೀ ಶಂಕರಾಚಾರ್ಯ ಜಯಂತಿ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಂಕರಾಚಾರ್ಯರು ಭಾರತದ ಧಾರ್ಮಿಕ, ಸಾಮಾಜಿಕ, ಆಧ್ಯಾತ್ಮಿಕ, ಸಾಹಿತ್ಯಿಕ ಪರಂಪರೆಯನ್ನು ಸರಿದಾರಿಗೆ ತರಲು ತಮ್ಮ ಜೀವಿತದ ಅವಧಿಯಲ್ಲಿ ಜನಪರ ಆಲೋಚನೆ, ಆಚರಣೆಗಳ ಮೂಲಕ ಧರ್ಮ ಸಂರಕ್ಷಣೆಗೆ ಭದ್ರ ಬುನಾದಿ ಹಾಕಿದ್ದಾರೆ. ಧರ್ಮ ಸಂರಕ್ಷಣೆಗಾಗಿ ಇಡೀ ಭಾರತದ ನಾಲ್ಕು ದಿಕ್ಕುಗಳಲ್ಲಿಯೂ ಮಠಗಳನ್ನು ಸ್ಥಾಪಿಸಿ, ಅವುಗಳ ಮೂಲಕ ಧರ್ಮ ಜಾಗೃತಿಯಲ್ಲಿ ತೊಡಗಿದ್ದರು ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಕೆ.ಎಸ್.ಸಿದ್ದಲಿಂಗಪ್ಪ ಮಾತನಾಡಿ, ಶಂಕರಾಚಾರ್ಯರು ಅತ್ಯಂತ ಕಡಿಮೆ ವಯಸ್ಸಿನಲ್ಲಿಯೇ ಅಖಂಡ ಪಾಂಡಿತ್ಯದ ಮೂಲಕ ಜ್ಞಾನ ಸಾಧನೆ ಮಾಡಿದ್ದರು.

ಶಂಕರಾಚಾರ್ಯರು ವೈದಿಕ ಪರಂಪರೆಗೆ ನೀಡಿದ ಕೊಡುಗೆ ಅಪಾರ. ಅವರ ಚಿಂತನೆಗಳು ಇಂದಿಗೂ ಪ್ರಸ್ತುತ. ಕಾಯಕದ ಅವಶ್ಯಕತೆಯನ್ನು ಒತ್ತಿ ಹೇಳಿದ ಶಂಕರರು, ಸಂಪಾದನೆ ಸರಿಯಾದ ಮಾರ್ಗದಲ್ಲಿ ಇರಬೇಕು ಎಂಬುದರ ಜೊತೆಗೆ, ನನ್ನ ಜನ್ಮ ಭೂಮಿಗಿಂತ ಮೀಗಿಲಾದುದ್ದು ಮತ್ತೊಂದಿಲ್ಲ ಎಂದು ಹೇಳುವ ರಾಷ್ಟ್ರಪ್ರೇಮವನ್ನು ಜನರಲ್ಲಿ ಬಿತ್ತಿದರು ಎಂದರು.

ತುಮಕೂರು ರಾಮಕೃಷ್ಣ ವಿವೇಕಾನಂದ ಆಶ್ರಮದ ಪರಮಾನಂದಜೀ ಮಹಾರಾಜ್ ಸ್ವಾಮೀಜಿಯವರು ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ವಹಿಸಿ, ಆಶೀರ್ವಚನ ನೀಡಿದರು.

ಕಾರ್ಯಕ್ರಮದ ಪೂರ್ವದಲ್ಲಿ ಶ್ರೀ ಶಂಕರ ಭಜನಾ ಮಂಡಳಿಯ ವತಿಯಿಂದ ಭಜನಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು ಹಾಗೂ ಶ್ರೀ ಶಂಕರಾಚಾರ್ಯರನ್ನು ಕುರಿತಂತೆ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಕೆ.ಎಸ್.ಸಿದ್ದಲಿಂಗಪ್ಪ ಮಾತನಾಡಿ, ಶಂಕರಾಚಾರ್ಯರು ಅತ್ಯಂತ ಕಡಿಮೆ ವಯಸ್ಸಿನಲ್ಲಿಯೇ ಅಖಂಡ ಪಾಂಡಿತ್ಯದ ಮೂಲಕ ಜ್ಞಾನ ಸಾಧನೆ ಮಾಡಿದ್ದರು.

ಶಂಕರಾಚಾರ್ಯರು ವೈದಿಕ ಪರಂಪರೆಗೆ ನೀಡಿದ ಕೊಡುಗೆ ಅಪಾರ. ಅವರ ಚಿಂತನೆಗಳು ಇಂದಿಗೂ ಪ್ರಸ್ತುತ. ಕಾಯಕದ ಅವಶ್ಯಕತೆಯನ್ನು ಒತ್ತಿ ಹೇಳಿದ ಶಂಕರರು, ಸಂಪಾದನೆ ಸರಿಯಾದ ಮಾರ್ಗದಲ್ಲಿ ಇರಬೇಕು ಎಂಬುದರ ಜೊತೆಗೆ, ನನ್ನ ಜನ್ಮ ಭೂಮಿಗಿಂತ ಮೀಗಿಲಾದುದ್ದು ಮತ್ತೊಂದಿಲ್ಲ ಎಂದು ಹೇಳುವ ರಾಷ್ಟ್ರಪ್ರೇಮವನ್ನು ಜನರಲ್ಲಿ ಬಿತ್ತಿದರು ಎಂದರು.

ತುಮಕೂರು ರಾಮಕೃಷ್ಣ ವಿವೇಕಾನಂದ ಆಶ್ರಮದ ಪರಮಾನಂದಜೀ ಮಹಾರಾಜ್ ಸ್ವಾಮೀಜಿಯವರು ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ವಹಿಸಿ, ಆಶೀರ್ವಚನ ನೀಡಿದರು.

ಕಾರ್ಯಕ್ರಮದ ಪೂರ್ವದಲ್ಲಿ ಶ್ರೀ ಶಂಕರ ಭಜನಾ ಮಂಡಳಿಯ ವತಿಯಿಂದ ಭಜನಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು ಹಾಗೂ ಶ್ರೀ ಶಂಕರಾಚಾರ್ಯರನ್ನು ಕುರಿತಂತೆ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ತುಮಕೂರು ತಹಶೀಲ್ದಾರ್ ರಾಜೇಶ್ವರಿ, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಭಾರ ಸಹಾಯಕ ನಿರ್ದೇಶಕ ಬಿ. ನೀಲಮ್ಮ ಸೇರಿದಂತೆ ಜಿಲ್ಲಾ ಬ್ರಾಹ್ಮಣ ಸಭಾ ಮತ್ತು ಶ್ರೀ ಶಂಕರ ಸೇವಾ ಸಮಿತಿಯ ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಮಹಿಳಾ ಮೀಸಲಾತಿ ಮಸೂದೆಗೆ ಕಾಂಗ್ರೆಸ್ ವಿರೋಧ ಖಂಡಿಸಿ ಜೆಡಿಎಸ್ ಪ್ರತಿಭಟನೆ

ದೊಡ್ಡಬಳ್ಳಾಪುರ

ದೇಶದ ರಾಜಕೀಯದಲ್ಲಿ ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸುವ 'ಮಹಿಳಾ ಮೀಸಲಾತಿ ಮಸೂದೆ' ಜಾರಿಗೆ ಅಡ್ಡಗಾಲು ಹಾಕುತ್ತಿರುವ ಕಾಂಗ್ರೆಸ್ ಪಕ್ಷವು ಮಹಿಳಾ ವಿರೋಧಿ ಎಂಬುದು ಸಾಬೀತಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮಂಜುನಾಥ್ ಆರೋಪಿಸಿದರು.

ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ಸಹಕಾರ ನೀಡದ ಹಿನ್ನೆಲೆಯಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಹಾಗೂ ತಾಲೂಕು ಜೆಡಿಎಸ್ ವತಿಯಿಂದ ಬುಧವಾರ ನಗರದ ತಾಲೂಕು ಕಚೇರಿ ವೃತ್ತದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಮಂಜುನಾಥ್, "ಕೇಂದ್ರದ ಎನ್‌ಡಿಎ ಸರ್ಕಾರವು ಮಹಿಳಾ ಸಬಲೀಕರಣಕ್ಕಾಗಿ ಈ ಐತಿಹಾಸಿಕ ಮಸೂದೆಯನ್ನು ತಂದಿದೆ. ಆದರೆ, ಸಂಸತ್ತಿನಲ್ಲಿ ಬಹುಮತ ಸಿಗದಂತೆ ಕುತಂತ್ರ ಮಾಡುತ್ತಿರುವ ಕಾಂಗ್ರೆಸ್ ನಡೆ ದೇಶದ ಕೋಟ್ಯಂತರ ಮಹಿಳೆಯರಿಗೆ ಮಾಡಿದ ಅವಮಾನ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜೆಡಿಎಸ್ ಮುಖಂಡ ಡಾ. ವಿಜಯ್ ಕುಮಾರ್ ಮಾತನಾಡಿ, "ಕಳೆದ ಮೂರು ದಶಕಗಳಿಂದ ನೆನೆಗುದಿಗೆ ಬಿದ್ದಿದ್ದ ಮಸೂದೆಯನ್ನು ಜಾರಿ ಮಾಡಲು ಎನ್‌ಡಿಎ ಸರ್ಕಾರ ದಿಟ್ಟ ಹೆಜ್ಜೆ ಇಟ್ಟಿದೆ. ಈ ಸಮಯದಲ್ಲಿ ಪಕ್ಷಾತೀತ ಬೆಂಬಲ ನೀಡಬೇಕಿದ್ದ ಕಾಂಗ್ರೆಸ್, ಮಹಿಳೆಯರ ಹಕ್ಕನ್ನು



ಕಸಿದುಕೊಳ್ಳುವ ಪ್ರಯತ್ನ ಮಾಡುತ್ತಿದೆ" ಎಂದರು. ಮುಖಂಡ ಹರೀಶ್ ಗೌಡ ಮಾತನಾಡಿ, ಕೇವಲ ಮತಕ್ಕಾಗಿ ಮಹಿಳೆಯರ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್‌ನ ಅಸಲಿ ಮುಖ ಈಗ ಬಯಲಾಗಿದೆ ಎಂದು ಲೇವಡಿ ಮಾಡಿದರು.

ಪ್ರತಿಭಟನೆಗೂ ಮುನ್ನ ಜೆಡಿಎಸ್ ಕಾರ್ಯಕರ್ತರು ತಾಲೂಕು ಕಚೇರಿ ವೃತ್ತದಲ್ಲಿ ಬೃಹತ್ ಮಾನವ ಸರಪಳಿ ನಿರ್ಮಿಸಿ ಕಾಂಗ್ರೆಸ್ ವಿರುದ್ಧ ಘೋಷಣೆಗಳನ್ನು ಕೂಗಿದರು. ನಂತರ ಕಾಲ್ನಡಿಗೆಯ ಮೂಲಕ ತಾಲೂಕು ಕಚೇರಿಗೆ ತೆರಳಿ ತಹಶೀಲ್ದಾರರ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ಮಹಿಳಾ ಮುಖಂಡರು, ವಕೀಲ ಅಂಜನ್ ಗೌಡ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ಹಳ್ಳಿಗಳ ಸಂಸ್ಕೃತಿ ಉಳಿಸಲು ಯುವ ಪೀಳಿಗೆ ಮುಂದಾಗಲಿ: ಪ್ರೊ. ಮೋಹನ್

ತುಮಕೂರು

ನಮ್ಮ ಹಳ್ಳಿಗಳು ಕೇವಲ ವಾಸಸ್ಥಾನಗಳಲ್ಲ, ಅವು ಭಾರತೀಯ ಸಂಸ್ಕೃತಿಯ ಜೀವನಾಡಿಗಳು. ಆಧುನಿಕತೆಯ ಅಬ್ಬರದಲ್ಲಿ ಮರೆಯಾಗುತ್ತಿರುವ ಗ್ರಾಮೀಣ ಸೊಗಡನ್ನು ಉಳಿಸಿಕೊಳ್ಳುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ತುಮಕೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವ ಪ್ರೊ. ಮೋಹನ್ ಹೆಚ್. ಎಸ್. ಹೇಳಿದರು.

ತುಮಕೂರು ವಿವಿ ಸ್ನಾತಕೋತ್ತರ ಪತ್ರಿಕೋದ್ಯಮ ವಿಭಾಗ ಹಾಗೂ ಬೆಂಗಳೂರಿನ ಸ್ವಗ್ರಾಮ್ ಫೌಂಡೇಶನ್ ಸಹಯೋಗದಲ್ಲಿ ಬುಧವಾರ (ಏ. 22) ಆಯೋಜಿಸಲಾಗಿದ್ದ "ಮಾಧ್ಯಮದ ನಡಿಗೆ ಹಳ್ಳಿ ಕಡೆಗೆ: ಸ್ಥಳೀಯ ಇತಿಹಾಸದ ಡಿಜಿಟಲ್ ದಾಖಲೀಕರಣ" ಎಂಬ ಕಾರ್ಯಾಗಾರವನ್ನು



ಉದ್ಘಾಟಿಸಿ ಅವರು ಮಾತನಾಡಿದರು.

"ನೈಜ ಭಾರತ ಹಳ್ಳಿಗಳಲ್ಲಿ ವಾಸಿಸುತ್ತದೆ. ಹಳ್ಳಿಗಳಿಗೆ ಮೂಲಸೌಕರ್ಯಗಳನ್ನು ಒದಗಿಸುವಾಗ ಅಲ್ಲಿನ ಮೂಲ ಸಂಸ್ಕೃತಿ ಮತ್ತು ಸಂಸ್ಕಾರಕ್ಕೆ ಧಕ್ಕೆಯಾಗಬಾರದು. ಯುವ ಪೀಳಿಗೆ ತಮ್ಮ ಬೇರುಗಳನ್ನು ಮರೆಯದೆ ಗ್ರಾಮಗಳ ಏಳಿಗೆಗಾಗಿ ಶ್ರಮಿಸಬೇಕು" ಎಂದು ಅವರು ಕರೆ ನೀಡಿದರು.

ವಿಶ್ವವಿದ್ಯಾನಿಲಯ ಕಲಾ ಕಾಲೇಜಿನ ಪ್ರಾಂಶುಪಾಲರಾದ ಡಾ. ಜಿ. ದಾಕ್ಷಾಯಣಿ ಮಾತನಾಡಿ, "ಪತ್ರಿಕೋದ್ಯಮವು ಜನಸಾಮಾನ್ಯರ ಧ್ವನಿಯಾಗಿದೆ. ಪತ್ರಕರ್ತರು ಕೇವಲ ಮೇಲ್ನೋಟದ ಸುದ್ದಿಗಳಿಗಷ್ಟೇ ಸೀಮಿತವಾಗದೆ, ಆಳವಾದ ಸಂಶೋಧನೆಯ ಮೂಲಕ ಮರೆಯಾಗಿರುವ ಸತ್ಯಗಳನ್ನು ಸಮಾಜದ ಮುಂದೆ ತರಬೇಕು" ಎಂದರು.

ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರಾದ ಡಾ. ಸಿಬಂತಿ ಪದ್ಮನಾಭ ಕೆ.ವಿ. ಮಾತನಾಡಿ, "ಕಣ್ಮರೆಯಾಗುತ್ತಿರುವ ಗ್ರಾಮೀಣ ಆಚರಣೆಗಳನ್ನು ಉಳಿಸಲು ಈ ಕಾರ್ಯಾಗಾರ ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಆಡಿಯೋ-ವಿಡಿಯೋ ಎಡಿಟಿಂಗ್ ಹಾಗೂ ವರದಿಗಾರಿಕೆಯ ಪ್ರಾಯೋಗಿಕ ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಇದು ಉತ್ತಮ ವೇದಿಕೆ" ಎಂದರು.

ಸ್ವಗ್ರಾಮ್ ಫೌಂಡೇಶನ್‌ನ ಸಿಇಒ ಮಹೇಶ್ ಹೆಚ್. ಚಿತ್ರಪ್ಪ ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಗ್ರಾಮೀಣ ವೈಶಿಷ್ಟ್ಯಗಳನ್ನು ಡಿಜಿಟಲೀಕರಣದ ಮೂಲಕ ದಾಖಲಿಸುವ ಅಗತ್ಯವನ್ನು ವಿವರಿಸಿದರು. ಪೂರ್ಣಿಮಾ ಹೆಗಡೆ ಮತ್ತು ಸೋಮಶೇಖರ್ ತೆಂಕಿಲ ಅವರು ನುಡಿಚಿತ್ರ ಹಾಗೂ ಸಾಕ್ಷ್ಯಚಿತ್ರ ನಿರ್ಮಾಣದ ಬಗ್ಗೆ ತರಬೇತಿ ನೀಡಿದರು.

# 'ಕಾಂಗ್ರೆಸ್‌ಗೆ ಮಹಿಳೆಯರ ಮತ ಬೇಕು, ಅಧಿಕಾರ ಬೇಡ'

ತುಮಕೂರು

ಲೋಕಸಭೆ ಹಾಗೂ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ. 33ರಷ್ಟು ಮೀಸಲಾತಿ ಕಲ್ಪಿಸುವ 'ನಾರಿಶಕ್ತಿ ವಂದನ್ ಮಸೂದೆ'ಗೆ ಅಡ್ಡಗಾಲು ಹಾಕಿರುವ ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳ ನಡೆ ಮಹಿಳಾ ವಿರೋಧಿಯಾಗಿದೆ ಎಂದು ಆರೋಪಿಸಿ ಜೆಡಿಎಸ್ ಕಾರ್ಯಕರ್ತರು ನಗರದಲ್ಲಿ ಬುಧವಾರ ಬೃಹತ್ ಪ್ರತಿಭಟನೆ ನಡೆಸಿದರು.

ಜಿಲ್ಲಾ ಜೆಡಿಎಸ್ ಅಧ್ಯಕ್ಷ ಹೆಚ್. ನಿಂಗಪ್ಪ ಅವರ ನೇತೃತ್ವದಲ್ಲಿ ಜೆಡಿಎಸ್ ಕಚೇರಿಯಿಂದ ಬಿಜಿಎಸ್ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಮುಖಂಡರು, ಕಾಂಗ್ರೆಸ್ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಬಿಜಿಎಸ್ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಮಾತನಾಡಿದ ಹೆಚ್. ನಿಂಗಪ್ಪ, "ಪ್ರಧಾನಿ ನರೇಂದ್ರ ಮೋದಿಯವರು ಮಹಿಳಾ ಸಬಲೀಕರಣಕ್ಕಾಗಿ ತಂದ ಮಸೂದೆಯನ್ನು ಕಾಂಗ್ರೆಸ್ ತಿರಸ್ಕರಿಸಿದೆ. ಮಹಿಳೆಯರನ್ನು ಕೇವಲ ಮತಬ್ಯಾಂಕ್ ಆಗಿ ಬಳಸಿಕೊಳ್ಳುವ ಕಾಂಗ್ರೆಸ್‌ಗೆ ಅವರಿಗೆ ಅಧಿಕಾರ ನೀಡುವುದು ಇಷ್ಟವಿಲ್ಲ. ಇದು ಅಂಬೇಡ್ಕರ್ ಅವರ ಸಂವಿಧಾನದ ಆಶಯಕ್ಕೆ ಹಾಗೂ ಸಾಮಾಜಿಕ ನ್ಯಾಯಕ್ಕೆ ಮಾಡಿದ ದ್ರೋಹ" ಎಂದು



ಕಿಡಿಕಾರಿದರು.

ತುರುವೇಕರೆ ಶಾಸಕ ಎಂ.ಟಿ. ಕೃಷ್ಣಪ್ಪ ಮಾತನಾಡಿ, "ಗ್ಯಾರಂಟಿಗಳ ಆಮಿಷವೊಡ್ಡಿ ಮಹಿಳೆಯರನ್ನು ಮರಳು ಮಾಡಬಹುದು ಎಂಬ ಹುಂಬುತನದಲ್ಲಿ ಕಾಂಗ್ರೆಸ್ ಇದೆ. ಲೋಕಸಭೆಯಲ್ಲಿ ಮಸೂದೆ ಬಿದ್ದಾಗ ಪ್ರಿಯಾಂಕಾ ಗಾಂಧಿ ಅವರು ವಿಕೃತವಾಗಿ ನಗುವ ಮೂಲಕ ದೇಶದ 70 ಕೋಟಿ ಮಹಿಳೆಯರನ್ನು ಅಣಕಿಸಿದ್ದಾರೆ. ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ತಂದವರು ಹೆಚ್.ಡಿ. ದೇವೇಗೌಡರು. ಕಾಂಗ್ರೆಸ್‌ಗೆ ಮಹಿಳೆಯರು ಮುಂದಿನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ" ಎಂದು ಎಚ್ಚರಿಸಿದರು.

ತಿಪಟೂರಿನ ಮುಖಂಡ ಕೆ.ಟಿ. ಶಾಂತಕುಮಾರ್ ಮಾತನಾಡಿ, 2047ರ ವಿಕಸಿತ ಭಾರತದ ಗುರಿ ತಲುಪಲು ಮಹಿಳಾ ಸಬಲೀಕರಣ ಅತ್ಯಗತ್ಯ. ಆದರೆ ಕಾಂಗ್ರೆಸ್ ಈ ಪ್ರಯತ್ನವನ್ನು ಹಳಿತಪ್ಪಿಸುತ್ತಿದೆ ಎಂದರು. ಮಾಜಿ ಶಾಸಕ ಕೆ.ಎಂ. ತಿಮ್ಮರಾಯಪ್ಪ ಮಾತನಾಡಿ, ಕಾಂಗ್ರೆಸ್‌ನವರಿಗೆ ಮಹಿಳೆಯರ ಬಗ್ಗೆ ಗೌರವವಿಲ್ಲ ಎಂದು ಟೀಕಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಉಪಮೇಯರ್ ಟಿ.ಆರ್. ನಾಗರಾಜು, ಕುಸುಮಾ ಜಗನ್ನಾಥ್, ಸೋಲಾರ್ ಕೃಷ್ಣಮೂರ್ತಿ, ನಾಗವಲ್ಲಿ ರಾಮು ಹಾಗೂ ಜಿಲ್ಲೆಯ ವಿವಿಧ ತಾಲ್ಲೂಕುಗಳ ಜೆಡಿಎಸ್ ಪದಾಧಿಕಾರಿಗಳು, ಮಹಿಳಾ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಕಾನೂನು ವಿರೋಧಿ ತೆರಿಗೆ ಹೆಚ್ಚಳ ರದ್ದುಪಡಿಸಲು ಆಗ್ರಹ

ತುಮಕೂರು

ನಗರಪಾಲಿಕೆಯು 2026-27ನೇ ಸಾಲಿನ ಆಸ್ತಿ ತೆರಿಗೆ ಹಾಗೂ ಮುದ್ರಾಂಕ ಶುಲ್ಕವನ್ನು ಕಾನೂನುಬಾಹಿರವಾಗಿ ದುಪ್ಪಟ್ಟು ಹೆಚ್ಚಳ ಮಾಡಿದೆ. ಹೆಚ್ಚಿಸಿರುವ ತೆರಿಗೆಯನ್ನು ರದ್ದು ಮಾಡಬೇಕು, ಇಲ್ಲವಾದಲ್ಲಿ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿಸಲ್ಲಿಸುವುದಾಗಿ ರಾಷ್ಟ್ರೀಯ ಮಾನವ-ಪರಿಸರ ಸಂರಕ್ಷಣಾ ಪಡೆ ಅಧ್ಯಕ್ಷ ಜೆ.ಎಸ್. ಬಸವರಾಜು ಹೇಳಿದರು.

ಬುಧವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆಸ್ತಿ ತೆರಿಗೆ ಹಾಗೂ ಮುದ್ರಾಂಕ ಶುಲ್ಕವನ್ನು ಕ್ರಯದ ಒಟ್ಟು ಮೊಬಲಗು ಮೊತ್ತದ ಶೇಕಡ 0.2ರಷ್ಟು ಪಾವತಿಸಿಕೊಳ್ಳುವುದು ಅಂತ ಪರಿಷ್ಕರಿಸಲಾಗಿದ್ದು. ಇದರಿಂದ ಸುಮಾರು ಶೇಕಡ 50ರಷ್ಟು ತೆರಿಗೆ ಹೊರೆ ಜನರ ಮೇಲೆ ಬೀಳಲಿದೆ. ಈ ಮೂಲಕ ನಗರಪಾಲಿಗೆ ಹಗಲು ದರೋಡೆಗಿಳಿದಿದೆ ಎಂದು ಟೀಕಿಸಿದರು.

ಮಹಾನಗರ ಪಾಲಿಕೆಯ ಆಯುಕ್ತರ ಕಚೇರಿ ಆದೇಶ ಸಂಖ್ಯೆ: ಆಸ್ತಿ ತೆರಿಗೆ ಪರಿಷ್ಕರಣೆಗೆ 50/4-195/2025-26, 2:23-03-2026003 ಸಂಬಂಧಿಸಿದಂತೆ ಆದೇಶ ಹೊರಡಿಸಿದ್ದು, ಸದರಿ ಆದೇಶದಲ್ಲಿ 2025-26ನೇ ಸಾಲಿಗೆ ಪಾವತಿಸಿಕೊಳ್ಳುತ್ತಿರುವ ಆಸ್ತಿ ತೆರಿಗೆಯನ್ನು, ನೊಂದಣಿ ಮತ್ತು ಮುದ್ರಾಂಕ ಶುಲ್ಕದ ಶೇ 2ರಷ್ಟು ಇದ್ದು, 2026-27ನೇ ಸಾಲಿನ ಶುಲ್ಕವನ್ನು ಕ್ರಯದ ಒಟ್ಟು ಮೊಬಲಗು ಮೊತ್ತದ ಶೇ 0.2ರಷ್ಟು ಪಾವತಿಸಿಕೊಳ್ಳುವುದು ಅಂತ ಪರಿಷ್ಕರಿಸಲಾಗಿದ್ದು, ಉಲ್ಲೇಖ (1) ಮತ್ತು (2)ರ ಪ್ರಕಾರ ಅಂತ ನಮೂದಿಸಿರುತ್ತಾರೆ. ಈ ಪರಿಷ್ಕರಣೆಯು ಹಿಂದಿನ ವರ್ಷಕ್ಕೆ ಹೋಲಿಸಿದರೆ ಸುಮಾರು ಶೇಕಡ 50ರಷ್ಟು ಜಾಸ್ತಿ ಆಗುವುದು ಎಂದು ಹೇಳಿದರು.

2026-27ನೇ ಸಾಲಿಗೆ ಪರಿಷ್ಕರಣೆ ಶುಲ್ಕ ಕ್ರಯದ ಒಟ್ಟು ಮೊಬಲಗು ಮೊತ್ತದ ಶೇಕಡ 0.2ರಷ್ಟು ಪಾವತಿಸಿಕೊಳ್ಳಲು ಸದರಿ ಅಧಿನಿಯಮದಲ್ಲಿ ಯಾವ ಅವಕಾಶವೂ ಇಲ್ಲ. ಸದರಿ ಅಧಿನಿಯಮವು ಇದುವರೆವಿಗೂ ತಿದ್ದುಪಡಿಯೂ ಕೂಡ ಆಗಿರುವುದಿಲ್ಲ. ಆದ್ದರಿಂದ ಸದರಿ ಪರಿಷ್ಕರಣೆ ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ಹಾಗೂ ಕರ್ನಾಟಕ ಸ್ಟಾಂಪ್‌ಗಳ ಅಧಿನಿಯಮ 1957 ಸ್ಪಷ್ಟ ಉಲ್ಲಂಘನೆಯಾಗಿರುತ್ತದೆ. ಆದ್ದರಿಂದ ಸದರಿ ತೆರಿಗೆ ಪರಿಷ್ಕರಣೆಯು ಕಾನೂನುಬಾಹಿರ ಕೃತ್ಯವಾಗಿರುತ್ತದೆ. ಈ ರೀತಿ ಪರಿಷ್ಕರಣೆಗೆ ಆದೇಶವಿಲ್ಲದಿದ್ದಲ್ಲಿ ಸದರಿ ಪರಿಷ್ಕರಣೆಯನ್ನು ಕೂಡಲೇ ತಡೆಹಿಡಿಯಬೇಕೆಂದು ಜೆ.ಎಸ್. ಬಸವರಾಜು ಒತ್ತಾಯಿಸಿದರು.

2025-26ನೇ ಸಾಲಿನ ನೀರಿನ ತೆರಿಗೆ ರೂ. 2400 ಇದ್ದು, 2026-27ನೇ ಸಾಲಿಗೆ ರೂ. 3600 ಎಂದು ಪರಿಷ್ಕರಣೆ ಆಗಿರುತ್ತದೆ. ಅಂದರೆ ಕಳೆದ ವರ್ಷಕ್ಕಿಂತ ಶೇ 50ರಷ್ಟು ಜಾಸ್ತಿಯಾಗಿರುತ್ತದೆ. ಸದರಿ ತೆರಿಗೆ ಕಳೆದ ವರ್ಷಕ್ಕಿಂತ ಶೇ 200ರಷ್ಟು ಹೆಚ್ಚಳವಾಗಿದ್ದು, ಈ ರೀತಿ ಅವೈಜ್ಞಾನಿಕವಾಗಿ ತೆರಿಗೆ ಹೆಚ್ಚಿಸಲು ಸರ್ಕಾರದ ಆದೇಶ ಅಥವಾ ನಿರ್ದೇಶನ ಇಲ್ಲದಿದ್ದಲ್ಲಿ ಈ ಕೂಡಲೇ ತೆರಿಗೆ ಪರಿಷ್ಕರಣೆಯನ್ನು ಸಾರ್ವಜನಿಕ ಹಿತಾಸಕ್ತಿಯಿಂದ ಹಿಂಪಡೆಯಬೇಕು ಎಂದರು. ರಾಷ್ಟ್ರೀಯ ಮಾನವ-ಪರಿಸರ ಸಂರಕ್ಷಣಾ ಪಡೆ ಉಪಾಧ್ಯಕ್ಷ ಜಿ.ಕೆ. ಶ್ರೀನಿವಾಸ್, ವಿಜಯಕುಮಾರ್ ಹಾಜರಿದ್ದರು.

# ಕೈವಾರ ತಾತಯ್ಯನವರ 300ನೇ ಜಯಂತೋತ್ಸವ: ಚಿಕ್ಕಬಳ್ಳಾಪುರ-ಕೋಲಾರ ಜಿಲ್ಲೆಯಾದ್ಯಂತ ವರ್ಷಪೂರ್ತಿ ಸಂಭ್ರಮ

ಚಿಕ್ಕಬಳ್ಳಾಪುರ

ಸದ್ಗುರು ಶ್ರೀ ಯೋಗಿ ನಾರೇಯಣ ತಾತಯ್ಯನವರ 300ನೇ ಜಯಂತೋತ್ಸವದ ಅಂಗವಾಗಿ ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಾದ್ಯಂತ ಒಂದು ವರ್ಷಗಳ ಕಾಲ ನಿರಂತರವಾಗಿ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಕ್ಷೇತ್ರ ಕೈವಾರದ ಸಂಗೀತ ಸಂಚಾಲಕ ಬಾಲಕೃಷ್ಣ ಭಾಗವತರ್ ತಿಳಿಸಿದರು.

ನಗರದ ದೊಡ್ಡಗಣಪತಿ ದೇವಾಲಯದ ಆವರಣದಲ್ಲಿ ನಡೆದ ಜಯಂತೋತ್ಸವದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜಯಂತೋತ್ಸವದ ಅಂಗವಾಗಿ ಚಿಕ್ಕಬಳ್ಳಾಪುರದ ದೊಡ್ಡ ಗಣಪತಿ ದೇವಾಲಯದ ಆವರಣದಲ್ಲಿ ಮೇ 2 ರಿಂದ 8 ರವರೆಗೆ ಪ್ರತಿ ದಿನ ಸಂಜೆ 6:30 ರಿಂದ 8:30 ರವರೆಗೆ ತೆಲುಗು "ಪೊತನ ಭಾಗವತ" ಹಾಗೂ "ಶ್ರೀ



ಅಮರ ನಾರೇಯಣ ಶತಕ"ದ ಪ್ರವಚನ ಸಪ್ತಾಹ ನಡೆಯಲಿದೆ.

ಮೇ 9 ರಂದು ಕೈವಾರದಲ್ಲಿ ನಡೆಯಲಿರುವ ವಿಶೇಷ ಸಮಾರಂಭದಲ್ಲಿ, ತಾತಯ್ಯನವರ ತತ್ವ ಬೋಧನೆಗಳಿಗೆ ಅಪಾರ ಕೊಡುಗೆ ನೀಡಿದ ದಿವಂಗತ ಶ್ರೀ ಕೈಪು ಲಕ್ಷ್ಮೀನರಸಿಂಹ ಶಾಸ್ತ್ರೀಗಳಿಗೆ ಮರಣೋತ್ತರವಾಗಿ 'ನಾರೇಯಣ ಪ್ರಶಸ್ತಿ' ಪ್ರದಾನ ಮಾಡಲಾಗುವುದು. ಶ್ರೀ ಕ್ಷೇತ್ರ ಕೈವಾರದ ಧರ್ಮಾಧಿಕಾರಿ ಡಾ. ಎಂ.ಆರ್. ಜಯರಾಮ್ ಅವರು ಪ್ರಶಸ್ತಿ ಪ್ರದಾನ ಹಾಗೂ 'ಆತ್ಮಬೋಧಾಮೃತ' ಕಾರ್ಯಕ್ರಮ ನಡೆಸಿಕೊಡಲಿದ್ದಾರೆ.

ಮೇ ತಿಂಗಳ ಪ್ರಮುಖ ಕಾರ್ಯಕ್ರಮಗಳು:

ಮೇ 16: ಬೆಳಿಗ್ಗೆ 6 ಗಂಟೆಗೆ ಬಂಡಹಳ್ಳಿ ಶ್ರೀ ಮಲ್ಲೆಮ್ಮ ದೇವಾಲಯದಿಂದ ಮಂಡಿಕಲ್ಲು ಶ್ರೀ ಆಂಜನೇಯಸ್ವಾಮಿ ದೇವಾಲಯದವರೆಗೆ "ಶ್ರೀರಾಮ ದಂಡು ಸಂಕೀರ್ತನ ಪಾದಯಾತ್ರೆ" ನಡೆಯಲಿದೆ.

ಮೇ 31: ಕೈವಾರದ ಯೋಗನರಸಿಂಹಸ್ವಾಮಿ ದೇವಾಲಯದ ವೈಕುಂಠಯಾಗ ಶಾಲೆಯಲ್ಲಿ 24 ಗಂಟೆಗಳ ಕಾಲ ನಿರಂತರ "ಶ್ರೀ ರಾಮಭವತಾರಕಮಂತ್ರ ಕೋಟಿ ಜಪಯಜ್ಞ" ಜರುಗಲಿದೆ. ತಾತಯ್ಯನವರ ವೈಭವವನ್ನು ಸಾರುವ ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಉಭಯ ಜಿಲ್ಲೆಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಕೈವಾರ ಆನಂದ್, ಲಕ್ಷ್ಮೀನಾರಾಯಣ, ಪುರದಗಡ್ಡೆ ಪಿ.ಎನ್. ಕೃಷ್ಣಪ್ಪ, ಸಂಗೀತ ವಿದ್ವಾಂಸ ಚಿಂತಲಪಲ್ಲಿ ಸೋಮಶೇಖರ್ ಸೇರಿದಂತೆ ಅನೇಕ ಮುಖಂಡರು ಹಾಗೂ ಭಕ್ತರು ಉಪಸ್ಥಿತರಿದ್ದರು.

## ಸಮಾಜಮುಖಿ ಕಾರ್ಯಕ್ಕೆ ಅಭಿನಂದನೆ



ಚಿಂತಾಮಣಿ

ಪತ್ರಿಕೋದ್ಯಮ ಹಾಗೂ ರೆಡ್‌ಕ್ರಾಸ್ ಸಂಸ್ಥೆಯ ಮೂಲಕ ಸಮಾಜಕ್ಕೆ ಗಣನೀಯ ಸೇವೆ ಸಲ್ಲಿಸಿರುವ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ನಿಕಟಪೂರ್ವ ಜಿಲ್ಲಾಧ್ಯಕ್ಷ ಜಯರಾಂ ಅವರ ಸೇವೆಯನ್ನು ನಿವೃತ್ತ ಸೇನಾಧಿಕಾರಿ ಹಾಗೂ ಲೇಖಕ ಎಸ್.ವಿ. ಅಯ್ಯರ್ ಮುಕ್ತಕಂಠದಿಂದ ಶ್ಲಾಘಿಸಿದರು.

ಇತ್ತೀಚೆಗೆ ಜಯರಾಂ ಅವರ ನಿವಾಸಕ್ಕೆ ಭೇಟಿ ನೀಡಿದ ಎಸ್.ವಿ. ಅಯ್ಯರ್ ಅವರು, ಜಯರಾಂ ಅವರ ಸಮಾಜಮುಖಿ ಕಾರ್ಯಗಳನ್ನು ಗುರುತಿಸಿ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.

ಸಾಮಾಜಿಕ ಚಟುವಟಿಕೆಯಲ್ಲಿ ಸಕ್ರಿಯ ಬಳಿಕ ಮಾತನಾಡಿದ ಅಯ್ಯರ್ ಅವರು, "ಜಯರಾಂ ಅವರು ಕೇವಲ ಪತ್ರಿಕೋದ್ಯಮಕ್ಕೆ ಸೀಮಿತವಾಗದೆ, ರೆಡ್ ಕ್ರಾಸ್ ಸಂಸ್ಥೆಯಂತಹ ಘನವೆತ್ತ ಸಂಸ್ಥೆಗಳ ಮೂಲಕ ಅನೇಕ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಅವರ ಈ ಸೇವಾ ಮನೋಭಾವ ಇತರರಿಗೆ ಮಾದರಿಯಾಗಿದೆ" ಎಂದು ಹರ್ಷ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಜಯರಾಂ ಅವರಿಗೆ ಶಾಲು ಹೊದಿಸಿ, ಫಲಪುಷ್ಪ ನೀಡಿ ಸನ್ಮಾನಿಸಲಾಯಿತು. ಈ ಸುಸಂದರ್ಭದಲ್ಲಿ ಜಯರಾಂ ಅವರ ಕುಟುಂಬ ಸದಸ್ಯರು ಉಪಸ್ಥಿತರಿದ್ದು, ಅಯ್ಯರ್ ಅವರ ಅಭಿಮಾನಕ್ಕೆ ಕೃತಜ್ಞತೆ ಸಲ್ಲಿಸಿದರು.

ಸಾಮಾಜಿಕ ಚಟುವಟಿಕೆಯಲ್ಲಿ ಸಕ್ರಿಯ ಬಳಿಕ ಮಾತನಾಡಿದ ಅಯ್ಯರ್ ಅವರು, "ಜಯರಾಂ ಅವರು ಕೇವಲ ಪತ್ರಿಕೋದ್ಯಮಕ್ಕೆ ಸೀಮಿತವಾಗದೆ, ರೆಡ್ ಕ್ರಾಸ್ ಸಂಸ್ಥೆಯಂತಹ ಘನವೆತ್ತ ಸಂಸ್ಥೆಗಳ ಮೂಲಕ ಅನೇಕ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಅವರ ಈ ಸೇವಾ ಮನೋಭಾವ ಇತರರಿಗೆ ಮಾದರಿಯಾಗಿದೆ" ಎಂದು ಹರ್ಷ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಜಯರಾಂ ಅವರಿಗೆ ಶಾಲು ಹೊದಿಸಿ, ಫಲಪುಷ್ಪ ನೀಡಿ ಸನ್ಮಾನಿಸಲಾಯಿತು. ಈ ಸುಸಂದರ್ಭದಲ್ಲಿ ಜಯರಾಂ ಅವರ ಕುಟುಂಬ ಸದಸ್ಯರು ಉಪಸ್ಥಿತರಿದ್ದು, ಅಯ್ಯರ್ ಅವರ ಅಭಿಮಾನಕ್ಕೆ ಕೃತಜ್ಞತೆ ಸಲ್ಲಿಸಿದರು.

# ಇತಿಹಾಸ ಉಳಿಸುವುದು ನಮ್ಮ ಕರ್ತವ್ಯ: ಜಿಲ್ಲಾಧಿಕಾರಿ ರವಿ

ಬೂದಿಕೋಟೆ

ಐತಿಹಾಸಿಕ ಹಿನ್ನೆಲೆಯುಳ್ಳ ಬೂದಿಕೋಟೆಯ ಕೋಟೆ ಹಾಗೂ ಮಾರ್ಕಂಡೇಯ ಜಲಾಶಯವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಸಂಬಂಧಪಟ್ಟ ಇಲಾಖೆಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಭರವಸೆ ನೀಡಿದರು.



ತಾಲೂಕಿನ ಬೂದಿಕೋಟೆ ಗ್ರಾಮದ ಕೋಟೆ ಮತ್ತು ಮಾರ್ಕಂಡೇಯ ಡ್ಯಾಮ್‌ಗೆ ಅಧಿಕಾರಿಗಳ ತಂಡದೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಸ್ಥಳೀಯ ಸಮಸ್ಯೆಗಳ ಕುರಿತು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಬೂದಿಕೋಟೆಯ ಇತಿಹಾಸವನ್ನು ಸ್ಮರಿಸಿದ ಜಿಲ್ಲಾಧಿಕಾರಿಗಳು, "ನಮ್ಮ ಜಿಲ್ಲೆಯಲ್ಲಿ ಇಂತಹ ಐತಿಹಾಸಿಕ ಸ್ಥಳಗಳಿರುವುದು ನಮ್ಮ ಅದೃಷ್ಟ. ಇವುಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉಳಿಸುವುದು ನಮ್ಮೆಲ್ಲರ ಜವಾಬ್ದಾರಿ. ಈ ನಿಟ್ಟಿನಲ್ಲಿ ಪ್ರವಾಸೋದ್ಯಮ ಮತ್ತು ಪುರಾತತ್ವ ಇಲಾಖೆಯ ಅಧಿಕಾರಿಗಳಿಗೆ ಪತ್ರ ಬರೆದು, ಕೋಟೆ ಹಾಗೂ ಡ್ಯಾಮ್ ಪ್ರದೇಶವನ್ನು ಪ್ರವಾಸಿ ಸ್ನೇಹಿಯಾಗಿ ಅಭಿವೃದ್ಧಿಪಡಿಸಲಾಗುವುದು" ಎಂದರು.

ಮಾರ್ಕಂಡೇಯ ಡ್ಯಾಮ್‌ನಲ್ಲಿ ಸಮೃದ್ಧವಾಗಿ ನೀರಿದ್ದರೂ ಜನರಿಗೆ ತಲುಪದಿರುವ ಬಗ್ಗೆ ಅವರು ಅಸಮಾಧಾನ ವ್ಯಕ್ತಪಡಿಸಿದರು. ಮಾಲೂರು ತಾಲೂಕಿಗೆ ನೀರು ಸರಬರಾಜು ಮಾಡುವ ಪೈಪ್‌ಲೈನ್ ಕಾಮಗಾರಿ ಏಕೆ ಕುಂಠಿತಗೊಂಡಿದೆ ಎಂದು ಪ್ರಶ್ನಿಸಿದಾಗ, ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ಕಾಮಗಾರಿ ಅಪೂರ್ಣಗೊಂಡಿರುವ ಬಗ್ಗೆ ಸಮಜಾಯಿಷಿ ನೀಡಿದರು. ಪ್ರವಾಸಿ ತಾಣದಲ್ಲಿ ಸ್ವಚ್ಛತೆ ಕಾಪಾಡದ ಅಧಿಕಾರಿಗಳ ವಿರುದ್ಧವೂ ಅವರು ಗರಂ ಆದರು.

ಜಾನುವಾರುಗಳ ಕುಡಿಯುವ ನೀರಿನ ತೊಟ್ಟಿಯ ಸ್ಥಿತಿ ಕಂಡು ಜಿಲ್ಲಾಧಿಕಾರಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. "ಇಷ್ಟು ಕೊಳಚೆ ನೀರನ್ನು ನಿಮ್ಮ ಮನೆಯಲ್ಲಿ ಕುಡಿಯುತ್ತೀರಾ? ಜಾನುವಾರುಗಳು ಮಾತ್ರ ಇದನ್ನು ಕುಡಿಯಬೇಕೇ?" ಎಂದು ಜಲಗಾರರನ್ನು ತರಾಟೆಗೆ ತೆಗೆದುಕೊಂಡರಲ್ಲದೆ, ಕೂಡಲೇ ತೊಟ್ಟಿಯನ್ನು ಸ್ವಚ್ಛಗೊಳಿಸುವಂತೆ ತಾಕೀತು ಮಾಡಿದರು.

ಗ್ರಾ.ಪಂ. ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಮುನ್ನೆಚ್ಚರಿಕೆ ವಹಿಸಬೇಕು. ನೀರಿನ ಅಭಾವ ಕಂಡುಬಂದಲ್ಲಿ ಕೂಡಲೇ ಪರ್ಯಾಯ ವ್ಯವಸ್ಥೆ ಮಾಡಬೇಕು ಎಂದು ಪಿಡಿಒ ಕಿಶೋರ್ ಕುಮಾರ್ ಅವರಿಗೆ ನಿರ್ದೇಶನ ನೀಡಿದರು.

ಈ ವೇಳೆ ತಹಸೀಲ್ದಾರ್ ಸುಜಾತ, ತಾ.ಪಂ ಇಒ ರವಿಕುಮಾರ್, ಎಇಇ ಎನ್. ಆನಂದ್ ಕುಮಾರ್, ಇಂಜಿನಿಯರ್ ರಾಜಶೇಖರ್, ಉಪತಹಸಿಲ್ದಾರ್ ಸುರೇಶ್, ಗ್ರಾ.ಪಂ ಮಾಜಿ ಅಧ್ಯಕ್ಷ ಬಿ.ಆರ್. ಮಂಜುನಾಥ್ ಹಾಗೂ ಇತರ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.


# ಜಯಂತಿಗಳ ಯಶಸ್ವಿಗೆ ಅಧಿಕಾರಿಗಳ ಸನ್ನದ್ಧತೆ: ಪೂರ್ವಭಾವಿ ಸಭೆ

ತುಮಕೂರು

ಜಿಲ್ಲಾಡಳಿತ ವತಿಯಿಂದ ಮೇ 1ರಂದು ಶ್ರೀ ಭಗವಾನ್ ಬುದ್ಧ ಜಯಂತಿ ಹಾಗೂ ಮೇ 10ರಂದು ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಸಂಬಂಧ ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್.ತಿಪ್ಪೇಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಮೇ 1ರಂದು ಶ್ರೀ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ಭಗವಾನ್ ಬುದ್ಧರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ನೆರವೇರಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ನಿರ್ದೇಶನ ನೀಡಿದರು.

ಮೇ 10ರಂದು ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವನ್ನು ನಗರದ ಡಾ. ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ನಡೆಸಲು ತೀರ್ಮಾನಿಸಲಾಯಿತು. ಜಯಂತಿ ಕಾರ್ಯಕ್ರಮಕ್ಕೆ ಅಗತ್ಯ ವ್ಯವಸ್ಥೆಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಾಡುವಂತೆ ತಿಳಿಸಿದರು.



ಸಭೆಯಲ್ಲಿದ್ದ ಜಿಲ್ಲಾ ರೆಡ್ಡಿಜನ ಸಂಘದವರು ಕಾರ್ಯಕ್ರಮಕ್ಕೆ ಆಗಮಿಸುವ ಪ್ರೇಕ್ಷಕರಿಗೆ ಊಟ, ಲಘು ಉಪಹಾರದ ವ್ಯವಸ್ಥೆಯನ್ನು ಮಾಡುವಂತೆ ತಿಳಿಸಿದರು.

ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಹಾಗೂ ರೆಡ್ಡಿ ಸಮುದಾಯದ ಪ್ರತಿಭಾವಂತ ಶಾಲಾ, ಕಾಲೇಜು ಮಕ್ಕಳಿಗೆ ಸನ್ಮಾನ ಕಾರ್ಯಕ್ರಮವನ್ನು ಏರ್ಪಡಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಈ ಎರಡೂ ಜಯಂತಿಗಳ ಆಚರಣೆ ಸಂಬಂಧ ಸಕಲ ಸಿದ್ಧತೆ ಕೈಗೊಳ್ಳಬೇಕು ಹಾಗೂ ಗಣ್ಯರು, ಸಮುದಾಯದ ಮುಖಂಡರು, ಸಾಹಿತಿಗಳು, ಲೇಖಕರು, ವಿಚಾರ ವಾದಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಅಗತ್ಯ ಪ್ರಚಾರ ಕ್ರಮ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸುರೇಶ್ ಕುಮಾರ್ ಸೇರಿದಂತೆ ಸಮುದಾಯದ ಮುಖಂಡರು ಹಾಜರಿದ್ದರು.

## 'ಖರ್ಗೆ ತಂದೆ-ಮಗನಿಗೆ ಮಾನಸಿಕ ತಪಾಸಣೆ ಅಗತ್ಯ'

ಕೋಲಾರ



ದೇಶದಲ್ಲಿ ಕಾಂಗ್ರೆಸ್ ಪಕ್ಷ ಶೂನ್ಯದತ್ತ ಸಾಗುತ್ತಿರುವುದರಿಂದ ಹತಾಶೆಗೊಂಡಿರುವ ಮಲ್ಲಿಕಾರ್ಜುನ ಖರ್ಗೆ ಹಾಗೂ ಪ್ರಿಯಾಂಕ್ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ನಾಲಿಗೆ ಹರಿಬಿಡುತ್ತಿದ್ದಾರೆ. ಇಬ್ಬರಿಗೂ ತುರ್ತಾಗಿ ಮಾನಸಿಕ ಆರೋಗ್ಯ ತಪಾಸಣೆಯ ಅಗತ್ಯವಿದೆ ಎಂದು ಮಾಜಿ ಸಂಸದ ಎಸ್. ಮುನಿಸ್ವಾಮಿ ಲೇವಡಿ ಮಾಡಿದರು.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾಂಗ್ರೆಸ್ ನಾಯಕರ ಕೀಳುಮಟ್ಟದ ಸಂಸ್ಕೃತಿ ಹಾಗೂ ಅಂಬೇಡ್ಕರ್ ವಿಚಾರದಲ್ಲಿ ಅವರ ಇತಿಹಾಸವನ್ನು ಎಳೆಎಳೆಯಾಗಿ ಬಿಚ್ಚಿಟ್ಟರು.

"ವಿಶ್ವನಾಯಕರಾಗಿ ಗುರುತಿಸಿಕೊಂಡಿರುವ ಪ್ರಧಾನಿ ಮೋದಿಯವರನ್ನು ಉಗ್ರರಿಗೆ ಹೋಲಿಸುವ ಮೂಲಕ ಖರ್ಗೆ ಕುಟುಂಬ ಸಮುದಾಯದ ಗೌರವವನ್ನೇ ಹಾಳು ಮಾಡುತ್ತಿದೆ. ವಿರೋಧ ಪಕ್ಷದ ನಾಯಕರಾಗಿ ಜವಾಬ್ದಾರಿಯುತವಾಗಿ ನಡೆದುಕೊಳ್ಳುವ ಬದಲು, ದೇಶದ ಪ್ರಧಾನಿಗೆ ನೀಡಬೇಕಾದ ಸಾಮಾನ್ಯ ಗೌರವವನ್ನೂ ಇವರು ಮರೆತಿದ್ದಾರೆ. ಈ ಕೂಡಲೇ ಖರ್ಗೆ ಅವರು ಬಹಿರಂಗ ಕ್ಷಮೆಯಾಚಿಸಬೇಕು" ಎಂದು ಆಗ್ರಹಿಸಿದರು.

ಸಂವಿಧಾನದ ಜಪ ಮಾಡುವ ಕಾಂಗ್ರೆಸ್ಸಿಗರಿಗೆ ಅಂಬೇಡ್ಕರ್ ಹೆಸರೆತ್ತಲು ನೈತಿಕತೆ ಇಲ್ಲ ಎಂದು ಕಿಡಿಕಾರಿದ ಮುನಿಸ್ವಾಮಿ, "ಅಂಬೇಡ್ಕರ್ ಅವರನ್ನು ಚುನಾವಣೆಯಲ್ಲಿ ಸೋಲಿಸಿದವರು ಇದೇ ನಕಲಿ ಗಾಂಧಿಗಳು. ಅಂಬೇಡ್ಕರ್ ನಿಧನರಾದಾಗ ದೆಹಲಿಯಲ್ಲಿ ಅಂತ್ಯಸಂಸ್ಕಾರಕ್ಕೆ ಜಾಗ ನೀಡದೆ, ಅವರ ಮೃತದೇಹವನ್ನು ಸಾಗಿಸಲು ಏರ್ ಅಂಬ್ಯುಲೆನ್ಸ್ ನೆರವು ನೀಡದ ಕಾಂಗ್ರೆಸ್ ನಾಯಕರು, ಈಗ ಅಂಬೇಡ್ಕರ್ ಜಪ ಮಾಡುತ್ತಿರುವುದು ಕೇವಲ ಅಧಿಕಾರಕ್ಕಾಗಿ" ಎಂದು ಟೀಕಿಸಿದರು.

"ರಾಜ್ಯದಲ್ಲಿ ದಲಿತರ ಎಸ್.ಸಿ.ಪಿ, ಟಿ.ಎಸ್.ಪಿ ಯೋಜನೆಯ 42 ಸಾವಿರ ಕೋಟಿ ರೂ. ಅನುದಾನ ದುರ್ಬಳಕೆಯಾದಾಗ ಈ ಖರ್ಗೆ ಕುಟುಂಬ ತುಟಿ ಬಿಚ್ಚಲಿಲ್ಲ. ದಲಿತರ ಹೆಸರು ಹೇಳಿಕೊಂಡು ಮೇಲೆ ಬಂದ ಇವರು, ಜನಾಂಗಕ್ಕೆ ಮೋಸವಾದಾಗ ವಂಚನೆ ಸರಿಪಡಿಸುವ ಪ್ರಯತ್ನ ಮಾಡಲಿಲ್ಲ. ಆದರೆ ಮೋದಿ ಸರ್ಕಾರ ಅಂಬೇಡ್ಕರ್ ಹೆಸರಿನಲ್ಲಿ ಪಂಚತೀರ್ಥಗಳನ್ನು ಅಭಿವೃದ್ಧಿಪಡಿಸಿ ನಿಜವಾದ ಗೌರವ ನೀಡಿದೆ" ಎಂದು ಅವರು ವಿವರಿಸಿದರು.

## ಪಹಲ್ಗಾಂ ಹತ್ಯೆ ಸಂತ್ರಸ್ತರಿಗೆ ಶ್ರೀರಾಮ ಸೇನೆಯಿಂದ ಶ್ರದ್ಧಾಂಜಲಿ

ಕನಕಪುರ

ಕಾಶ್ಮೀರದ ಪೆಹಲ್ಗಾಂನಲ್ಲಿ ಭಯೋತ್ಪಾದಕರಿಂದ ಹತ್ಯೆಗೊಳಗಾದ ಅಮಾಯಕರ ಸ್ಮರಣಾರ್ಥ ನಗರದ ಚನ್ನಬಸಪ್ಪ ವೃತ್ತದಲ್ಲಿ ಶ್ರೀರಾಮ ಸೇನಾ ವತಿಯಿಂದ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ಮೃತರ ಆತ್ಮಕ್ಕೆ ಶಾಂತಿ ಕೋರಿ ಮೌನ ಆಚರಿಸಿದ ಬಳಿಕ, ಸಂಘಟನೆಯ ಪದಾಧಿಕಾರಿಗಳು ದೇಶದ ಭದ್ರತೆ ಮತ್ತು ಹಿಂದೂಗಳ ಜಾಗೃತಿ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರ್ಜುನ ಗೌಡ, "ಪೆಹಲ್ಗಾಂನಲ್ಲಿ ಕಳೆದ ವರ್ಷ ಅಮಾಯಕರನ್ನು ಧರ್ಮ ಕೇಳಿ ಹತ್ಯೆ ಮಾಡಿದ್ದು ಹಿಂದೂಗಳಿಗೆ ದೊಡ್ಡ ಎಚ್ಚರಿಕೆ ಗಂಟೆಯಾಗಿದೆ. ನಾವು ಈಗಲೇ ಎಚ್ಚೆತ್ತುಕೊಳ್ಳದಿದ್ದರೆ ಅಪಾಯ ನಮ್ಮ ಮನೆ ಬಾಗಿಲಿಗೆ ಬರಲಿದೆ. ಹಿಂದೂಗಳು ಜಾತಿ ಭೇದ ಮರೆತು ಒಗ್ಗಟ್ಟಾಗಬೇಕು," ಎಂದು ಕರೆ ನೀಡಿದರು.

"ಆರ್ಥಿಕವಾಗಿ ಬಲಗೊಳ್ಳಲು 'ನಮ್ಮ ವ್ಯಾಪಾರ ನಮ್ಮಲ್ಲೇ ಇರಲಿ' ಎಂಬ ಮನೋಭಾವ ಇಂದಿನ ಕಾಲಕ್ಕೆ ಅತ್ಯಗತ್ಯ. ರಾಜಕೀಯವಾಗಿ ಮತ್ತು ಸಾಮಾಜಿಕವಾಗಿ ಹಿಂದೂಗಳು ದುರ್ಬಲರಾದರೆ ದೇಶದ ದಿಕ್ಕೇ ಬದಲಾಗುವ ಅಪಾಯವಿದೆ," ಎಂದು ಅವರು ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಪರಮೇಶ್ ಗೌಡ, ಮಂಡ್ಯ ವಿಭಾಗೀಯ ಅಧ್ಯಕ್ಷ ರಾಜೇಶ್, ಪ್ರಧಾನ ಕಾರ್ಯದರ್ಶಿ ನವೀನ್, ಜಿಲ್ಲಾ ಪದಾಧಿಕಾರಿಗಳಾದ ಸಾಗರ್, ರಾಜಗೋಪಾಲ್, ಕುಮಾರಸ್ವಾಮಿ, ಶ್ರೀನಿವಾಸ್, ಮುಖಂಡ ಜೀವನ್ ಮೂರ್ತಿ ಸೇರಿದಂತೆ ಹಲವಾರು ಕಾರ್ಯಕರ್ತರು ಭಾಗವಹಿಸಿದ್ದರು. ಕಾಶ್ಮೀರದ ಪೆಹಲ್ಗಾಂನಲ್ಲಿ ಭಯೋತ್ಪಾದಕರಿಂದ ಹತ್ಯೆಗೊಳಗಾದ ಅಮಾಯಕರ ಸ್ಮರಣಾರ್ಥ ನಗರದ ಚನ್ನಬಸಪ್ಪ ವೃತ್ತದಲ್ಲಿ ಶ್ರೀರಾಮ ಸೇನಾ ವತಿಯಿಂದ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ಮೃತರ ಆತ್ಮಕ್ಕೆ ಶಾಂತಿ ಕೋರಿ ಮೌನ ಆಚರಿಸಿದ ಬಳಿಕ, ಸಂಘಟನೆಯ ಪದಾಧಿಕಾರಿಗಳು ದೇಶದ ಭದ್ರತೆ ಮತ್ತು ಹಿಂದೂಗಳ ಜಾಗೃತಿ ಕುರಿತು ಮಾತನಾಡಿದರು. ಕಾಶ್ಮೀರದ ಪೆಹಲ್ಗಾಂನಲ್ಲಿ ಭಯೋತ್ಪಾದಕರಿಂದ ಹತ್ಯೆಗೊಳಗಾದ ಅಮಾಯಕರ ಸ್ಮರಣಾರ್ಥ ನಗರದ ಚನ್ನಬಸಪ್ಪ ವೃತ್ತದಲ್ಲಿ ಶ್ರೀರಾಮ ಸೇನಾ ವತಿಯಿಂದ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ಮೃತರ ಆತ್ಮಕ್ಕೆ ಶಾಂತಿ ಕೋರಿ ಮೌನ ಆಚರಿಸಿದ ಬಳಿಕ, ಸಂಘಟನೆಯ ಪದಾಧಿಕಾರಿಗಳು ದೇಶದ ಭದ್ರತೆ ಮತ್ತು ಹಿಂದೂಗಳ ಜಾಗೃತಿ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರ್ಜುನ ಗೌಡ, "ಪೆಹಲ್ಗಾಂನಲ್ಲಿ ಕಳೆದ ವರ್ಷ ಅಮಾಯಕರನ್ನು ಧರ್ಮ ಕೇಳಿ ಹತ್ಯೆ ಮಾಡಿದ್ದು ಹಿಂದೂಗಳಿಗೆ ದೊಡ್ಡ ಎಚ್ಚರಿಕೆ ಗಂಟೆಯಾಗಿದೆ. ನಾವು ಈಗಲೇ ಎಚ್ಚೆತ್ತುಕೊಳ್ಳದಿದ್ದರೆ ಅಪಾಯ ನಮ್ಮ ಮನೆ ಬಾಗಿಲಿಗೆ ಬರಲಿದೆ. ಹಿಂದೂಗಳು ಜಾತಿ ಭೇದ ಮರೆತು ಒಗ್ಗಟ್ಟಾಗಬೇಕು," ಎಂದು ಕರೆ ನೀಡಿದರು.

"ಆರ್ಥಿಕವಾಗಿ ಬಲಗೊಳ್ಳಲು 'ನಮ್ಮ ವ್ಯಾಪಾರ ನಮ್ಮಲ್ಲೇ ಇರಲಿ' ಎಂಬ ಮನೋಭಾವ ಇಂದಿನ ಕಾಲಕ್ಕೆ ಅತ್ಯಗತ್ಯ. ರಾಜಕೀಯವಾಗಿ ಮತ್ತು ಸಾಮಾಜಿಕವಾಗಿ ಹಿಂದೂಗಳು ದುರ್ಬಲರಾದರೆ ದೇಶದ ದಿಕ್ಕೇ ಬದಲಾಗುವ ಅಪಾಯವಿದೆ," ಎಂದು ಅವರು ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಪರಮೇಶ್ ಗೌಡ, ಮಂಡ್ಯ ವಿಭಾಗೀಯ ಅಧ್ಯಕ್ಷ ರಾಜೇಶ್, ಪ್ರಧಾನ ಕಾರ್ಯದರ್ಶಿ ನವೀನ್, ಜಿಲ್ಲಾ ಪದಾಧಿಕಾರಿಗಳಾದ ಸಾಗರ್, ರಾಜಗೋಪಾಲ್, ಕುಮಾರಸ್ವಾಮಿ, ಶ್ರೀನಿವಾಸ್, ಮುಖಂಡ ಜೀವನ್ ಮೂರ್ತಿ ಸೇರಿದಂತೆ ಹಲವಾರು ಕಾರ್ಯಕರ್ತರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರ್ಜುನ ಗೌಡ, "ಪೆಹಲ್ಗಾಂನಲ್ಲಿ ಕಳೆದ ವರ್ಷ ಅಮಾಯಕರನ್ನು ಧರ್ಮ ಕೇಳಿ ಹತ್ಯೆ ಮಾಡಿದ್ದು ಹಿಂದೂಗಳಿಗೆ ದೊಡ್ಡ ಎಚ್ಚರಿಕೆ ಗಂಟೆಯಾಗಿದೆ. ನಾವು ಈಗಲೇ ಎಚ್ಚೆತ್ತುಕೊಳ್ಳದಿದ್ದರೆ ಅಪಾಯ ನಮ್ಮ ಮನೆ ಬಾಗಿಲಿಗೆ ಬರಲಿದೆ. ಹಿಂದೂಗಳು ಜಾತಿ ಭೇದ ಮರೆತು ಒಗ್ಗಟ್ಟಾಗಬೇಕು," ಎಂದು ಕರೆ ನೀಡಿದರು.

# 24ರಿಂದ ರಾಷ್ಟ್ರೀಯ ಜೂನಿಯರ್ ಅಥ್ಲೆಟಿಕ್ಸ್ ಕ್ರೀಡಾಕೂಟ ಡಾ. ಜಿ. ಪರಮೇಶ್ವರ್

ತುಮಕೂರು

ಇದೇ 24ರಿಂದ 3 ದಿನಗಳ ಕಾಲ ತುಮಕೂರಿನಲ್ಲಿ 20 ವರ್ಷದೊಳಗಿನವರ 24ನೇ ರಾಷ್ಟ್ರೀಯ ಜೂನಿಯರ್ ಅಥ್ಲೆಟಿಕ್ ಸ್ಪರ್ಧೆಗಳು ನಡೆಯಲಿವೆ ಎಂದು ಕರ್ನಾಟಕ ಅಥ್ಲೆಟಿಕ್ಸ್ ಅಸೋಸಿಯೇಷನ್‌ನ ಅಧ್ಯಕ್ಷರೂ ಆದ ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಕ್ರೀಡಾಕೂಟ ಕುರಿತು ಬುಧವಾರ ತುಮಕೂರಿನ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಕರ್ನಾಟಕದಲ್ಲಿ ಅದರಲ್ಲೂ ತುಮಕೂರಿನಲ್ಲಿ ಇದೇ ಮೊದಲ ಬಾರಿಗೆ ರಾಷ್ಟ್ರೀಯ ಜೂನಿಯರ್ ಅಥ್ಲೆಟಿಕ್ ಕ್ರೀಡಾಕೂಟ ನಡೆಯುತ್ತಿದ್ದು, ಇದು ಜಿಲ್ಲೆಗೆ ಹೆಮ್ಮೆಯ ವಿಷಯ ಎಂದು ಹೇಳಿದರು.

ಹೊಸದಾಗಿ ಅಭಿವೃದ್ಧಿಪಡಿಸಿರುವ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ವಿಶ್ವದರ್ಜೆಯ ಸಿಂಥೆಟಿಕ್ ಟ್ರ್ಯಾಕ್ ಮತ್ತು ಅಂತರಾಷ್ಟ್ರೀಯ ಗುಣಮಟ್ಟದ ವ್ಯವಸ್ಥೆಗಳನ್ನು ಅಭಿವೃದ್ಧಿಪಡಿಸಿದ್ದು, ರಾಷ್ಟ್ರೀಯ ಮಟ್ಟದ ಇಂತಹ ಚಾಂಪಿಯನ್ ಶಿಪ್ ಕ್ರೀಡಾಕೂಟ ನಡೆಯುತ್ತಿದ್ದು, ತುಮಕೂರು ಈಗ ವಿಶ್ವದ ಗಮನ ಸೆಳೆಯುತ್ತಿದೆ ಎಂದರು.




ರಾಷ್ಟ್ರದ ಮೂಲೆ ಮೂಲೆಯಿಂದ 28 ರಾಜ್ಯಗಳಿಂದಲೂ ಬಾಲಕ/ಬಾಲಕಿಯರು ಸೇರಿ ಸುಮಾರು 1500 ಕ್ರೀಡಾಪಟುಗಳು ತಮ್ಮ ರಾಜ್ಯವನ್ನು ಪ್ರತಿನಿಧಿಸಿ 40 ಸ್ಪರ್ಧೆಗಳಲ್ಲಿ ಭಾಗವಹಿಸಲಿದ್ದಾರೆ. ಅಲ್ಲದೆ, ಜೆಎಸ್‌ಡಬ್ಲ್ಯೂ ಸ್ಪೋರ್ಟ್ಸ್ ಮತ್ತು ರಿಲೆಯನ್ಸ್ ಫೌಂಡೇಶನ್ ತಂಡಗಳು ಕರ್ನಾಟಕದ ಬಲಿಷ್ಠ ತಂಡಗಳಾಗಿ ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಪ್ರತ್ಯೇಕವಾಗಿ ಪ್ರತಿನಿಧಿಸುತ್ತಿದ್ದು, ಆಗಸ್ಟ್ 5 ರಿಂದ 9ರವರೆಗೆ ಅಮೆರಿಕಾದ ಒರೆಗಾನ್ ಸ್ಟೇಟ್‌ನಲ್ಲಿ ನಡೆಯುವ ವಿಶ್ವ ಚಾಂಪಿಯನ್ ಶಿಪ್ ಅಥ್ಲೆಟಿಕ್ ಕ್ರೀಡಾಕೂಟಕ್ಕೆ ಭಾರತ ಪ್ರತಿನಿಧಿಸುವ ಕ್ರೀಡಾಪಟುಗಳನ್ನು ಈ ಕ್ರೀಡಾಕೂಟದಲ್ಲಿ ಆಯ್ಕೆ ಮಾಡುವ ಅತ್ಯಂತ ಪ್ರಮುಖ ಕ್ರೀಡಾಕೂಟ ಇದಾಗಿದೆ ಎಂದು ಅವರು ತಿಳಿಸಿದರು.

ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಮುಂಜಾನೆಯಿಂದ ಬೆಳಿಗ್ಗೆ 10 ಗಂಟೆಯವರೆಗೆ ಹಾಗೂ ಸಂಜೆ ಹೊನಲು ಬೆಳಕಿನಲ್ಲಿ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ ಎಂದ ಅವರು ಮಧ್ಯಾಹ್ನ ತೀವ್ರ ಬಿಸಿಲಿನ ಬೇಗೆ ಇರುವ ಕಾರಣ ಈ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಅಲ್ಲದೆ, ಅಂತಾರಾಷ್ಟ್ರೀಯ ಕ್ರೀಡಾಕೂಟಕ್ಕೆ ಭಾರತದ ಪ್ರತಿನಿಧಿಗಳನ್ನು ಆಯ್ಕೆ ಮಾಡುವುದರಿಂದ ಸರಿಯಾದ ತೀರ್ಪುಗಳನ್ನು ನೀಡಲು ಅಥ್ಲೆಟಿಕ್ ಫೆಡರೇಷನ್ ಆಫ್ ಇಂಡಿಯಾದ ಅಧಿಕಾರಿಗಳು ಹಾಗೂ ತಾಂತ್ರಿಕ ವರ್ಗದವರು ಕ್ರೀಡಾಕೂಟಕ್ಕೆ ಆಗಮಿಸಲಿದ್ದು, ಫೋಟೋ ಫಿನೀಷ್ ರೀತಿಯ ತಾಂತ್ರಿಕ ಉಪಕರಣಗಳನ್ನು ಬಳಸಲಾಗುತ್ತಿದೆ ಎಂದು ಅವರು ವಿವರಿಸಿದರು.

ಅಥ್ಲೆಟಿಕ್ ಕೂಟದಲ್ಲಿ ಯಾವುದೇ ತೊಂದರೆ ಅಥವಾ ಅನುಮಾನಗಳಿಲ್ಲದಂತೆ ನಡೆಸುವ ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗಿದೆ. ಉದ್ದೀಪನ ಪರೀಕ್ಷೆಗೊಳಪಡಿಸುವ ಡೋಪ್ ಟೆಸ್ಟ್ ಕೂಡ ವ್ಯವಸ್ಥೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

24ನೇ ರಾಷ್ಟ್ರೀಯ ಜೂನಿಯರ್ ಅಥ್ಲೆಟಿಕ್ಸ್ ಪ್ರತಿಷ್ಠಿತ ಕ್ರೀಡಾಕೂಟವನ್ನು ತುಮಕೂರಿನಲ್ಲಿ ನಡೆಸಲು ಅವಕಾಶ ಕಲ್ಪಿಸಿದ ಅಥ್ಲೆಟಿಕ್ ಫೆಡರೇಷನ್ ಆಫ್ ಇಂಡಿಯಾದ ಮುಖ್ಯಸ್ಥರಿಗೆ ಧನ್ಯವಾದ ಅರ್ಪಿಸಿದ ಅವರು, ತುಮಕೂರಿನಲ್ಲಿ ಇಂತಹ ಪ್ರತಿಷ್ಠಿತ ಕ್ರೀಡಾಕೂಟ ನಡೆಯುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು, ಜಿಲ್ಲೆಯ ಯುವ ಪ್ರತಿಭೆಗಳಿಗೆ ಇದೊಂದು ಸುವರ್ಣಾವಕಾಶವಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ.ವಿ. ಅಶೋಕ್, ಕರ್ನಾಟಕ ಅಥ್ಲೆಟಿಕ್ ಅಸೋಸಿಯೇಷನ್ ಕಾರ್ಯದರ್ಶಿ ಸತ್ಯನಾರಾಯಣ್ ಹಾಗೂ ಸಂಸ್ಥೆಯ ಪ್ರತಿನಿಧಿ ರಾಜು ಉಪಸ್ಥಿತರಿದ್ದರು.

## ಇಂದು ಗೃಹ ಸಚಿವರಿಂದ ಉಚಿತ ಆಂಬ್ಯುಲೆನ್ಸ್ ಲೋಕಾರ್ಪಣೆ

ಕೊರಟಗೆರೆ

ತಾಲೂಕಿನ ಸಾರ್ವಜನಿಕರ ತುರ್ತು ಚಿಕಿತ್ಸಾ ನೆರವಿಗಾಗಿ ಫ್ರೆಂಡ್ಸ್ ಗ್ರೂಪ್ ಸೇವಾ ಸಂಸ್ಥೆ ಹಾಗೂ ನಟ ಜಗ್ಗೇಶ್ ಅಭಿಮಾನಿಗಳ ಸಂಘದ ವತಿಯಿಂದ ನೀಡಲಾಗಿರುವ ನೂತನ ಉಚಿತ ಆಂಬ್ಯುಲೆನ್ಸ್ ಸೇವೆಯು ಇದೇ 23ರಂದು ಆರಂಭವಾಗಲಿದೆ.

ಪಟ್ಟಣದ ಪುರಸಭಾ ಕಾರ್ಯಾಲಯದ ಮುಂಭಾಗ ಸಂಜೆ 5ಗಂಟೆಗೆ ನಡೆಯಲಿರುವ ಸಮಾರಂಭದಲ್ಲಿ ರಾಜ್ಯದ ಗೃಹ ಸಚಿವರು ಹಾಗೂ ಕ್ಷೇತ್ರದ ಶಾಸಕರಾದ ಡಾ. ಜಿ. ಪರಮೇಶ್ವರ್ ಅವರು ನೂತನ ತುರ್ತುವಾಹನವನ್ನು ಲೋಕಾರ್ಪಣೆ ಮಾಡಲಿದ್ದಾರೆ.

ತ್ರಿವಿಧ ಕಾರ್ಯಕ್ರಮಗಳ ಸಂಗಮ: ಆಂಬ್ಯುಲೆನ್ಸ್ ಲೋಕಾರ್ಪಣೆಯೊಂದಿಗೆ ಅಂದು ಸಂಜೆ ಎರಡು ಪ್ರಮುಖ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಗುರುವಂದನೆ: ನಿವೃತ್ತ ಶಿಕ್ಷಕರಿಗೆ ಗೌರವ ಸಮರ್ಪಣೆ.

ಪ್ರತಿಭಾ ಪುರಸ್ಕಾರ: 2025-26ನೇ ಸಾಲಿನ ಪಿಯು ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ತಾಲೂಕಿನ ವಿದ್ಯಾರ್ಥಿಗಳಿಗೆ ಸನ್ಮಾನ.

ಮನೋರಂಜನೆ: ಕಾರ್ಯಕ್ರಮದ ಅಂಗವಾಗಿ ಚಿತ್ರರಂಗದ ಹಾಸ್ಯ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಚಿತ್ರನಟ ಹಾಗೂ ರಾಜ್ಯಸಭಾ ಸದಸ್ಯ ಜಗ್ಗೇಶ್ ಕಾರ್ಯಕ್ರಮದ ಅಧ್ಯಕ್ಷತೆವಹಿಸಲಿದ್ದಾರೆ. ಕೇಂದ್ರ ಸಚಿವ ವಿ. ಸೋಮಣ್ಣ ಅವರು ನಿವೃತ್ತ ಶಿಕ್ಷಕರಿಗೆ ಗುರುವಂದನೆ ಸಲ್ಲಿಸಲಿದ್ದು, ಮಾಜಿ ಸಚಿವ ಕೆ.ಎನ್. ರಾಜಣ್ಣ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸ್ಕರಿಸಲಿದ್ದಾರೆ.

ಸಿದ್ದರಬೆಟ್ಟದ ಶ್ರೀ ವೀರಭದ್ರಶಿವಾಚಾರ್ಯ ಸ್ವಾಮೀಜಿ ಹಾಗೂ ಎಲೆರಾಂಪುರದ ಡಾ. ಶ್ರೀ ಹನುಮಂತನಾಥ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ ಎಂದು ಸಂಘಟನೆಯ ಪ್ರಮುಖರಾದ ರವಿಕುಮಾರ್ ಹಾಗೂ ಮಲ್ಲಣ್ಣ ತಿಳಿಸಿದ್ದಾರೆ.




ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರು ಜಿಲ್ಲೆಯ ಪತ್ರಕರ್ತರ ಪ್ರವಾಸದ ನೂತನ ವಾಹನಕ್ಕೆ ಬುಧವಾರ ಶ್ರೀ ಶಿವಕುಮಾರ ಸ್ವಾಮೀಜಿ ವೃತ್ತದಲ್ಲಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ.ವಿ. ಅಶೋಕ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಹಿಮಂತರಾಜು ಜಿ. ಹಾಜರಿದ್ದರು.

# 276 ಮಾಜಿ ಸೈನಿಕರಿಗೆ ಆರು ತಿಂಗಳಲ್ಲಿ ಸೈಟ್ ವಿತರಣೆ: ಎಸ್ಸೆನ್

ಬೂದಿಕೋಟೆ

ತಾಲ್ಲೂಕಿನ 276 ಮಂದಿ ಮಾಜಿ ಸೈನಿಕರಿಗೆ ನಗರದ 3 ಕಿ.ಮೀ ವ್ಯಾಪ್ತಿಯೊಳಗೆ ಇನ್ನು ಆರು ತಿಂಗಳ ಅವಧಿಯಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು ಎಂದು ಶಾಸಕ ಎಸ್.ಎನ್. ನಾರಾಯಣಸ್ವಾಮಿ ಭರವಸೆ ನೀಡಿದರು.



ನಗರಸಭೆ ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಯುದ್ಧ ಸ್ಮಾರಕ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ದೇಶದ ರಕ್ಷಣೆಗಾಗಿ ಹೋರಾಡಿದ ಯೋಧರ ಸ್ಮರಣಾರ್ಥ ನಿರ್ಮಾಣವಾಗುತ್ತಿರುವ ಈ ಸ್ಮಾರಕಕ್ಕೆ ಎಷ್ಟು ವೆಚ್ಚವಾದರೂ ಅದನ್ನು ಸರ್ಕಾರದಿಂದ ಪಡೆಯದೆ, ತಮ್ಮ ಸ್ವಂತ ಖರ್ಚಿನಲ್ಲಿ ಭರಿಸುವುದಾಗಿ ಶಾಸಕರು ಘೋಷಿಸಿದರು. "ಯೋಧರ ಸಮಯ ಪ್ರಜ್ಞೆ, ಶಿಸ್ತು ಮತ್ತು ಸಂಯಮ ಪ್ರತಿಯೊಬ್ಬರಿಗೂ ಮಾದರಿಯಾಗಬೇಕು" ಎಂದು ಅವರು ಆಶಯ ವ್ಯಕ್ತಪಡಿಸಿದರು. "ದೇಶದಲ್ಲಿ 140 ಕೋಟಿ ಜನಸಂಖ್ಯೆ ಸುರಕ್ಷಿತವಾಗಿರಲು ಯೋಧರ ಶ್ರಮವೇ ಕಾರಣ. ನಾವು ಹಬ್ಬ-ಹರಿದಿನಗಳನ್ನು ಸಂಭ್ರಮದಿಂದ ಆಚರಿಸುತ್ತೇವೆ, ಆದರೆ ಯೋಧರಿಗೆ ದೇಶ ಕಾಯುವುದೇ ಸಂಭ್ರಮವಾಗಿದೆ. ಚಳಿ, ಮಳೆ, ಗಾಳಿ ಎನ್ನದೆ ಕುಟುಂಬವನ್ನು ಬಿಟ್ಟು ಗಡಿಯಲ್ಲಿ ನಿಲ್ಲುವ ಯೋಧರ ತ್ಯಾಗಕ್ಕೆ ನನ್ನ ಪ್ರಣಾಮಗಳು" ಎಂದು ಅವರು ಬಣ್ಣಿಸಿದರು. ಕಾರ್ಯಕ್ರಮದ ವೇದಿಕೆಯಲ್ಲಿ ಮಾಜಿ ಯೋಧರ ಟ್ರಸ್ಟ್‌ನ ಜಿಲ್ಲಾಧ್ಯಕ್ಷ ಜನಾರ್ದನ್, ಕಾರ್ಯದರ್ಶಿ ಗೋಪಿನಾಥ್, ತಾಲ್ಲೂಕು ಅಧ್ಯಕ್ಷ ರಾಮಕೃಷ್ಣಪ್ಪ ಹಾಗೂ ವೀರ ನಾರಿಯರಾದ ಪ್ರಭಾವತಿ, ಮುರುಗಮಲ್ಲು, ಚಂದ್ರಮ್ಮ ಹಾಗೂ ಮುಖಂಡರು ಉಪಸ್ಥಿತರಿದ್ದರು.

# 'ಕಾಯಕ-ದಾಸೋಹದಿಂದ ಮನುಷ್ಯನೂ ಮಹಾದೇವನಾಗಬಲ್ಲ'

ತಿಪಟೂರು

ಹನ್ನೆರಡನೇ ಶತಮಾನದಲ್ಲೇ ಜಾತಿ, ಮತ ಹಾಗೂ ಲಿಂಗಭೇದಗಳನ್ನು ನಿರಾಕರಿಸಿ, ಸತ್ಯ ಶುದ್ಧ ಕಾಯಕ ಮತ್ತು ದಾಸೋಹದ ಮೂಲಕ ಸಾಮಾನ್ಯ ಮನುಷ್ಯನೂ ದೈವತ್ವಕ್ಕೇರಬಲ್ಲ ಎಂದು ಜಗತ್ತಿಗೆ ಸಾರಿದ ಮಹಾನ್ ಮಾನವತಾವಾದಿ ಬಸವಣ್ಣ ಎಂದು ಸಿಡ್ಲೇಹಳ್ಳಿ ಮಹಾಸಂಸ್ಥಾನ ಮಠದ ಸದ್ಗುರು ಇಮ್ಮಡಿ ಕರಿಬಸವ ದೇಶಿಕೇಂದ್ರ ಸ್ವಾಮೀಜಿ ಬಣ್ಣಿಸಿದರು.

ತಾಲೂಕಿನ ಶ್ರೀ ಗುರುಕುಲಾನಂದಾಶ್ರಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಬಸವ ಜಯಂತಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ, ಜ್ಯೋತಿ ಬೆಳಗಿಸುವ ಮೂಲಕ ಅವರು ಆಶೀರ್ವಚನ ನೀಡಿದರು.

"ಬಸವಣ್ಣನವರು ಅಂದಿನ ಕಾಲದಲ್ಲೇ ಎಲ್ಲಾ ವರ್ಗದ ಶ್ರಮಜೀವಿಗಳನ್ನು ಮತ್ತು ಮಹಿಳೆಯರನ್ನು ಸಂಘಟಿಸಿ, ಕನ್ನಡ ಭಾಷೆಯ ವಚನಗಳ ಮೂಲಕ ಅಭಿವ್ಯಕ್ತಿ ಸ್ವಾತಂತ್ರ್ಯ ನೀಡಿದ್ದರು. 'ಅನುಭವ ಮಂಟಪ'ದ ಮೂಲಕ ಜಗತ್ತಿನಲ್ಲೇ ಪ್ರಥಮ ಬಾರಿಗೆ ಸಮೂಹ ನಾಯಕತ್ವದ ಪರಿಕಲ್ಪನೆಯನ್ನು ಪರಿಚಯಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಶ್ರೇಷ್ಠತೆ ಎಂಬುದು ಹುಟ್ಟಿನಿಂದ ಬರುವುದಿಲ್ಲ, ಅದು ನಾವು ಮಾಡುವ ಕಾಯಕದಲ್ಲಿರುತ್ತದೆ ಎಂಬುದನ್ನು ಅವರು ಸಾಬೀತುಪಡಿಸಿದರು" ಎಂದು ತಿಳಿಸಿದರು.

ಸಮಾಜದ ಸ್ಥಿತಿಗತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಶ್ರೀಗಳು, "ನೊಂದವರ ಧ್ವನಿಯಾಗಿ ನಿಂತ ಬಸವಣ್ಣನವರ ತತ್ವಗಳು ಮತ್ತು ಮೂಲ ಆಶಯಗಳಿಗೆ ಧಕ್ಕೆ ತರುವ ಕೆಲಸ ಇಂದಿನ ದಿನಗಳಲ್ಲಿ ನಡೆಯುತ್ತಿದೆ. ಕೆಲವು ಸ್ವಾರ್ಥಿ ಹಾಗೂ ಸಂಕುಚಿತ ಮನೋಭಾವದ ವ್ಯಕ್ತಿಗಳು ಸಮಾಜವನ್ನು ಒಡೆಯಲು ಪ್ರಯತ್ನಿಸುತ್ತಿರುವುದು ದೊಡ್ಡ ವಿಪರ್ಯಾಸ" ಎಂದು ವಿಷಾದಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಗುರುಕುಲ ಹಿರಿಯ ವಿದ್ಯಾರ್ಥಿ ಸಂಘದ ಸಂಚಾಲಕ ಎಸ್.ಸಿ. ಚನ್ನಬಸವಣ್ಣ, ಆಡಳಿತಾಧಿಕಾರಿ ವಿ.ಬಿ. ಮಹಾಲಿಂಗಯ್ಯ, ವಕೀಲ ಎಸ್. ಜಯಣ್ಣ, ದೇವಪ್ರಸಾದ್, ವ್ಯವಸ್ಥಾಪಕ ದಕ್ಷಿಣಮೂರ್ತಿ, ವೇ. ರವಿ ಶಂಕರ್, ಪಿಆರ್‌ಒ ಪಟೇಲ್ ತೀರ್ಥ, ಸಂಯೋಜಕ ಡಾ. ಎಲ್.ಎಂ. ವೆಂಕಟೇಶ್ ಸೇರಿದಂತೆ ಮಠದ ಭಕ್ತರು ಉಪಸ್ಥಿತರಿದ್ದರು.

28/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 50 ವರ್ಷಗಳಿಂದ ತಮ್ಮ ಜೀವನವನ್ನು ಸಮಾಜಕ್ಕೆ ಮುಡಿಪಾಗಿಟ್ಟ ನಾಯಕರು

ಚಿತ್ರದುರ್ಗ

ಚಿತ್ರದುರ್ಗದ ಪುಣ್ಯಭೂಮಿಯಲ್ಲಿ ಮಾಜಿ ಮುಖ್ಯಮಂತ್ರಿ, ರೈತ ನೇತಾರ, ಛಲದಂಕ ಮಲ್ಲ ಬಿ.ಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವವು ಮೇ 9 ರಂದು ನಡೆಯಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ.

ಚಿತ್ರದುರ್ಗದಲ್ಲಿ ನಡೆಯುವ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಸಂಬಂಧಿಸಿ ಪೆಂಡಾಲ್, ಟೆಂಟ್ ನಿರ್ಮಾಣ ಸೇರಿ ಪೂರ್ವತಯಾರಿ ಸಂಬಂಧ ಇಂದು ನಡೆದ ಭೂಮಿಪೂಜೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಈ ಶುಭಸಂದರ್ಭದಲ್ಲಿ ಸ್ವಾಮೀಜಿಗಳ ಉಪಸ್ಥಿತಿಯಲ್ಲಿ ಭೂಮಿಪೂಜೆ ನೆರವೇರಿಸುತ್ತಿರುವುದಾಗಿ ಹೇಳಿದರು.

ಕರ್ನಾಟಕದಲ್ಲಿ ಹೋರಾಟಕ್ಕೆ ಮತ್ತೊಂದು ಹೆಸರು ಅದು ಬಿ.ಎಸ್.ಯಡಿಯೂರಪ್ಪ. ಛಲಕ್ಕೆ ಮತ್ತೊಂದು ಹೆಸರು ಅದು ಬಿ.ಎಸ್. ಯಡಿಯೂರಪ್ಪ. ಜನಸೇವೆಗೆ ಮತ್ತೊಂದು ಹೆಸರು ಅದು ಬಿ.ಎಸ್.ಯಡಿಯೂರಪ್ಪ. ಕಳೆದ 50 ವರ್ಷಗಳಿಂದ ತಮ್ಮ ಜೀವನವನ್ನು ಸಮಾಜಕ್ಕೆ ಮುಡಿಪಾಗಿಟ್ಟು ರಾಜ್ಯದ ಬಡವರು, ದೀನದಲಿತರು, ಪರಿಶಿಷ್ಟ ಜಾತಿ, ಪಂಗಡದವರು, ಹಿಂದುಳಿದವರು, ಮಹಿಳೆಯರ ಏಳಿಗೆಗಾಗಿ ಶ್ರಮಿಸಿದ್ದಾರೆ. ರಾಜ್ಯದ ಬಡವರ ಧ್ವನಿಯಾಗಿ ತನ್ನೆಲ್ಲವನ್ನು ಸಮರ್ಪಿಸಿದ ಏಕೈಕ ನಾಯಕ ಬಿ.ಎಸ್. ಯಡಿಯೂರಪ್ಪ ಎಂದು ವಿಶ್ಲೇಷಿಸಿದರು.

ಪ್ರಾಮಾಣಿಕವಾಗಿ ಬಡವರ ಕಣ್ಣೀರು ಒರೆಸುವ ಕೆಲಸ..



ಯಡಿಯೂರಪ್ಪ ಅವರು ಅಧಿಕಾರಕ್ಕೋಸ್ಕರ ಜೀವನದಲ್ಲಿ ಹೋರಾಟ ಮಾಡಲಿಲ್ಲ. ಪ್ರಾಮಾಣಿಕವಾಗಿ ಬಡವರ ಕಣ್ಣೀರು ಒರೆಸುವ ಕೆಲಸ ಮಾಡಿದರು. ಧ್ವನಿ ಇಲ್ಲದ ಸಮುದಾಯಗಳ ಧ್ವನಿಯಾಗಿ ಕೆಲಸ ಮಾಡಿದರು. ರಾಜ್ಯದ ಜನರ ಪ್ರೀತಿ ವಿಶ್ವಾಸದ ಮೂಲಕ ಅಧಿಕಾರಕ್ಕೆ ಬರಲು ಸಾಧ್ಯ ಎಂಬುದನ್ನು ತೋರಿಸಿಕೊಟ್ಟ ನಾಯಕ ಯಡಿಯೂರಪ್ಪ ಅವರು ಎಂದು ವಿವರಿಸಿದರು.

ಯಾವತ್ತೂ ಅವರು ಜೀವನದಲ್ಲಿ ತನ್ನ ಕುಟುಂಬದ ಬಗ್ಗೆ ಯೋಚನೆ ಮಾಡಲಿಲ್ಲ. ಕಾಲಿಗೆ ಚಕ್ರ ಕಟ್ಟಿಕೊಂಡು, ವರ್ಷ ಪೂರ್ತಿ ಪ್ರವಾಸ ಮಾಡಿಕೊಂಡವರು. ಗಣಪತಿ ಹಬ್ಬಕ್ಕೂ ಮನೆಗೆ ಹೋಗಲಿಲ್ಲ. ದೀಪಾವಳಿ ಆಚರಣೆ ಮನೆಯಲ್ಲಿ ಮಾಡಲಿಲ್ಲ ಎಂದು ಹೇಳಿದರು. ಹಬ್ಬ ಹರಿದಿನಗಳಲ್ಲೂ ರಾಜ್ಯವನ್ನು ಸುತ್ತಾಡಿ ಜನರ ಸಂಕಷ್ಟಕ್ಕೆ ಧ್ವನಿಯಾದವರು ಯಡಿಯೂರಪ್ಪನವರು ಎಂದು ತಿಳಿಸಿದರು.

ಬಿಜೆಪಿಯನ್ನು ದಕ್ಷಿಣ ಭಾರತದ ಹೆಬ್ಬಾಗಿಲು ಕರ್ನಾಟಕ ಎಂಬಂತೆ ಬೆಳೆಸಿದರು..

ಆ ಕಾರಣಕ್ಕೋಸ್ಕರ ನಗರಕ್ಕೆ ಸೀಮಿತವಾದ ಪಕ್ಷ ಎನಿಸಿಕೊಂಡಿದ್ದ ಬಿಜೆಪಿ, ಮುಂದುವರೆದ ಸಮಾಜಗಳಿಗೆ ಸೀಮಿತವಾದ ಪಕ್ಷ ಎನಿಸಿಕೊಂಡಿದ್ದ ಪಕ್ಷವನ್ನು ಬಡವರ, ರೈತರ, ಕೃಷಿ ಕಾರ್ಮಿಕರ, ಶೋಷಿತ ವರ್ಗಗಳ ಧ್ವನಿಯಾಗಿ ಹೋರಾಟ ಮಾಡುವ ಮುಖೇನ ಬಿಜೆಪಿಯನ್ನು ದಕ್ಷಿಣ ಭಾರತದ ಹೆಬ್ಬಾಗಿಲು ಕರ್ನಾಟಕ ಎಂದು ಇಡೀ ದೇಶಕ್ಕೆ ಸಾರುವ ಕೆಲಸವನ್ನು ಸನ್ಮಾನ್ಯ ಯಡಿಯೂರಪ್ಪ ಅವರು ಮಾಡಿದ್ದಾರೆ ಎಂದರು.

ಅಂಥ ಹೋರಾಟಗಾರರ ಸೇವೆಯನ್ನು ಸ್ಮರಿಸಬೇಕು. ಅಂಥ ಒಬ್ಬ ಛಲಗಾರ ಯಡಿಯೂರಪ್ಪನವರು ಎಂದು ವಿಶ್ಲೇಷಣೆ ಮಾಡಿದರು. ಜೀವನದ ಎಲ್ಲ ಸವಾಲುಗಳನ್ನು ಮೆಟ್ಟಿನಿಂತು ರಾಜಕೀಯ ಏಳುಬೀಳುಗಳ ನಡುವೆಯೂ ಬೆನ್ನು ತೋರಿಸದೇ, ಓಡಿ ಹೋಗದೇ, ಈ ಗಂಡುಮೆಟ್ಟಿನ ನೆಲದಲ್ಲಿ ಗಟ್ಟಿಯಾಗಿ ರಾಜಕಾರಣ ಮಾಡಿ ತೋರಿಸಿದ್ದಾರೆ ಎಂದು ಹೇಳಿದರು.

9ರಂದು ಊಟದ ವ್ಯವಸ್ಥೆ, ಕುಡಿಯುವ ನೀರು, ಮಜ್ಜಿಗೆ ವ್ಯವಸ್ಥೆ ಇದೆ. ಬಿಸಿಲು ತಾಪ ಇರುವ ಕಾರಣ ಶಾಮಿಯಾನ ಹಾಕಿ ಟೆಂಟ್ ನಿರ್ಮಾಣ ಮಾಡಲಾಗುತ್ತದೆ. 1.5 ಲಕ್ಷ ಜನರು ಕುಳಿತು ಊಟ ಮಾಡುವ ಊಟದ ಸಭಾಂಗಣವನ್ನೂ ನಿರ್ಮಿಸಲಾಗುತ್ತದೆ ಎಂದು ವಿವರ ನೀಡಿದರು.

ಉರಿ ಬಿಸಿಲನ್ನು ಲೆಕ್ಕಿಸದೇ ನಮ್ಮ ಯಡಿಯೂರಪ್ಪನವರ ಈ ಸಂಭ್ರಮೋತ್ಸವದಲ್ಲಿ ನಾವೆಲ್ಲರೂ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಮಾಜಿ ಉಪ ಮುಖ್ಯಮಂತ್ರಿ ಹಾಗೂ ಸಂಸದರಾದ ಗೋವಿಂದ ಕಾರಜೋಳ ಅವರು ಮಾತನಾಡಿ, ಅಭಿಮಾನೋತ್ಸವ ಕಾರ್ಯಕ್ರಮವನ್ನು ಅಭೂತಪೂರ್ವ ಹಾಗೂ ಐತಿಹಾಸಿಕವಾಗಿ ಆಯೋಜಿಸಲಾಗುತ್ತದೆ. ಇದನ್ನು ಯಶಸ್ವಿಗೊಳಿಸಲು ಎಲ್ಲ ಹಿರಿಯರು ಒಮ್ಮತದ ನಿರ್ಧಾರ ಮಾಡಿದ್ದೇವೆ. ಮೇ 9ರಂದು ಆಗಮಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಜೀ ಅವರು ಒಪ್ಪಿಗೆ ಕೊಟ್ಟಿದ್ದಾರೆ ಎಂದು ವಿವರಿಸಿದರು. ಯಡಿಯೂರಪ್ಪ ಅವರು ನಾಡಿನ ಜನರ ಪರವಾಗಿ ಏಕಾಂಗಿ ಹೋರಾಟ ಮಾಡಿದವರು. ರೈತರ, ದೀನದಲಿತರ, ಮಹಿಳೆಯರ ಸಮಸ್ಯೆಗಳ ಪರಿಹಾರಕ್ಕೆ ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದರು ಎಂದರು.

50 ವರ್ಷಗಳ ಕಾಲದ ರಾಜಕೀಯ ಜೀವನದಲ್ಲಿ ಸಾಕಷ್ಟು ಸಮಾಜಸೇವೆ ಮಾಡಿದವರು. ಅವರು ನಾಡಿನ ಅಭಿವೃದ್ಧಿಗೆ, ಪಕ್ಷದ ಬೆಳವಣಿಗೆಗೆ ನೀಡಿದ ಕೊಡುಗೆ ಪರಿಗಣಿಸಿ ಅಭಿಮಾನೋತ್ಸವ ಹಮ್ಮಿಕೊಂಡಿದ್ದೇವೆ. ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವುದು ಎಲ್ಲರ ಜವಾಬ್ದಾರಿ.

ರಾಜ್ಯದ 29 ಸಾವಿರ ಹಳ್ಳಿಗಳಿಂದ ಎಲ್ಲ ವರ್ಗದ ಜನರೂ ಭಾಗವಹಿಸಲಿದ್ದಾರೆ ಎಂದರುವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಮಾತನಾಡಿ, ಲಕ್ಷಾಂತರ ಜನರು ಅಭಿಮಾನೋತ್ಸವಕ್ಕೆ ಬರಲಿದ್ದಾರೆ. ಆಗಮಿಸುವವರಿಗೆ ಊಟೋಪಚಾರ ಸೇರಿ ಎಲ್ಲಾ ವ್ಯವಸ್ಥೆ ಮಾಡಲಾಗುವುದು. ಒಳ್ಳೆಯ ಕಾರ್ಯಕ್ರಮಕ್ಕೆ ಬಂದೆವು ಎಂದುಕೊಳ್ಳುವಂತಿರಬೇಕು. ಯಡಿಯೂರಪ್ಪ ಅವರ ಸಾಧನೆಗಳು ಜನರಿಗೆ ತಿಳಿಯಬೇಕು ಎಂದರು.

ವಿಧಾನ ಪರಿಷತ್ತಿನ ವಿರೋಧಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡಿ, ಓಬವ್ವನ ನಾಡಿನಲ್ಲಿ, ಮದಕರಿ ನಾಯಕರ ಬೀಡಿನಲ್ಲಿ ಬಿಎವೈ ಅಭಿಮಾನೋತ್ಸವ ನಡೆಯುತ್ತಿದೆ. ಬಿಜೆಪಿಗೆ ಅವರು ದೈವಸಂಕಲ್ಪದ ಕೊಡುಗೆ. ಅವರ ನಾಯಕತ್ವದಲ್ಲಿ ಅನೇಕ ಜನರು ಬೆಳೆದಿದ್ದಾರೆ. ಅಧಿಕಾರ ಅನುಭವಿಸಿದ್ದಾರೆ, ನಾಯಕತ್ವ ಕೊಟ್ಟಿದ್ದಾರೆ.

ಬಿಜೆಪಿಗೆ ಶಕ್ತಿ ನೀಡಿದ ಯಡಿಯೂರಪ್ಪ ಅವರಿಗೆ ಗೌರವ ಸಮರ್ಪಣೆ ಮಾಡಲಾಗುವುದು ಎಂದರು.

ಈಗಾಗಲೇ ಎಲ್ಲಾ ಸಿದ್ಧತೆಗಳು ಆರಂಭವಾಗಿವೆ. ಎಲ್ಲಾ ಮುಖಂಡರು ಬಹಳ ಉತ್ಸುಕತೆಯಿಂದ ಕೆಲಸ ಮಾಡುತ್ತಿದ್ದಾರೆ. ಈ ಅಭಿಮಾನೋತ್ಸವವು ಬಿಜೆಪಿ ಅಧಿಕಾರ ಹಿಡಿಯುವವರೆಗೆ ಸಾಗಬೇಕು. ಒಗ್ಗಟ್ಟಿನಿಂದ, ಒಮ್ಮತದಿಂದ ನಾವೆಲ್ಲ ಕೆಲಸ ಮಾಡೋಣ ಎಂದರು.

ಕೇಂದ್ರ ಮಾಜಿ ಸಚಿವ ಜಿ.ಎಂ.ಸಿದ್ದೇಶ್ವರ್ ಮಾತನಾಡಿ, ಬಿಎವೈ ಅವರ ಅಭಿಮಾನೋತ್ಸವಕ್ಕೆ ರಾಜ್ಯದ ಮೂಲೆಮೂಲೆಯಿಂದ ಜನರು ಬರಲಿದ್ದಾರೆ. ಯಡಿಯೂರಪ್ಪ ಅವರಿಗೆ ಜನರು ಅಭಿಮಾನದ ಮಹಾಪೂರ ಹರಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಾಜಿ ಸಚಿವ ಬಿ.ಶ್ರೀರಾಮುಲು ಅವರು ಮಾತನಾಡಿ, ಯಡಿಯೂರಪ್ಪ ಅವರು ಐವತ್ತು ವರ್ಷಗಳ ಕಾಲ ಸಮಾಜಸೇವೆ ಮಾಡಿದವರು. ಪಕ್ಷ ಸಂಘಟನೆಗೆ ದುಡಿದವರು. ಇದಕ್ಕೆಲ್ಲ ಅವರು ಪಟ್ಟ ಕಷ್ಟ ಸಾಕಷ್ಟು. ರಾಜ್ಯದಲ್ಲಿ ಬಿಜೆಪಿಯನ್ನು ಚಿರಪರಿಚಿತ ಮಾಡಿದವರು. ಬಿಎವೈ ಅವರು ಸಾಕಷ್ಟು ಹೋರಾಟದಲ್ಲಿ ಭಾಗವಹಿಸಿದವರು. ಕಾರ್ಯಕರ್ತರಿಗೆ ಶಕ್ತಿ ತುಂಬಿದವರು ಎಂದರು.

ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಅವರು ಮಾತನಾಡಿ, ಅಭಿಮಾನೋತ್ಸವವು ಐತಿಹಾಸಿಕ ಕಾರ್ಯಕ್ರಮವಾಗಬೇಕು. ಎಲ್ಲಾ ವಿಧಾನಸಭಾ ಕ್ಷೇತ್ರಗಳಿಂದ ಜನರು ಆಗಮಿಸಬೇಕು. ಬಿಎವೈ ಇಡೀ ರಾಜ್ಯದಲ್ಲಿ ಪಕ್ಷವನ್ನು ಕಟ್ಟಿ ಬೆಳೆಸಿದವರು. ಪಕ್ಷ ಮತ್ತು ಸರ್ಕಾರದಲ್ಲಿ ಹಲವು ಹುದ್ದೆ ನಿರ್ವಹಿಸಿದವರು. ನಾವೆಲ್ಲ ಈ ಅಭಿಮಾನೋತ್ಸವದ ಯಶಸ್ಸಿಗೆ ದುಡಿಯೋಣ ಎಂದರು.

ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು, ಮಾಜಿ ಸಂಸದರು, ಮಾಜಿ ಸಚಿವರು, ಮಾಜಿ ಶಾಸಕರು, ವಿಧಾನಪರಿಷತ್ ಮಾಜಿ ಸದಸ್ಯರು, ಪಕ್ಷದ ರಾಜ್ಯ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## ಟಿಕೆಟ್ ಕಲಕ್ಷನ್‌ಗೆ ಹೊಸ ಮಷೀನ್

ಬೆಂಗಳೂರು

ಬೆಂಗಳೂರಿಗರ ನೆಚ್ಚಿನ ಸಾರಿಗೆ ಎಂದರೆ ಅದು ನಮ್ಮ ಬಿಎಂಟಿಸಿ. ಬಿಎಂಟಿಸಿಯಲ್ಲಿ ಈ ಹಿಂದೆ ಕಂಡೆಕ್ಟರ್‌ಗಳ ಯುಪಿಐ ಕಳ್ಳಾಟ ಬಯಲಾಗಿತ್ತು. ಇದೀಗ ಕಳ್ಳಾಟಕ್ಕೆ ಬ್ರೇಕ್ ಹಾಕುವ ನಿಟ್ಟಿನಲ್ಲಿ ಡೈನಾಮಿಕ್ ಕ್ಯೂಆರ್ ಕೋಡ್ ಆಧಾರಿತ ಹೊಸ ಇಟಿಎಂ ಮಿಷನ್‌ಗಳನ್ನು ಇಲಾಖೆ ಪರಿಚಯಿಸುತ್ತಿದೆ. ಮುಂದಿನ ತಿಂಗಳಾಂತ್ಯಕ್ಕೆ ಎಲ್ಲಾ ಬಸ್‌ಗಳಲ್ಲಿಯೂ ಈ ಹೊಸ ಇಟಿಎಂಗಳು ಲಭ್ಯವಾಗಲಿವೆ.

ಬೃಹತ್ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಕಂಡೆಕ್ಟರ್‌ಗಳ ಕರಾಮತ್ತು ಹೆಚ್ಚಾಗಿದೆ. ತಮ್ಮ ಸ್ವಂತ ಯುಪಿಐ ಸ್ಕ್ಯಾನರ್ ನೀಡಿ ಜನರ ಟಿಕೆಟ್ ಹಣ ವಂಚಿಸಿದ್ದು ಬಟಾಬಯಲಾಗಿದೆ.

ಇಂತಹ ಫೇಕ್ ಟಿಕೆಟ್ ಮನಿ ಟ್ರಾನ್ಸರ್‌ಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಬಿಎಂಟಿಸಿ ಮಹತ್ವದ ಹೆಜ್ಜೆ ಇಟ್ಟಿದೆ. ಸುಮಾರು 11 ಸಾವಿರ ಅತ್ಯಾಧುನಿಕ ಸ್ಮಾರ್ಟ್ ಎಲೆಕ್ಟ್ರಾನಿಕ್ ಟಿಕೆಟ್ ಯಂತ್ರಗಳನ್ನು ಅಳವಡಿಸಲು ಮುಂದಾಗಿದೆ.

ಹೌದು, ಸುಮಾರು 40 ಕೋಟಿ ರೂ. ವೆಚ್ಚದಲ್ಲಿ ಮುಂಬೈ ಮೂಲದ ಚಲೋ ಅನ್ನೋ ಕಂಪನಿಗೆ ಟೆಂಡರ್ ನೀಡಲಾಗಿದೆ. ಈ ಕಂಪನಿಯು ಸದ್ಯ 400 ಇಟಿಎಂ ಅಂದರೆ ಎಲೆಕ್ಟ್ರಾನಿಕ್ ಟಿಕೆಟಿಂಗ್ ಮಿಷನ್‌ಗಳ ಪೈಲೆಟ್ ಟ್ರಯಲ್ ಅನ್ನು ನಡೆಸಲಾಗುತ್ತಿದೆ. ಯಶವಂತಪುರ ಡಿಪೋ ಸೇರಿದಂತೆ ಹತ್ತು ರೂಟ್‌ಗಳಲ್ಲಿ ಟ್ರಯಲ್ ನಡೆಸುತ್ತಿದೆ. ಟ್ರಯಲ್ ಕಾರ್ಯ ಮುಕ್ತಾಯದ ಹಂತ ತಲುಪಿದ್ದು, ಮೇ 30ರಿಂದ ಬಿಎಂಟಿಸಿಯ ಆರು ಸಾವಿರಕ್ಕೂ ಹೆಚ್ಚು ಬಸ್‌ಗಳಲ್ಲಿ ಇಟಿಎಂಗಳು ಲಭ್ಯವಾಗಲಿದೆ.

ಇಟಿಎಂಗಳು ಬಂದ ನಂತರ ಬಸ್‌ಗಳಲ್ಲಿ ಅಂಟಿಸಿರೋ ಎಲ್ಲಾ ಕ್ಯೂಆರ್ ಕೋಡ್ ತೆಗೆದು ಹಾಕಲಾಗುತ್ತಿದ್ದು, ಈ ಆಂಡ್ರಾಯ್ಡ್ ಸೌಲಭ್ಯದ ಇಟಿಎಂನಲ್ಲಿ ಅಳವಡಿಸಿರುವ ಡೈನಾಮಿಕ್ ಕ್ಯೂಆರ್ ಕೋಡ್ ಸ್ಕ್ಯಾನರ್ ಮಾಡಿದರೆ ಮಾತ್ರ ಟಿಕೆಟ್ ಜನರೇಟ್ ಆಗಲಿದೆಯಂತೆ.

ಒಟ್ಟಿನಲ್ಲಿ ಸದ್ಯ ಈ ಹೊಸ ಇಟಿಎಂಗಳ ಟ್ರಯಲ್ ಯಶಸ್ವಿಯಾಗುತ್ತಿದ್ದು, ಸಣ್ಣಪುಟ್ಟ ಲೋಪದೋಷ ಸರಿಪಡಿಸಿಕೊಂಡು ಮುಂದಿನ ತಿಂಗಳಾಂತ್ಯಕ್ಕೆ ಎಲ್ಲಾ ಬಸ್‌ಗಳಲ್ಲಿಯೂ ಹೊಸ ಸ್ಮಾರ್ಟ್ ಇಟಿಎಂಗಳನ್ನು ಜಾರಿಗೆ ತರಲು

## ಬಿ.ಎಸ್.ವೈ ಅಭಿಮಾನೋತ್ಸವ ಅಂಗವಾಗಿ ಐತಿಹಾಸಿಕ ಕಾರ್ಯಕ್ರಮ: ಗೋವಿಂದ ಕಾರಜೋಳ

ಚಿತ್ರದುರ್ಗ

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮವನ್ನು ಅಭೂತಪೂರ್ವ ಹಾಗೂ ಐತಿಹಾಸಿಕವಾಗಿ ಮೇ 9 ರಂದು ಚಿತ್ರದುರ್ಗದಲ್ಲಿ ಆಯೋಜಿಸಲಾಗಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಹಾಗೂ ಸಂಸದರಾದ ಗೋವಿಂದ ಕಾರಜೋಳ ಅವರು ತಿಳಿಸಿದ್ದಾರೆ.

ಬಿಎಸ್ ವೈ ಅಭಿಮಾನೋತ್ಸವದ ಹಿನ್ನೆಲೆಯಲ್ಲಿ ಸಮಾರಂಭದ ಸ್ಥಳದಲ್ಲಿ ಇಂದು ಭೂಮಿಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ಅವರು ಮಾಧ್ಯಮಗಳೊಂದಿಗೆ ಮಾತನಾಡಿದರು. ಅಭಿಮಾನೋತ್ಸವದಲ್ಲಿ ಕೇಂದ್ರ ಗೃಹ ಸಚಿವರಾದ ಅಮಿತ್ ಶಾ ಅವರು ಭಾಗವಹಿಸಿ ಉದ್ಘಾಟನೆ ನೆರವೇರಿಸಿ ಅಭಿಮಾನ ಸಮರ್ಪಣೆ ಮಾಡಲಿದ್ದಾರೆ. ರಾಜ್ಯದ ಕಾವೇರಿ ನದಿಯಿಂದ ಭೀಮಾ ನದಿವರೆಗಿನ ಜಿಲ್ಲೆಗಳ ಹತ್ತು ಲಕ್ಷಕ್ಕೂ ಹೆಚ್ಚು ಜನ ಸೇರಲಿದ್ದಾರೆ. ಹಿಂದೆಂದೂ ಇಂತಹ ಕಾರ್ಯಕ್ರಮ ಆಗಿರಲಿಲ್ಲ ಎಂಬಂತೆ ಅಭೂತಪೂರ್ವವಾಗಿ ಆಯೋಜಿಸಲಾಗುವುದು ಎಂದರು.

ಅಭಿಮಾನೋತ್ಸವದ ಸಿದ್ಧತೆಗಳು ಭರದಿಂದ ಸಾಗಿವೆ. ಅಸಂಖ್ಯ ಕಾರ್ಯಕರ್ತರು ಕೆಲಸಕ್ಕೆ ಸಿದ್ಧವಾಗಿದ್ದಾರೆ. ಅವರೆಲ್ಲ ಬಿಎಸ್‌ವೈ ಅವರ ಮೇಲಿನ ಅಭಿಮಾನದಿಂದ



ಸ್ವಯಂಪ್ರೇರಿತರಾಗಿ ತೊಡಗಿಸಿಕೊಂಡಿದ್ದಾರೆ. ಸಮಾರಂಭದಲ್ಲಿ ಸಂಸದರು, ಕೇಂದ್ರ ಸಚಿವರು, ಶಾಸಕರು, ಮಾಜಿ ಶಾಸಕರು, ಮಾಜಿ ಸಚಿವರು, ಪಕ್ಷದ ನೂರಾರು ಮುಖಂಡರು, ಬಿಎಸ್‌ವೈ ಅವರ ಅಭಿಮಾನಿಗಳು, ರೈತರು, ಮಹಿಳೆಯರು ಭಾಗವಹಿಸಲಿದ್ದಾರೆ ಎಂದು ವಿವರಿಸಿದರು.

ನಾಡಿನ ಹಿರಿಯ ಮುತ್ಸದ್ದಿಗೆ ಗೌರವ ಸಲ್ಲಿಸುವ ಈ ಅಭೂತಪೂರ್ವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಎಲ್ಲರೂ ಸಹಕರಿಸಿ ಎಂದು ಮನವಿ ಮಾಡಿದರು.

## ಜಿಬಿಎ ಚುನಾವಣೆ ಮತ್ತೆ ವಿಳಂಬ...?

ಬೆಂಗಳೂರು

ರಾಜ್ಯ ರಾಜಧಾನಿಯ ಆಡಳಿತಾತ್ಮಕ ಬದಲಾವಣೆಯ ನಂತರ ಕುತೂಹಲ ಕೆರಳಿಸಿದ್ದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮತ್ತು ಐದು ನಗರ ಪಾಲಿಕೆಗಳ ಚುನಾವಣೆಗೆ ಈಗ ಗ್ರಹಣ ಹಿಡಿದಿದೆ. ಜೂನ್ 30ರೊಳಗೆ ಚುನಾವಣೆ ನಡೆಸಬೇಕೆಂಬ ಸುಪ್ರೀಂ ಕೋರ್ಟ್ ಆದೇಶವಿದ್ದರೂ ಸದ್ಯದ ಪರಿಸ್ಥಿತಿಯಲ್ಲಿ ಅದು ಅಸಾಧ್ಯ ಎಂದು ರಾಜ್ಯ ಚುನಾವಣಾ ಆಯೋಗವು ನ್ಯಾಯಾಲಯಕ್ಕೆ ಅಳಲು ತೋಡಿಕೊಂಡಿದೆ.

ಚುನಾವಣಾ ಆಯೋಗವು ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿರುವ ಮಾಹಿತಿಯ ಪ್ರಕಾರ, ಚುನಾವಣಾ ಪ್ರಕ್ರಿಯೆ ನಡೆಸಲು ಆಯೋಗದ ಬಳಿ ಹಣದ ಕೊರತೆ ಎದುರಾಗಿದೆ. ಇದರ ಜೊತೆಗೆ, ಬೃಹತ್ ಮಟ್ಟದ ಮತದಾನ ಪ್ರಕ್ರಿಯೆ ನಿಭಾಯಿಸಲು ಅಗತ್ಯವಿರುವ ಸಿಬ್ಬಂದಿ ಬಲವೂ ಇಲ್ಲದಿರುವುದು ಆಯೋಗವನ್ನು ಇಕ್ಕಟ್ಟಿಗೆ ಸಿಲುಕಿಸಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ಸಕ್ರಿಯ ಬೆಂಬಲ ಮತ್ತು ಅನುದಾನ ಅತ್ಯಗತ್ಯ ಎಂದು ಆಯೋಗ ತಿಳಿಸಿದೆ.

ರಾಜ್ಯದಲ್ಲಿ ಸದ್ಯ ನಡೆಯುತ್ತಿರುವ ಜನಗಣತಿ ಕಾರ್ಯವು ಮೇ 15ರೊಳಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ. ಜನಗಣತಿ ಕಾರ್ಯದಲ್ಲಿ ಬಹುತೇಕ ಸರ್ಕಾರಿ ಸಿಬ್ಬಂದಿ ತೊಡಗಿರುವುದರಿಂದ ಅದು ಮುಗಿಯುವವರೆಗೆ ಚುನಾವಣಾ ಕೆಲಸಗಳಿಗೆ ಸಿಬ್ಬಂದಿ ನಿಯೋಜನೆ ಕಷ್ಟಸಾಧ್ಯವಾಗಿದೆ.

ಹೀಗಾಗಿ ಮೇ 15ರ ನಂತರವಷ್ಟೇ ಐದು ಪಾಲಿಕೆಗಳ ಚುನಾವಣಾ ಪೂರ್ವಸಿದ್ಧತೆಗಳನ್ನು ಆರಂಭಿಸಲು ಆಯೋಗ ನಿರ್ಧರಿಸಿದೆ.

ಬೆಂಗಳೂರು ನಗರ ಪಾಲಿಕೆ ಚುನಾವಣೆ ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ 2026ರ ಜನವರಿ 12ರಂದು ವಿಚಾರಣೆ ನಡೆಸಿದ್ದ ಸುಪ್ರೀಂ ಕೋರ್ಟ್ ನ್ಯಾಯಪೀಠವು, ಜೂನ್ 30ರೊಳಗೆ ಕಡ್ಡಾಯವಾಗಿ ಚುನಾವಣೆ ನಡೆಸುವಂತೆ ನಿರ್ದೇಶನ ನೀಡಿತ್ತು. ಆದರೆ ಈಗ ಎದುರಾಗಿರುವ ತಾಂತ್ರಿಕ ಮತ್ತು ಆರ್ಥಿಕ ಕಾರಣಗಳಿಂದಾಗಿ ಈ ಗಡುವಿನೊಳಗೆ ಚುನಾವಣೆ ಮುಗಿಸುವುದು ಆಯೋಗಕ್ಕೆ ಸವಾಲಾಗಿ ಪರಿಣಮಿಸಿದೆ.

ಸರ್ಕಾರದ ಆರ್ಥಿಕ ನೆರವು ಮತ್ತು ಸಿಬ್ಬಂದಿ ನಿಯೋಜನೆಯಲ್ಲಿ ವಿಳಂಬವಾದರೆ ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಮತದಾರರು ಜನಪ್ರತಿನಿಧಿಗಳ ಆಯ್ಕೆಗಾಗಿ ಇನ್ನೂ ಕೆಲವು ತಿಂಗಳು

## ಪೇಟಿಎಂ ಬ್ಯಾಂಕಿಂಗ್ ಪರವಾನಗಿ ರದ್ದು

ನವದೆಹಲಿ

ನಿಯಮಗಳನ್ನು ನಿರಂತರ ಉಲ್ಲಂಘನೆ ಮಾಡಿದ್ದಕ್ಕೆ ಏಪ್ರಿಲ್ 24 ರಿಂದ ಜಾರಿಗೆ ಬರುವಂತೆ ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ಲಿಮಿಟೆಡ್‌ಗೆ ನೀಡಿದ್ದ ಬ್ಯಾಂಕಿಂಗ್ ಪರವಾನಗಿಯನ್ನು ಭಾರತೀಯ ರಿಸರ್ವ್ ಬ್ಯಾಂಕ್ ರದ್ದುಗೊಳಿಸಿದೆ.

ಬ್ಯಾಂಕಿನ ವ್ಯವಹಾರಗಳು ಹಾನಿಕಾರಕ ರೀತಿಯಲ್ಲಿ ನಡೆದಿದ್ದು, ಇದು ಠೇವಣಿದಾರರು ಮತ್ತು ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿದೆ. ಬ್ಯಾಂಕ್ ಪದೇ ಪದೇ ಮಾರ್ಗಸೂಚಿಗಳನ್ನು ಅನುಸರಿಸುವಲ್ಲಿ ವಿಫಲವಾಗಿದೆ ಎಂದು ಹೇಳಿ ಆರ್‌ಬಿಐ ಬ್ಯಾಂಕಿನ ಪರವಾನಗಿಯನ್ನು ಅಧಿಕೃತವಾಗಿ ರದ್ದುಗೊಳಿಸಿದೆ.

ಈ ಕ್ರಮವು ಪೇಟಿಎಂ ಪೇಮೆಂಟ್ಸ್ ಬ್ಯಾಂಕ್‌ಗೆ ಮಾತ್ರ ಅನ್ವಯಿಸುತ್ತದೆ. ಪೇಟಿಎಂ ಆಪ್, ಪೇಟಿಎಂ ಯುಪಿಐ , ಮತ್ತು ಇತರ ಮರ್ಚೆಂಟ್ ಸೇವೆಗಳು ಎಂದಿನಂತೆ ಕಾರ್ಯನಿರ್ವಹಿಸಲಿವೆ.

ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ಆರ್‌ಬಿಐ ಅಡಿಯಲ್ಲಿ ಬರುವ ವಿಶೇಷ ಬ್ಯಾಂಕ್ ಆಗಿತ್ತು. ಇದು ಸಾಮಾನ್ಯ ಬ್ಯಾಂಕುಗಳಿಗಿಂತ ಸ್ವಲ್ಪ ಭಿನ್ನವಾಗಿ ಕಾರ್ಯನಿರ್ವಹಿಸುತ್ತಿತ್ತು.ಇವು ಗ್ರಾಹಕರಿಂದ ಠೇವಣಿ ಸ್ವೀಕರಿಸಲು ಅನುಮತಿ ಇತ್ತು.

## ಜನಿವಾರ ತೆಗೆಸಿದ್ದ ಮೂವರ ಬಂಧನ

ಬೆಂಗಳೂರು

ಖಾಸಗಿ ಕಾಲೇಜಿನಲ್ಲಿ ಸಿಇಟಿ ಪರೀಕ್ಷೆ ವೇಳೆ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಘಟನೆ ಸಂಬಂಧ ಮಡಿವಾಳ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಪ್ರಕರಣ ದಾಖಲು ಮಾಡಿಕೊಂಡ ಪೊಲೀಸರು ಮೂವರನ್ನು ಬಂಧಿಸಿದ್ದಾರೆ. ಪರಿ ವೀಕ್ಷಕರಾದ ಸರಿತಾ, ಗಿರಿಜಮ್ಮ, ಪರೀಕ್ಷಾ ಕೇಂದ್ರದ ಉಸ್ತುವಾರಿ ಸುಧಾಕರ್ ಬಂಧಿತ ಆರೋಪಿಗಳು.

ವಿದ್ಯಾರ್ಥಿ ನೀಡಿದ ದೂರಿನ ಅನ್ವಯ ಬಿಎನ್‌ಎಸ್ 299, 302 ರೆಡ್ ವಿತ್ 3 ಚಿಟಿಜ 5 ಅಡಿಯಲ್ಲಿ ಕೇಸ್ ದಾಖಲು ಮಾಡಲಾಗಿದೆ.

ನಿನ್ನೆ ಸಿಇಟಿ ಪರೀಕ್ಷೆ ವೇಳೆ ಮಡಿವಾಳದ ಕೃಪನಿಧಿ ಕಾಲೇಜಿನಲ್ಲಿ ಮೂವರು ವಿದ್ಯಾರ್ಥಿಗಳಿಗೆ ಜನಿವಾರ ಧರಿಸಲು ಅವಕಾಶ ಇಲ್ಲ.. ತೆಗೆದು ಪರೀಕ್ಷೆ ಬರೆಯಬೇಕು.

## ವಿದ್ಯುತ್‌ಬಿಲ್ ಹಾಗೂ ಪಾವತಿಗಳಲ್ಲಿ ಭಾರೀ ವ್ಯತ್ಯಾಸ

ಬೆಂಗಳೂರು

ಗ್ರಾಮ ಪಂಚಾಯಿತಿಗಳ ಬೀದಿ ದೀಪಗಳು ಮತ್ತು ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಗಳ ವಿದ್ಯುತ್ ಬಿಲ್ ಹಾಗೂ ಪಾವತಿಗಳಲ್ಲಿ ಭಾರೀ ವ್ಯತ್ಯಾಸಗಳು ಕಂಡುಬಂದಿರುವ ಹಿನ್ನೆಲೆಯಲ್ಲಿ, ಉಂಟಾಗಿರುವ ಸಾವಿರಾರು ಕೋಟಿ ರೂಪಾಯಿ ಬಡ್ಡಿ ಮೊತ್ತವನ್ನು "ತಪ್ಪಿಸಬಹುದಾದ ಹೊರೆ" ಎಂದು ರಾಜ್ಯ ಹಣಕಾಸು ಆಯೋಗ (ಎಸ್‌ಎಫ್‌ಸಿ) ಗಂಭೀರವಾಗಿ ಪರಿಗಣಿಸಿದೆ.

ಈ ಹಿನ್ನೆಲೆಯಲ್ಲಿ ವಿದ್ಯುತ್ ಬಿಲ್ಲಿಂಗ್ ಹಾಗೂ ಪಾವತಿ ಪ್ರಕ್ರಿಯೆಗಳ ಕುರಿತು ಉನ್ನತ ಮಟ್ಟದ ತನಿಖೆ ನಡೆಸುವಂತೆ ಸರ್ಕಾರಕ್ಕೆ ಆಯೋಗ ಶಿಫಾರಸು ಮಾಡಿದೆ.

ಮಾಜಿ ಸಂಸದ ಸಿ. ನರಾಯಣಸ್ವಾಮಿ ನೇತೃತ್ವದ ಮೂರು ಸದಸ್ಯರ ಎಸ್‌ಎಫ್‌ಸಿ, ಅಧಿಕಾರಿಗಳ ನಡುವಿನ ಸಮನ್ವಯ ಕೊರತೆಯಿಂದಾಗಿ ದೊಡ್ಡ ಮಟ್ಟದ ಅಸಂಗತತೆಗಳು ಉಂಟಾಗಿ ಭಾರೀ ಬಡ್ಡಿ ಹೊರೆ ಸೃಷ್ಟಿಯಾಗಿರುವುದಾಗಿ ತನ್ನ ವರದಿಯಲ್ಲಿ ಹೇಳಿದೆ. ಈ ಬಡ್ಡಿ ಮೊತ್ತವು ಸಾವಿರಾರು ಕೋಟಿ ರೂಪಾಯಿಗಳ ಮಟ್ಟಕ್ಕೆ ತಲುಪಿರುವುದಾಗಿ ಆಯೋಗ ಆತಂಕ ವ್ಯಕ್ತಪಡಿಸಿದೆ.

ಗ್ರಾಮ ಪಂಚಾಯಿತಿಗಳಿಗೆ ರಾಜ್ಯ ಹಣಕಾಸು ಆಯೋಗ ಹಾಗೂ ಕೇಂದ್ರ ಹಣಕಾಸು ಆಯೋಗದಿಂದ ಬರುವ ಅನುದಾನಗಳ ದೊಡ್ಡ ಭಾಗವೇ ವಿದ್ಯುತ್ ಬಿಲ್ ಪಾವತಿಗೆ, ಅದರಲ್ಲೂ ಬಡ್ಡಿ ಮೊತ್ತ ಪಾವತಿಗೆ ಬಳಸಲಾಗುತ್ತಿದೆ ಎಂದು ಎಸ್‌ಎಫ್‌ಸಿ ತಿಳಿಸಿದೆ. ಇದರಿಂದಾಗಿ ಗ್ರಾಮೀಣ ಅಭಿವೃದ್ಧಿ ಹಾಗೂ ಮೂಲಸೌಕರ್ಯ ಸುಧಾರಣೆಗೆ ಅಗತ್ಯವಿದ್ದ ಹಣ ಕಡಿಮೆಯಾಗುತ್ತಿರುವುದಾಗಿ ಅದು ಸೂಚಿಸಿದೆ.



ವಿದ್ಯುತ್ ಬಿಲ್ ಪಾವತಿ, ಲೆಕ್ಕಪರಿಶೋಧನೆ ಹಾಗೂ ಸಂಬಂಧಿತ ಎಲ್ಲಾ ಪ್ರಕ್ರಿಯೆಗಳನ್ನು ಒಳಗೊಂಡಂತೆ ಸಮಗ್ರ ತನಿಖೆ ನಡೆಸಬೇಕು ಎಂದು ಶಿಫಾರಸು ಮಾಡಿರುವ ಆಯೋಗ, "ಗಂಭೀರ ಲೋಪಗಳನ್ನು ಗುರುತಿಸಿ ಹೊಣೆಗಾರಿಕೆ ನಿಗದಿಪಡಿಸುವುದು ಅಗತ್ಯ" ಎಂದು ಹೇಳಿದೆ.

ಬೆಳಗಾವಿ ಮತ್ತು ದಾವಣಗೆರೆ ಜಿಲ್ಲಾ ಪಂಚಾಯಿತಿಗಳು ಕೈಗೊಂಡ ಎನರ್ಜಿ ಆಡಿಟ್ ಕಾರ್ಯವನ್ನು ಪ್ರಶಂಸಿಸಿರುವ ಎಸ್‌ಎಫ್‌ಸಿ, ಅಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ವರ್ಷಕ್ಕೆ ಸರಾಸರಿ 2.58 ಲಕ್ಷ ಉಳಿತಾಯ ಸಾಧ್ಯವಾಗಿರುವುದನ್ನು ವರದಿಯಲ್ಲಿ ಉಲ್ಲೇಖಿಸಿದೆ. ಈ ವಿಧಾನವನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೂ ವಿಸ್ತರಿಸಿದರೆ ವರ್ಷಕ್ಕೆ ಸುಮಾರು ರೂ.155 ಕೋಟಿ ಉಳಿತಾಯ ಸಾಧ್ಯವಿದೆ ಎಂದು ಅದು ತಿಳಿಸಿದೆ.

2015 ಏಪ್ರಿಲ್ 1ರಿಂದ 2023 ಮಾರ್ಚ್ 31ರವರೆಗೆ ರಾಜ್ಯದ ಐದು ಎಸ್ಕಾಂಗಳು ಒಟ್ಟು ರೂ.6,509.90 ಕೋಟಿ ವಿದ್ಯುತ್ ಬಾಕಿ ಬೇಡಿಕೆ ಸಲ್ಲಿಸಿದ್ದು, ಅದರಲ್ಲಿ ರೂ.1,252 ಕೋಟಿ ಬಡ್ಡಿ ಮೊತ್ತವೂ ಸೇರಿದೆ ಎಂದು ಆಯೋಗ ತಿಳಿಸಿದೆ. ಆದರೆ ಸರ್ಕಾರವು ಸಿಕ್ಯುರಿಟೈಸೇಶನ್ ಆದೇಶದ ಮೂಲಕ ಈ ಬಡ್ಡಿ ಬಾಕಿಯನ್ನು ಮನ್ನಾ ಮಾಡಿರುವುದನ್ನೂ ಅದು ಉಲ್ಲೇಖಿಸಿದೆ. ಮೀಟರ್ ಅಳವಡಿಕೆ ಕೊರತೆಯಿಂದಾಗಿ ಕಾರ್ಯನಿರ್ವಹಿಸದ ಹಾಗೂ ಒಣಗಿ ಹೋಗಿರುವ ಬೋರ್‌ವೆಲ್‌ಗಳಿಗೂ ವಿದ್ಯುತ್ ಬಳಕೆಯ ಬಿಲ್ ವಿಧಿಸಿರುವುದನ್ನು ಎಸ್‌ಎಫ್‌ಸಿ ಗಮನಕ್ಕೆ ತಂದಿದೆ. ಆದ್ದರಿಂದ ಎಲ್ಲಾ ಬೀದಿ ದೀಪಗಳು ಮತ್ತು ಕುಡಿಯುವ ನೀರಿನ ವ್ಯವಸ್ಥೆಗಳಿಗೆ ಕಡ್ಡಾಯವಾಗಿ ಮೀಟರ್ ಅಳವಡಿಸಬೇಕು ಹಾಗೂ ಫ್ಲಾಟ್ ದರ ಆಧಾರಿತ ಬಿಲ್ಲಿಂಗ್ ವ್ಯವಸ್ಥೆಯನ್ನು ಸ್ಥಗಿತಗೊಳಿಸಬೇಕು ಎಂದು ಶಿಫಾರಸು ಮಾಡಿದೆ.

ಇದೇ ವೇಳೆ 'ಹೊಂಬೆಳಕು' ಯೋಜನೆಯಡಿ ಇರುವ ಸಾಂಪ್ರದಾಯಿಕ ದೀಪಗಳನ್ನು ಎಲ್‌ಇಡಿ ಹಾಗೂ ಸೌರಶಕ್ತಿ ಆಧಾರಿತ ದೀಪಗಳಿಂದ ಬದಲಾಯಿಸುವ ಮೂಲಕ ವಿದ್ಯುತ್ ಉಳಿತಾಯ ಕ್ರಮಗಳನ್ನು ಬಲಪಡಿಸಬೇಕು ಎಂದೂ ಆಯೋಗ ಸೂಚಿಸಿದೆ.

**ಬೆಳಗಾವಿ ಮತ್ತು ದಾವಣಗೆರೆ ಜಿಲ್ಲಾ ಪಂಚಾಯಿತಿಗಳು ಕೈಗೊಂಡ ಎನರ್ಜಿ ಆಡಿಟ್ ಕಾರ್ಯವನ್ನು ಪ್ರಶಂಸಿಸಿರುವ ಎಸ್‌ಎಫ್‌ಸಿ, ಅಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ವರ್ಷಕ್ಕೆ ಸರಾಸರಿ 2.58 ಲಕ್ಷ ಉಳಿತಾಯ ಸಾಧ್ಯವಾಗಿರುವುದನ್ನು ವರದಿಯಲ್ಲಿ ಉಲ್ಲೇಖಿಸಿದೆ. ಈ ವಿಧಾನವನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೂ ವಿಸ್ತರಿಸಿದರೆ ವರ್ಷಕ್ಕೆ ಸುಮಾರು ರೂ.155 ಕೋಟಿ ಉಳಿತಾಯ ಸಾಧ್ಯವಿದೆ ಎಂದು ಅದು ತಿಳಿಸಿದೆ.**

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy